ಬಳ್ಳಾರಿ- ವಿಜಯನಗರ-ಕೊಪ್ಪಳ ಜಿಲ್ಲೆಗಳ ಆವೃತ್ತಿ

ಇಂಟರ್ ನೆಟ್ 'ಸಂಜೆವಾಣಿ' ನಂ.1ದ ವರ್ಲ್ಡ್ ಕಿಯೋಸ್ಕ್

# ಸಂಜೆವಾಣಿ

1982

ಬಳ್ಳಾರಿ-ಬೆಂಗಳೂರು - ಹುಬ್ಬಳ್ಳಿ - ಕಲಬುರಗಿ - ಮೈಸೂರು - ಮಂಗಳೂರು - ದಾವಣಗೆರೆ - ತುಮಕೂರು - ರಾಯಚೂರು -ಶಿವಮೊಗ್ಗ -ವಿಜಯನಗರ

http://www.sanjevani.com

ಸಂಜೆವಾಣಿ ಜಾಹೀರಾತಿಗಾಗಿ ಸಂಪರ್ಕಿಸಿರಿ

ಸಮಸ್ತ ಜನತೆಯ ಹೆಮ್ಮೆಯ ಸಂಜೆ ದಿನಪತ್ರಿಕೆ
ಸಂಜೆವಾಣಿಯಲ್ಲಿ ಜಾಹೀರಾತು ನೀಡಲು ಕೂಡಲೇ ಸಂಪರ್ಕಿಸಿ.

ಸಂಜೆವಾಣಿ ದೈನಿಕ,ನಂ.2 ವಿಶ್ವೇಶ್ವರಯ್ಯ ಲಾರಿ ಟರ್ಮಿನಲ್
ಕೆ.ಎಸ್.ಆರ್.ಟಿ.ಸಿ. ನೂತನ ಬಸ್‌ಸ್ಟ್ಯಾಂಡ್ ಹತ್ತಿರ, ಬಳ್ಳಾರಿ.
ಮೊ: 9449871850, 9449871908.

ಹೊಸಪೇಟೆ : 9448717137. ಸಂಡೂರು : 9844229673
ಕೂಡ್ಲಿಗಿ : 9902797033 ಸಿರುಗುಪ್ಪ : 9019180080
ಹೆಚ್.ಬಿ.ಹಳ್ಳಿ : 9886062459 ಕುರುಗೋಡು : 9980154607

ಬಳ್ಳಾರಿ ಮಂಗಳವಾರ 22-09-2026 ಕನ್ನಡ ದಿನಪತ್ರಿಕೆ ಬೆಲೆ 2.00 ರೂ. ಸಂಪುಟ 28 ಸಂಚಿಕೆ 305 ಪುಟ: 6 Ph:9449871850, 9449871909, RNI No-69151/97. Title code:KARKAN04393 / Bellary / E-mail: bellary@sanjevani.com

## ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಭಾರತಕ್ಕೆ ಖಾಯಂ ಸ್ಥಾನಕ್ಕೆ ವಿ4 ಬೆಂಬಲ



ನ್ಯೂಯಾರ್ಕ್, ಸೆ.22: ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಭಾರತಕ್ಕೆ ಖಾಯಂ ಸ್ಥಾನ ನೀಡುವ ಭಾರತದ ಬೇಡಿಕೆಗೆ ಯುರೋಪ್‌ನ ನಾಲ್ಕು ರಾಷ್ಟ್ರಗಳ ಒಕ್ಕೂಟವಾದ ವಿಸೆಗ್ರಾಡ್ ಗ್ರೂಪ್-ವಿ4 ಬೆಂಬಲ ವ್ಯಕ್ತಪಡಿಸಿದೆ.

ವಿಶ್ವಸಂಸ್ಥೆಯ 81ನೇ ಸಾಮಾನ್ಯ ಸಭೆಯ ಉನ್ನತ ಮಟ್ಟದ ಅಧಿವೇಶನದ ಸಂದರ್ಭದಲ್ಲಿ ನ್ಯೂಯಾರ್ಕ್‌ನಲ್ಲಿ ನಡೆದ ಮೊದಲ ವಿ4-ಭಾರತ ವಿದೇಶಾಂಗ ಸಚಿವರ ಸಭೆಯಲ್ಲಿ ಈ ಬೆಂಬಲ ವ್ಯಕ್ತವಾಗಿದೆ.

ಪೋಲೆಂಡ್, ಹಂಗೇರಿ, ಸ್ಲೊವಾಕಿಯಾ ಮತ್ತು ಜೆಚಿಯಾ ವಿ4 ಒಕ್ಕೂಟದ ಸದಸ್ಯ ರಾಷ್ಟ್ರಗಳಾಗಿವೆ. ಸ್ಲೊವಾಕಿಯಾದ ವಿದೇಶಾಂಗ ಸಚಿವ ಜುರಾಜ್ ಬ್ಲನಾರ್ ಮಾತನಾಡಿ, ಜಾಗತಿಕ ದಕ್ಷಿಣದ ಪ್ರಮುಖ ರಾಷ್ಟ್ರವಾಗಿರುವ ಹಾಗೂ ಇಂಡೋ-ಪೆಸಿಫಿಕ್ ಪ್ರದೇಶದಲ್ಲಿ ಉದಯೋನ್ಮುಖ ಶಕ್ತಿಯಾಗಿರುವ ಭಾರತಕ್ಕೆ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಖಾಯಂ ಸದಸ್ಯತ್ವ ಇರಬೇಕು ಎಂದು ಹೇಳಿದ್ದಾರೆ.

ಭಾರತದ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಅವರು ವಿ4-ಭಾರತ ಸಭೆಯನ್ನು “”ಹೊಸ ಐತಿಹಾಸಿಕ ಸಂದರ್ಭ'' ಎಂದು ಬಣ್ಣಿಸಿದ್ದಾರೆ. ಸಭೆಯಲ್ಲಿ ರಾಜಕೀಯ, ಆರ್ಥಿಕತೆ, ರಕ್ಷಣೆ, ತಂತ್ರಜ್ಞಾನ, ಬಾಹ್ಯಾಕಾಶ, ಸಂಪರ್ಕ ಹಾಗೂ ಜನರ ನಡುವಿನ ಬಾಂಧವ್ಯ ಸೇರಿದಂತೆ ವಿವಿಧ ಕ್ಷೇತ್ರಗಳ ಸಹಕಾರ ಕುರಿತು ಚರ್ಚಿಸಲಾಯಿತು.

ಭಾರತ ಮತ್ತು ವಿ4 ರಾಷ್ಟ್ರಗಳ ನಡುವೆ ವಾರ್ಷಿಕ ವ್ಯವಹಾರ ವೇದಿಕೆ ಆಯೋಜಿಸಲು ಸಭೆಯಲ್ಲಿ ಒಮ್ಮತ ವ್ಯಕ್ತವಾಗಿದೆ. ವಿದೇಶಾಂಗ ಸಚಿವರು ವಾರ್ಷಿಕವಾಗಿ ಸಭೆ ನಡೆಸಲು ಹಾಗೂ ತಂತ್ರಜ್ಞಾನ ಮತ್ತು ನಾವೀನ್ಯತೆ ಕ್ಷೇತ್ರಗಳಲ್ಲಿ ಸಹಕಾರವನ್ನು ಮತ್ತಷ್ಟು ವಿಸ್ತರಿಸಲು ನಿರ್ಧರಿಸಲಾಗಿದೆ.

▸▸2

## ಕ್ರೀಡಾ ಮೂಲಸೌಕರ್ಯ ಅಭಿವೃದ್ಧಿಗೆ ರೂ.75-100 ಕೋಟಿ ಅನುದಾನ ಬಳಕೆ- ಜಿಲ್ಲಾಧಿಕಾರಿ

ಸಂಜೆವಾಣಿ ವಾರ್ತೆ

ಬಳ್ಳಾರಿ,ಸೆ.22: ಜಿಲ್ಲೆಯಲ್ಲಿ ಕ್ರೀಡಾ ಮೂಲಸೌಕರ್ಯಗಳನ್ನು ಬಲಪಡಿಸಲು ಕೆ.ಎಂ.ಇ.ಆರ್.ಸಿ ಅನುದಾನದಡಿ ಸುಮಾರು 75 ಕೋಟಿಯಿಂದ 100 ಕೋಟಿ ರೂ. ಗೂ ಅಧಿಕ ಹಣವನ್ನು ಒದಗಿಸಲಾಗುತ್ತಿದ್ದು, ಡಿ.ಎಂ.ಎಫ್ ನಿಧಿಯ ಮೂಲಕವೂ ಹೆಚ್ಚುವರಿ ಸೌಲಭ್ಯಗಳನ್ನು ಕಲ್ಪಿಸಲು ಯೋಜನೆ ರೂಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಂಯುಕ್ತಾಶ್ರಯದಲ್ಲಿ ನಾಡ ಹಬ್ಬದ ಸಡಗರ - ಕ್ರೀಡೆಯ ಸಂಭ್ರಮ ! ಧ್ಯೇಯದೊಂದಿಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ ಹಾಗೂ ಸಿ.ಎಂ. ಕಪ್ 2026 ಗೆ ಚಾಲನೆ ನೀಡಿ ಅವರು ಮಾತನಾಡಿದರು.

ಬೆಂಗಳೂರಿನಿಂದ ಬಳ್ಳಾರಿಗೆ ಸ್ಥಳಾಂತರಗೊಂಡಿರುವ ಹಾಕಿ ಕ್ರೀಡಾಂಗಣ ಮತ್ತು ಕ್ರೀಡಾ ವಸತಿ ನಿಲಯವು ಜಿಲ್ಲೆಯ ಹೆಮ್ಮೆಯಾಗಿದ್ದು, ಅದಕ್ಕೆ



ಅಗತ್ಯವಿರುವ ಮೂಲ ಸೌಲಭ್ಯಗಳನ್ನು ಒದಗಿಸಲಾಗಿದೆ. ಇದರ ಜೊತೆಗೆ ಬಳ್ಳಾರಿಯ ಬಿ.ಡಿ.ಎ ಫುಟ್‌ಬಾಲ್ ಕ್ರೀಡಾಂಗಣದ ನವೀಕರಣ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು ಎಂದು ತಿಳಿಸಿದರು.

ಕಲಬುರಗಿಯಲ್ಲಿ ನಡೆದ ರಾಜ್ಯ ಮಟ್ಟದ ಅಥ್ಲೆಟಿಕ್ಸ್ ಕೂಟದ 100 ಮೀಟರ್ ಓಟದ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿರುವ ಬಳ್ಳಾರಿಯ ಸುದೀಕ್ಷಾ, ಪ್ಯಾರಾ ಈಜುಪಟು ಗೋಪಿಚಂದ್ ಹಾಗೂ ಇತ್ತೀಚೆಗೆ 4 ಕಿ.ಮೀ ಮ್ಯಾರಥಾನ್‌ನಲ್ಲಿ ಪ್ರಥಮ ಬಹುಮಾನ ಪಡೆದ ಕ್ರೀಡಾ

▸▸2

# 8 ಭ್ರಷ್ಟರು ಲೋಕಾ ಬಲೆಗೆ

## ರಾಜ್ಯದ ಹಲವೆಡೆ ಲೋಕಾ ದಾಳಿ : ಅಪಾರ ಪ್ರಮಾಣದ ಆಸ್ತಿ ಪಾಸ್ತಿ ಪತ್ತೆ





ಬೆಂಗಳೂರು,ಸೆ. 22- ಆದಾಯಕ್ಕಿಂತಲೂ ನೂರಾರು ಪಟ್ಟು ಅಕ್ರಮ ಆಸ್ತಿ ಗಳಿಕೆ, ಭ್ರಷ್ಟಾಚಾರ ಹಿನ್ನೆಲೆಯಲ್ಲಿ ರಾಜ್ಯದ ಹಲವೆಡೆ ಏಕಕಾಲದಲ್ಲಿ ದಾಳಿ ನಡೆಸಿರುವ ಲೋಕಾಯುಕ್ತ ಅಧಿಕಾರಿಗಳು 8 ಮಂದಿ ಭ್ರಷ್ಟ ಅಧಿಕಾರಿಗಳನ್ನು ಬಲೆಗೆ ಕೆಡವಿ ಕೋಟ್ಯಂತರ ಮೌಲ್ಯದ ಅಕ್ರಮ ಆಸ್ತಿಪಾಸ್ತಿಗಳನ್ನು ಪತ್ತೆಹಚ್ಚಿದ್ದಾರೆ.

ಬಲೆಗೆ ಬಿದ್ದಿರುವ 8 ಮಂದಿ ಭ್ರಷ್ಟ ಸರ್ಕಾರಿ ಅಧಿಕಾರಿಗಳ ಕಚೇರಿ ಮನೆ ಸಂಬಂಧಿಕರ ಮನೆಗಳ ಇಂದು ಮುಂಜಾನೆಯಿಂದಲೇ ಎಸ್ ಪಿಗಳ ನೇತೃತ್ವದಲ್ಲಿ ಏಕಕಾಲದಲ್ಲಿ ದಾಲಿ ನಡೆಸಿ ಅಪಾರ ಪ್ರಮಾಣದ ನಗದು ಚಿನ್ನಾಭರಣಗಳು,ಐಷಾರಾಮಿ ವಸ್ತುಗಳು,

ಆಸ್ತಿಪಾಸ್ತಿಗಳ ದಾಖಲೆ ಪತ್ರಗಳನ್ನು ವಶಪಡಿಸಿಕೊಂಡು ಪರಿಶೀಲನೆ ಕೈಗೊಂಡಿದ್ದಾರೆ.

ಬೆಂಗಳೂರು, ಬೀದರ್,ಮಂಡ್ಯ, ಚಿಕ್ಕಬಳ್ಳಾಪುರ,ಕೊಡಗು ಜಿಲ್ಲೆಗಳಲ್ಲಿ ದಾಳಿ ನಡೆಸಿರುವ 8 ಮಂದಿ ಭ್ರಷ್ಟ ಅಧಿಕಾರಿಗಳ ಕಚೇರಿ ಮನೆಗಳ ಮೇಲಿನ ದಾಳಿಯೂ ಮುಂದುವರೆದಿದ್ದು,ಸಂಜೆ ವೇಳೆ ದಾಳಿಯಲ್ಲಿ ಪತ್ತೆಯಾಗಿರುವ ನಗದು ಚಿನ್ನಾಭರಣಗಳು, ಐಷಾರಾಮಿ ವಸ್ತುಗಳು, ವಿದೇಶಿ ಮದ್ಯಗಳು ಸೇರಿ ಅಪಾರ ಪ್ರಮಾಣದ ಆಸ್ತಿಪಾಸ್ತಿಗಳ ದಾಖಲೆ ಪತ್ರಗಳ ಒಟ್ಟಾರೆ ಮೌಲ್ಯ ಲಭ್ಯವಾಗಲಿದೆ.

▸▸2

## ಆರ್ಥಿಕ ಸಾಮಾಜಿಕ ರಾಜಕೀಯ ಧಾರ್ಮಿಕ ಸಮಾನತೆಯ ಹಕ್ಕಿಗಾಗಿ ಸಂವಿಧಾನ: ನಿಷ್ಠಿ ರುದ್ರಪ್ಪ

(ಸಂಜೆವಾಣಿ ಪ್ರತಿನಿಧಿಯಿಂದ)

ಬಳ್ಳಾರಿ, ಸೆ.22: ಸ್ವಾತಂತ್ರ್ಯ ಪೂರ್ವದಲ್ಲಿ ನಮಗೆ ಬ್ರಿಟೀಷ್ ಸಂವಿಧಾನವಿತ್ತು. ಸ್ವಾತಂತ್ರ್ಯ ನಂತರ ಸಮಾನತೆಗಾಗಿ ಸಂವಿಧಾನ ರಚನೆಯಾಯ್ತು ಅಂಬೇಡ್ಕರ ಅಧ್ಯಕ್ಷತೆಯಲ್ಲಿ. ಅದು ಆರ್ಥಿಕ, ಸಾಮಾಜಿಕ, ರಾಜಕೀಯ ಧಾರ್ಮಿಕ ಸಮಾನತೆಯ ಹಕ್ಕನ್ನು ಭಾರತದ ಪ್ರಜೆಗೆ ಕಲ್ಪಿಸಿದೆ. ಆದರೂ ಇಂದಿಗೂ ಅಸಮಾನತೆ ಇರುವ ಕಾರಣ ಕಲ್ಯಾಣ ಕರ್ನಾಟಕದಲ್ಲಿ ಅಭಿವೃದ್ಧಿ ಅಸಮಾನತೆಯನ್ನು ಹೋಗಲಾಡಿಸಲು ಸಂವಿಧಾನದ 371 ಜೆ.ತಿದ್ದುಪಡಿ ಜಾರಿಗೆ ತಂದಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಅಧ್ಯಕ್ಷ ಡಾ.ನಿಷ್ಠಿ ರುದ್ರಪ್ಪ ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ ಬದುಕು ಹಾಗು ಸಾಧನೆಗಳ ಪರಿಚಯದ ಅಂಗವಾಗಿ




ಇಂದು ನಗರದ ಸತ್ಯಂ ಶಿಕ್ಷಣ ಮಹಾ ವಿದ್ಯಾಲಯದಲ್ಲಿ ಆಯೋಜಿಸಲಾಗಿದ್ದ 'ಅಂಬೇಡರ್ ಓದು' ವಿಶೇಷ ಕಾರ್ಯಕ್ರಮ ಮತ್ತು ಭಾಷಣ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪುಸ್ತಕ ಬಹುಮಾನ ವಿತರಣಾ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಅಂಬೇಡರ್ ಅವರನ್ನು

▸▸2

## ಕೆರೆಗಳ ಅಭಿವೃದ್ಧಿ: ಸಿಇಒಗಳಿಗೆ ಖಂಡ್ರೆ ಸೂಚನೆ



ಬೆಂಗಳೂರು, ಸೆ.22: ರಾಜ್ಯದ 7 ಜಿಲ್ಲೆಗಳ 500 ಕೆರೆಗಳ ಪುನಶ್ಚೇತನಕ್ಕೆ ವಿಶ್ವಬ್ಯಾಂಕ್ ನೆರವಿನ ಯೋಜನೆಯಡಿ 150 ಕೋಟಿ ರೂ. ಸಮಗ್ರ ಯೋಜನಾ ವರದಿ ಸಿದ್ಧವಾಗಿದ್ದು, ಸಮರೋಪಾದಿಯಲ್ಲಿ ಕೆರೆ ಅಭಿವೃದ್ಧಿ ಮಾಡುವಂತೆ ಸಂಬಂಧಿತ ಸಿಇಒಗಳಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ, ಸೂಚನೆ ನೀಡಿದ್ದಾರೆ.

ವಿಕಾಸಸೌಧದ ತಮ್ಮ ಕಚೇರಿಯಲ್ಲಿಂದು ಎಲ್ಲ ಜಿಲ್ಲೆಗಳ ಪಂಚಾಯತಿ ಮುಖ್ಯಕಾರ್ಯನಿರ್ವಹಣಾಧಿಕಾರಿಗಳೊಂದಿಗೆ ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ಗ್ರಾಮಗಳ ಕುಡಿಯುವ ನೀರಿನ ಸಮಸ್ಯೆ ಕುರಿತಂತೆ ವಿಡಿಯೋ ಕಾನ್ಫರೆನ್ಸ್ ನಡೆಸಿದ ಅವರು, ವಿಶ್ವಬ್ಯಾಂಕ್ ನೆರವಿನ ಜೊತೆಗೆ ವಿವಿಬಿ ರಾಮ್ ಜಿ ಸಹಯೋಗದಲ್ಲಿ ಈ ಕೆರೆಗಳ ಹೂಳು ತೆಗೆಯುವುದು, ಏರಿ ದುರಸ್ತಿ, ಏರಿ ಎತ್ತರಿಸು

▸▸2

## ದಲಿತರ ಸರಣಿ ಹತ್ಯಾ ಪ್ರಕರಣಗಳ ತನಿಖೆಗೆ ಎಸ್‌ಐಟಿ ರಚನೆಗೆ ಆಗ್ರಹ




(ಸಂಜೆವಾಣಿ ಪ್ರತಿನಿಧಿಯಿಂದ)

ಬಳ್ಳಾರಿ, ಸೆ.22: ಈ ತಿಂಗಳಲ್ಲಿಯೇ 12 ಜನ ಹೊಲೆ ಮಾದಿಗರ ಹತ್ಯೆಯಾಗಿದೆ. ಈ ಬಗ್ಗೆ ಕ್ರಮ ತೆಗೆದುಕೊಳ್ಳಲು ಸರ್ಕಾರ ನಿರ್ಲಕ್ಷ ವಹಿಸಿದೆ ಎಂದು ಕರ್ನಾಟಕ ಪ್ರದೇಶ ಮಾದಿಗರ ಸಂಘ ರಾಜ್ಯ ಅಧ್ಯಕ್ಷ ಪ್ರಭುರಾಜ್ ಕೊಡ್ಲಿ ಆರೋಪಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಇಂದು ಸುದ್ದಿಗೋಷ್ಟಿ ನಡೆಸಿದ ಅವರು.ಮಧುಗಿರಿ ತಾಲೂಕಿನ ಕಸಾಪುರ ಗ್ರಾಮದಲ್ಲಿ ಗಣೇಶ ವಿಸರ್ಜನೆ ವೇಳೆ ಸಿಂಹಾದ್ರಿಯ ಹತ್ಯೆ ನಡೆದಿದೆ.

ಅಸ್ಪೃಶ್ಯರು ಮೆರವಣಿಗೆಯಲ್ಲಿ ಬರಬಾರದು ಎಂದು ಎಫ್ ಐ ಆರ್ ಮಾಡಿದ್ದಾರೆ. ಆದರೆ ಮಹಿಳೆಯ ಅನೈತಿಕ

▸▸2

## ಪಿಎಸ್‌ಸಿ ಅಕ್ರಮ: ಸರ್ಕಾರಕ್ಕೆ ಸಿಐಡಿ ವರದಿ ಸಲ್ಲಿಕೆ

ಬೆಂಗಳೂರು,ಸೆ.22-ಕರ್ನಾಟಕ ಲೋಕಸೇವಾ ಆಯೋಗ(ಕೆಪಿಎಸ್‌ಸಿ) ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿ ಅಕ್ರಮದ ತನಿಖೆ ನಡೆಸಿರುವ ಸಿಐಡಿ, ಹಣ ವರ್ಗಾವಣೆ ಹಾಗೂ ಹುದ್ದೆಗಳ ಮಾರಾಟದ ಆರೋಪಗಳಿಗೆ ಸಂಬಂಧಿಸಿದ ಹಲವು ಮಹತ್ವದ ಮಾಹಿತಿಗಳನ್ನು ಸರ್ಕಾರಕ್ಕೆ ಸಲ್ಲಿಸಿರುವ ತನಿಖಾ ವರದಿಯಲ್ಲಿ ಉಲ್ಲೇಖಿಸಿದೆ.

ಪಶುವೈದ್ಯಾಧಿಕಾರಿ ಹುದ್ದೆ ಅಕ್ರಮಕ್ಕೆ ಸಂಬಂಧಿಸಿದಂತೆ ಸಿಐಡಿ ಒಟ್ಟು 92 ಲಕ್ಷ ಹಣವನ್ನು ಜಪ್ತಿ ಮಾಡಿದೆ. ಭಾಲ್ಕಿಯ ಓಂ ಲಕ್ಷ್ಮೀ ಸೌಹಾರ್ದ ಸಹಕಾರಿ ಬ್ಯಾಂಕ್ ಹಾಗೂ ಕೋಟಕ್ ಮಹೀಂದ್ರಾ ಬ್ಯಾಂಕ್ ಖಾತೆಗಳಿಗೆ 92 ಲಕ್ಷ ಜಮೆಯಾಗಿರುವುದು ತನಿಖೆಯಲ್ಲಿ ಪತ್ತೆಯಾಗಿದೆ.

ಮಧ್ಯವರ್ತಿ ಕನ್ನಾಳೆ ಸೂಚನೆಯಂತೆ ಐವರು ಅಭ್ಯರ್ಥಿಗಳು ಹಣ ವರ್ಗಾಯಿಸಿದ್ದರು ಎಂದು ವರದಿಯಲ್ಲಿ ತಿಳಿಸಲಾಗಿದೆ.

ಸಿದ್ದಾರ್ಥ್ 20 ಲಕ್ಷ, ವಿ. ಬಸವರಾಜ್ 27 ಲಕ್ಷ, ಮಹೇಂದ್ರ 25 ಲಕ್ಷ ಹಾಗೂ ನಿರಂಜನ್ 14 ಲಕ್ಷವನ್ನು ಬ್ಯಾಂಕ್ ಖಾತೆಗೆ ಜಮೆ ಮಾಡಿದ್ದರೆ, ಕಿರಣ್ ಗೌಡ 10 ಲಕ್ಷ, ಸಲೀಂ 30 ಲಕ್ಷ ಹಾಗೂ ಮೊಹಮದ್ ಸುಹೈಲ್

▸▸2

## ಟಿ.ಬಿ.ಡ್ಯಾಂ ನೀರಿನ ಮಟ್ಟ



**ಇಂದಿನ ಮಟ್ಟ: 1,625.57 ಅಡಿಗಳು**

| | | |
|---|---|---|
| ಒಳಹರಿವು | : 0 | ಕ್ಯೂಸೆಕ್ಸ್ |
| ಹೊರಹರಿವು | : 12,058 | ಕ್ಯೂಸೆಕ್ಸ್ |
| ಸಾಮರ್ಥ್ಯ | : 78.36 | ಟಿ.ಎಂ.ಸಿ |
| ಗರಿಷ್ಟ ಮಟ್ಟ | : 1633.00 | ಅಡಿ |

## ನೌಕರರ ಗಡುವು ಅಂತ್ಯ; 108 ಆಂಬುಲೆನ್ಸ್ ಸೇವೆ ಬಂದ್ ಆತಂಕ

ಬೆಂಗಳೂರು, ಸೆ.22-ರಾಜ್ಯದ ಜನರಿಗೆ ತುರ್ತು ಆರೋಗ್ಯ ಸೇವೆ ಒದಗಿಸುವ 108 ಆಂಬ್ಯುಲೆನ್ಸ್ ಸೇವೆಗೆ ಇದೀಗ ಮುಷ್ಕರದ ಬಿಸಿ ತಟ್ಟುವ ಆತಂಕ ಎದುರಾಗಿದೆ. ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ 108 ಆಂಬ್ಯುಲೆನ್ಸ್ ನೌಕರರು ಸರ್ಕಾರಕ್ಕೆ ನೀಡಿದ್ದ 15 ದಿನಗಳ ಗಡುವು ಇಂದು ರಾತ್ರಿ 8 ಗಂಟೆಗೆ ಮುಕ್ತಾಯಗೊಳ್ಳಲಿದ್ದು, ಅಷ್ಟರೊಳಗೆ ಸಮಸ್ಯೆ ಬಗೆಹರಿಯದಿದ್ದರೆ ಸೇವೆ ಸ್ಥಗಿತಗೊಳಿಸಿ ಸಾಮೂಹಿಕ ರಾಜೀನಾಮೆ ನೀಡುವ ಎಚ್ಚರಿಕೆಯನ್ನು ನೌಕರರು ನೀಡಿದ್ದಾರೆ.

ಆರೋಗ್ಯ ಇಲಾಖೆ ಹಾಗೂ 108 ಆಂಬ್ಯುಲೆನ್ಸ್ ಸೇವೆ ನಿರ್ವಹಿಸುತ್ತಿರುವ ವ್ಯವಸ್ಥೆಯ ವಿರುದ್ಧ ನೌಕರರು ಅಸಮಾಧಾನ ವ್ಯಕ್ತಪಡಿಸಿದ್ದು, ಹಲವು ವರ್ಷಗಳಿಂದ ತಮ್ಮ ಬೇಡಿಕೆಗಳು ಬಾಕಿ ಉಳಿದಿವೆ ಎಂದು ಆರೋಪಿಸಿದ್ದಾರೆ. ಸರ್ಕಾರಕ್ಕೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ ಸೂಕ್ತ ಸ್ಪಂದನೆ ಸಿಕ್ಕಿಲ್ಲ. ಹೀಗಾಗಿ ಹೋರಾಟ ತೀವ್ರಗೊಳಿಸಲು ನಿರ್ಧರಿಸಿರುವುದಾಗಿ ಸಂಘದ ಮುಖಂಡರು ತಿಳಿಸಿದ್ದಾರೆ.

ರಾತ್ರಿ 8ರ ಬಳಿಕ ಸೇವೆಗೆ ಬ್ರೇಕ್

15 ದಿನಗಳ ಗಡುವು ಮುಕ್ತಾಯವಾಗುವ ಮುನ್ನ ಸರ್ಕಾರ ಮಧ್ಯಪ್ರವೇಶಿಸಿ ಬೇಡಿಕೆಗಳನ್ನು ಈಡೇರಿಸಬೇಕು. ಇಲ್ಲವಾದರೆ ರಾತ್ರಿ 8 ಗಂಟೆಯ ಬಳಿಕ ರಾಜ್ಯಾದ್ಯಂತ 108 ಸೇವೆಗೆ ಅಡ್ಡಿಯಾಗುವ ಸಾಧ್ಯತೆ ಇದೆ ಎಂದು ನೌಕರರು ಎಚ್ಚರಿಸಿದ್ದಾರೆ. ಒಂದೊಮ್ಮೆ ಸೇವೆ ಸ್ಥಗಿತಗೊಂಡರೆ ಅಪಘಾತ ಸಂತ್ರಸ್ತರು, ಗರ್ಭಿಣಿಯರು, ತುರ್ತು ಚಿಕಿತ್ಸೆ ಅಗತ್ಯವಿರುವವರು ಹಾಗೂ ಗ್ರಾಮೀಣ ಪ್ರದೇಶದ ರೋಗಿಗಳಿಗೆ ತಕ್ಷಣದ ಸಾರಿಗೆ ವ್ಯವಸ್ಥೆ ಸಿಗುವುದ

▸▸2

## ಹಾಸ್ಟೆಲ್ ನೌಕರರ ಬಾಕಿ ವೇತನ ಬಿಡುಗಡೆ ಆಗ್ರಹ

(ಸಂಜೆವಾಣಿ ಪ್ರತಿನಿಧಿಯಿಂದ)

ಬಳ್ಳಾರಿ, ಸೆ.22: ಸರ್ಕಾರಿ ಹಾಸ್ಟೆಲ್ ಕಾರ್ಮಿಕರಿಗೆ ಬಾಕಿ ಇರುವ ಎರಡು ತಿಂಗಳ ವೇತನವನ್ನು ಕೂಡಲೇ ಪಾವತಿಸಬೇಕು ಎಂದು ಆಗ್ರಹಿಸಿ ಎಐಟಿಯುಸಿಯ ಕರ್ನಾಟಕ ರಾಜ್ಯ ಸಂಯುಕ್ತ ವಸತಿನಿಲಯ ಕಾರ್ಮಿಕರ ಸಂಘದಿಂದ ಹಾಸ್ಟಲ್ ಗಳ ನೌಕರರು ಇಂದು ಜಿ.ಪಂ, ಸಿಇಓ ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು.

ಮೇ 22, 2026 ರಂದು ಜಾರಿಯಾದ ಪರಿಷ್ಕೃತ ಹೊಸ ವೇತನ ಜಾರಿ ಮಾಡಬೇಕು. ಪ್ರತಿ ತಿಂಗಳು 5ನೇ ತಾರೀಖಿನ ಒಳಗೆ ವೇತನ ಪಾವತಿಸಲು ಕ್ರಮ ಕೈಗೊಳ್ಳಬೇಕು ಎಂಬುದು ಇವರ ಮುಖ್ಯ ಬೇಡಿಕೆಯಾಗಿತ್ತು.

ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತ




ಕಲ್ಯಾಣ ಇಲಾಖೆಗಳ ಅಡಿಯಲ್ಲಿ ಬರುವ ವಸತಿ ಶಾಲೆ, ವಸತಿನಿಲಯಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಮುಖ್ಯ ಅಡುಗೆಯವರು , ಅಡುಗೆ ಸಹಾಯಕರು, ಕಾವಾಲುಗಾರಿಗೆ ಸಕಾಲಕ್ಕೆ ವೇತನ ನೀಡದಿದ್ದರೆ

▸▸2

**ಚಿನಿವಾರಪೇಟೆ** ಮುಂಬೈ,: ಸೆಪ್ಟೆಂಬರ್ 22- ಚಿನ್ನ: ಅಪರಂಜಿ 10 ಗ್ರಾಂ ರೂ. 1,60,090 22 ಕ್ಯಾರೆಟ್: 10 ಗ್ರಾಂ ರೂ. 1,46,780 ಬೆಳ್ಳಿ: 1 ಕೆ.ಜಿ. ರೂ. 2,90,000

## ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ., ಚೇಳ್ಳಗುರ್ಕಿ

ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆ. (ಕರ್ನಾಟಕ)

ನೋ.ಸಂ.ಡಿ.ಆರ್.ವೈ/ಎಸ್.–5169/76–77 ದಿನಾಂಕ: 09–09–1976

**2025–26ನೇ ಸಾಲಿನ ವಾರ್ಷಿಕ ಮಹಾಜನ ಸಭೆಯ ಆಹ್ವಾನ ಪತ್ರಿಕೆ**

ಸನ್ಮಾನ್ಯ ಸದಸ್ಯರೇ,

ನಮ್ಮ ಸಹಕಾರ ಸಂಘದ 2025–26ನೇ ಸಾಲಿನ ವಾರ್ಷಿಕ ಮಹಾಜನ ಸಭೆಯನ್ನು **ದಿನಾಂಕ: 24–09–2026 ಗುರುವಾರ ಬೆಳಗ್ಗೆ 11–00 ಗಂಟೆಗೆ ಸಂಘದ ಅಧ್ಯಕ್ಷರಾದ ಶ್ರೀ ಹೆಚ್.ಶಶಿಧರ ಗೌಡ ಇವರ ಅಧ್ಯಕ್ಷತೆಯಲ್ಲಿ ಶ್ರೀ ಎರ್ರಿತಾತ ದೇವಸ್ಥಾನದ ಸಾನ್ನಿಧ್ಯದಲ್ಲಿ ಕರೆಯಲಾಗಿದೆ.** ಕಾರಣ ಸಂಘದ ಎಲ್ಲಾ ಸದಸ್ಯರುಗಳು ಸಮಯಕ್ಕೆ ಸರಿಯಾಗಿ ಆಗಮಿಸಿ ಸಭೆಯಲ್ಲಿ ಪಾಲ್ಗೊಳ್ಳುವಂತೆ ವಿನಂತಿಸಲಾಗಿದೆ.

– – ಆಡಳಿತ ಮಂಡಳಿಯ ಅಪ್ಪಣೆಯ ಮೇರೆಗೆ – –

ಶ್ರೀ ಹೆಚ್.ಶಶಿಧರ ಗೌಡ, ಅಧ್ಯಕ್ಷರು | ಶ್ರೀ ಜಿ.ನಾಗಭೂಷಣ ರೆಡ್ಡಿ, ಉಪಾಧ್ಯಕ್ಷರು | ಶ್ರೀ ಆರ್.ಮೃತ್ಯುಂಜಯ (ಡಿ.ಸಿ.ಎಂ), ಮುಖ್ಯ ಕಾರ್ಯನಿರ್ವಾಹಕರು

ವಿ.ಸೂ: ಸಭೆ ಆಹ್ವಾನ ಪತ್ರಿಕೆ ತಲುಪದೇ ಇರುವ ಸದಸ್ಯರು ಇದನ್ನೇ ಆಹ್ವಾನ ಪತ್ರಿಕೆಯೆಂದು ತಿಳಿದು ಸಭೆಗೆ ಆಗಮಿಸತಕ್ಕದ್ದು.



## ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ., ಎಂ.ಗೋನಾಳ್

ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆ.

ನೋ.ಸಂ.ಸ.ನಿ.ಏ–22.49668–2018–19: ದಿನಾಂಕ : 07–02–2019

**2025–26ನೇ ಸಾಲಿನ ವಾರ್ಷಿಕ ಮಹಾಜನ ಸಭೆಯ ಆಹ್ವಾನ ಪತ್ರಿಕೆ**

ಸನ್ಮಾನ್ಯ ಸದಸ್ಯರೇ,

ನಮ್ಮ ಸಹಕಾರ ಸಂಘದ 2025–26ನೇ ಸಾಲಿನ ವಾರ್ಷಿಕ ಮಹಾಜನ ಸಭೆಯನ್ನು **ದಿನಾಂಕ: 24–09–2026 ಗುರುವಾರ ಬೆಳಗ್ಗೆ 10–30 ಗಂಟೆಗೆ ಸಂಘದ ಅಧ್ಯಕ್ಷರಾದ ಶ್ರೀ ಸಿ.ಬಿ.ಪುರುಷೋತ್ತಮಗೌಡ ಇವರ ಅಧ್ಯಕ್ಷತೆಯಲ್ಲಿ ಎಂ.ಗೋನಾಳ್ ಗ್ರಾಮದ ಡಾ॥ ಬಿ.ಆರ್.ಅಂಬೇಡ್ಕರ್ ಸಮುದಾಯ ಭವನದ ಸಭಾಂಗಣದಲ್ಲಿ** ಕರೆಯಲಾಗಿದೆ. ಕಾರಣ ಸಂಘದ ಎಲ್ಲಾ ಸದಸ್ಯರುಗಳು ಸಮಯಕ್ಕೆ ಸರಿಯಾಗಿ ಆಗಮಿಸಿ ಸಭೆಯಲ್ಲಿ ಪಾಲ್ಗೊಳ್ಳುವಂತೆ ವಿನಂತಿಸಲಾಗಿದೆ.

ಶ್ರೀ ಸಿ.ಬಿ.ಪುರುಷೋತ್ತಮಗೌಡ, ಅಧ್ಯಕ್ಷರು | ಶ್ರೀ ಚಂದ್ರಶೇಖರ ಗೌಡ, ಉಪಾಧ್ಯಕ್ಷರು | ಶ್ರೀ ಬಜ್ಜಯ್ಯ .ಹೆಚ್, ಮುಖ್ಯ ಕಾರ್ಯನಿರ್ವಾಹಕರು

ವಿ.ಸೂ: ಸಭೆ ಆಹ್ವಾನ ಪತ್ರಿಕೆ ತಲುಪದೇ ಇರುವ ಸದಸ್ಯರು ಇದನ್ನೇ ಆಹ್ವಾನ ಪತ್ರಿಕೆಯೆಂದು ತಿಳಿದು ಸಭೆಗೆ ಆಗಮಿಸತಕ್ಕದ್ದು.


# ನಾಳೆ 11ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ ಕಾರ್ಯಕ್ರಮ

ಸಂಜೆವಾಣಿ ವಾರ್ತೆ

ಬಳ್ಳಾರಿ,ಸೆ.22- ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆಯುಷ್ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಆರೋಗ್ಯಕರ ನಾಳೆಗಳಿಗಾಗಿ ಆಯುರ್ವೇದ ಘೋಷವಾಕ್ಯದೊಂದಿಗೆ ಸೆ.23 ರಂದು ಬೆಳಿಗ್ಗೆ 09.30 ಗಂಟೆಗೆ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ 11ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಬಳ್ಳಾರಿ ನಗರ ಕ್ಷೇತ್ರದ ಶಾಸಕ ನಾರಾ ಭರತ್ ರೆಡ್ಡಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಬಳ್ಳಾರಿ ಸಂಸದ ಈ. ತುಕಾರಾಮ್, ಕೊಪ್ಪಳ ಸಂಸದ ಕೆ. ರಾಜಶೇಖರ ಬಸವರಾಜ ಹಿಟ್ನಾಳ್, ರಾಜ್ಯಸಭಾ ಸದಸ್ಯ ಡಾ. ಸೈಯದ್ ನಾಸೀರ್ ಹುಸೇನ್, ರಾಜ್ಯ ಸಹಕಾರ ಕೈಮಗ್ಗ ನೇಕಾರರ ಮಹಾಮಂಡಳಿ ನಿಯಮಿತದ ಅಧ್ಯಕ್ಷ ಆದ ಕಂಪ್ಲಿ ಶಾಸಕ ಜೆ.ಎನ್. ಗಣೇಶ್, ಡಾ. ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಶಾಸಕರಾದ ಬಿ.ಎಂ. ನಾಗರಾಜ, ಬಿ. ನಾಗೇಂದ್ರ, ಈ. ಅನ್ನಪೂರ್ಣ, ವಿಧಾನ ಪರಿಷತ್ ಸದಸ್ಯರಾದ ಡಾ. ಚಂದ್ರಶೇಖರ ಬಿ. ಪಾಟೀಲ, ಡಾ. ಶಶೀಲ್ ಜಿ. ನಮೋಶಿ, ಡಾ. ವೈ. ಎಂ. ಸತೀಶ್, ಮಹಾನಗರ ಪಾಲಿಕೆಯ ಮಹಾಪೌರರಾದ ಪಿ. ಗಾದೆಪ್ಪ, ಬುಡಾ ಅಧ್ಯಕ್ಷ ಜೆ.ಎಸ್. ಆಂಜನೇಯಲು, ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಷನ್ ಲಿಮಿಟೆಡ್‌ನ ಉಪಾಧ್ಯಕ್ಷ ಹೆಚ್. ಲಕ್ಷ್ಮಣ ಹಾಗೂ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ. ಚಿದಾನಂದಪ್ಪ ಭಾಗವಹಿಸಲಿದ್ದಾರೆ.

ಆಯುಷ್ ಇಲಾಖೆಯ ಆಯುಕ್ತರಾದ ಡಾ.ಸುನೀಲ್ ಪನ್ವರ್, ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಕೆ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರಿಸ್ ಸುಮೇರ್, ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ ಡಾ. ಸುಮನ್ ಡಿ. ಪೆನ್ನೇಕರ್, ಮಹಾನಗರ ಪಾಲಿಕೆಯ ಆಯುಕ್ತ ಮಂಜುನಾಥ್ ಪಿ.ಎಸ್ ಮತ್ತು ಜಿಲ್ಲಾ ಆಯುಷ್ ಇಲಾಖೆಯ ಜಿಲ್ಲಾ ಆಯುಷ್ ಅಧಿಕಾರಿ ಡಾ.ಟಿ. ಫಣೀಂಧರ ಸೇರಿದಂತೆ ಬಳ್ಳಾರಿ ಜಿಲ್ಲೆಯ ವಿವಿಧ ಯೋಗ ಸಂಘ-ಸಂಸ್ಥೆಗಳು ಮತ್ತು ಆಯುಷ್ ಸಂಘಟನೆಗಳು ಹಾಗೂ ಇನ್ನೀತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.


## ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ (ನಿ) ಸಿರಿಗೇರಿ. ಸಿರುಗುಪ್ಪ (ತಾ) ಬಳ್ಳಾರಿ (ಜಿ)

**2025–26 ನೇ ಸಾಲಿನ ವಾರ್ಷಿಕ ಮಹಾಜನ ಸಭೆಯ ನೋಟಿಸ್**

ದಿನಾಂಕ :-24-09-2026. ರಂದು ಗುರುವಾರ. ಬೆಳಗ್ಗೆ 11-30 ಕ್ಕೆ, ಸಂಘದ ಕಚೇರಿಯ ಆವರಣದಲ್ಲಿ ಅಧ್ಯಕ್ಷರಾದ ಶ್ರೀ ಬಿ.ಸೋಮಶೇಖರಪ್ಪರವರ ಅಧ್ಯಕ್ಷತೆಯಲ್ಲಿ ಜರುಗಿಸಲು ತೀರ್ಮಾನಿಸಲಾಗಿದೆ. ಕಾರಣ ಸಂಘದ ಸರ್ವ ಸದಸ್ಯರು ತಪ್ಪದೆ ಸಭೆಗೆ ಹಾಜರಾಗಿ ಸಭೆಯನ್ನು ಯಶಸ್ವಿಗೊಳಸಲು ವಿನಂತಿಸಲಾಗಿದೆ. ಈಗಾಗಲೇ ಸಭೆಯ ನೋಟಿಸ್ ಗಳನ್ನು ಎಲ್ಲಾ ಸದಸ್ಯರುಗಳಿಗೆ ಅಂಚೆ ಮೂಲಕ ಕಳುಹಿಸಲಾಗಿದ್ದು, ನೋಟಿಸ್ ಗಳು ತಲುಪದೇ ಇದ್ದಲ್ಲಿ ಇದನ್ನೇ ಸಭೆ ನೋಟಿಸ್ ಎಂದು ಪರಿಗಣಿಸಿ ಸಭೆಗೆ ತಪ್ಪದೆ ಹಾಜರಾಗಲು ಕೋರಿದೆ. ಸದಸ್ಯರು ಸಭೆಗೆ ಬರುವಾಗ ಸಂಘದ ಗುರುತಿನ ಚೀಟಿ ಮತ್ತು ಸಭೆಯ ನೋಟಿಸ್ ಕಡ್ಡಾಯವಾಗಿ ತರತಕ್ಕದ್ದು.

" ಆಡಳಿತ ಮಂಡಳಿಯ ಪರವಾಗಿ "

ಸಹಿ/– ಶ್ರೀ ಬಿ ಸೋಮಶೇಖರಪ್ಪ, ಸಂಘದ ಅಧ್ಯಕ್ಷರು. | ಸಹಿ/– ಶ್ರೀ ಡಿ ಚನ್ನಪ್ಪ. ಸಂಘದ ಉಪಾಧ್ಯಕ್ಷರು.

ಸಹಿ/– ಶ್ರೀ ವೀರೇಶ್ ಸ್ವಾಮಿ, ಮುಖ್ಯ ಕಾರ್ಯನಿರ್ವಾಹಕರು, ಪ್ರಾ. ಕೃ. ಪ. ಸಂಘ (ನಿ) ಸಿರಿಗೇರಿ. ಸಿರುಗುಪ್ಪ (ತಾ) ಬಳ್ಳಾರಿ (ಜಿ)


# 8.48 ತಾಸು ರೈಲು ತಡವಾಗಿದ್ದಕ್ಕೆ ಪ್ರಯಾಣಿಕನಿಗೆ 35 ಸಾವಿರ ಪರಿಹಾರ

(ಸಂಜೆವಾಣಿ ವಾರ್ತೆ)

ರಾಂಚಿ:ಸೆ,22- ರೈಲು ನಿಗಧಿತ ಸಮಯಕ್ಕೆ ಬಾರದೆ 8 ತಾಸು 48 ನಿಮಿಷ ತಡವಾಗಿ ಸಂಚರಿಸಿದ್ದರಿಂದ ಮಾನಸಿಕ, ಆರ್ಥಿಕ ಕಿರುಕಳ ಉಂಟಾಗಿದೆಂದು ದೂರಿದ್ದ ಪ್ರಯಾಣಿಕನಿಗೆ 35 ಸಾವಿತ ರು. ಪರಿಹಾರ ನೀಡುವಂತೆ ಜಾರ್ಖಂಡ್ ಜಿಲ್ಲಾ ಗ್ರಾಹಕ ಆಯೋಗವು ರೈಲ್ವೆ ಇಲಾಖೆಗೆ ನಿರ್ದೇಶಿಸಿದೆ.

2024ರಸೆ.23 ರಂದು ಟಾಟಾ ನಗರದಿಂದ ಸಂಬಲ್ಪುರಕ್ಕೆ ಹೊರಟಿದ್ದ ಇಸ್ಪಾತ್ ಎಕ್ಸ್ಪ್ರೆಸ್ ರೈಲು ನಿಗದಿತ ಸಮಯಕ್ಕಿಂತ ಬರೋಬ್ಬರಿ 8 ಗಂಟೆ 48 ನಿಮಿಷ ತಡವಾಗಿ ಸಂಚರಿಸಿತ್ತು. ಇದರಿಂದ ದೈಹಿಕ, ಮಾನಸಿಕ, ಆರ್ಥಿಕ ಕಿರುಕುಳ ಉಂಟಾಗಿದೆ ಎಂದು ಅದೇ ರೈಲಿನಲ್ಲಿ ಸಂಚರಿಸುತ್ತಿದ್ದ ಪ್ರಯಾಣಿಕ ಸಂಜಯ್ ಕುಮಾರ್ ಗ್ರಾಹಕ ಆಯೋಗದ ಮೆಟ್ಟಿಲೇರಿ. 4.5 ಲಕ್ಷ ರು. ಪರಿಹಾರಕ್ಕೆ ಬೇಡಿಕೆ ಯಿಟ್ಟಿದ್ದರು. ಇದಕ್ಕೆ ತಮ್ಮ ರೈಲ್ವೆ ಟಿಕೆಟ್ನು ಪುರಾವೆಯಾಗಿ ನೀಡಿದ್ದರು.

ಅರ್ಜಿ ವಿಚಾರಣೆ ನಡೆಸಿದ ಆಯೋಗ, 'ವಿಳಂಬಕ್ಕೆ ಸಕಾರಣ ನೀಡುವಲ್ಲಿ ರೈಲ್ವೆ ಇಲಾಖೆ ವಿಫಲವಾಗಿದೆ. ಕುಮಾರ್ ಪರಿಹಾರಕ್ಕೆ ಅರ್ಹರು ಅರ್ಹರು' ಎಂದು ಹೇಳಿ. 35 ಸಾವಿರ ರೂಪರಿಹಾರ ನೀಡಲು ಆದೇಶಿಸಿದೆ.


## ಶ್ರೇಷ್ಠ ಸೌಹಾರ್ದ ಸಹಕಾರಿ ಸಂಘ ನಿಯಮಿತ, ಬಳ್ಳಾರಿ

ಸಂಖ್ಯೆ 122/16 ಅನಂತಪುರ ರಸ್ತೆ ಬಳ್ಳಾರಿ–583101

**ಎರಡನೇ ವರ್ಷದ ಎ. ಜಿ. ಎಂ. ಪ್ರಕಟಣೆ**

2025–26 ನೇ ಸಾಲಿನ ಎರಡನೇ ವಾರ್ಷಿಕ ಸಾಮಾನ್ಯ ಸಭೆಯನ್ನು ದಿನಾಂಕ 25.09.2026, ಬೆಳಗ್ಗೆ 10.30 ರಂದು ಶ್ರೇಷ್ಠ ಸೌಹಾರ್ದ ಸಹಕಾರಿ ಸಂಘ ನಿಯಮಿತ, ಬಳ್ಳಾರಿ, ಕಚೇರಿಯ ಸಭಾಂಗಣದಲ್ಲ ಕರೆಯಲಾಗಿದೆ.

ಶ್ರೇಷ್ಠ ಸೌಹಾರ್ದ ಸಂಘ ನಿಯಮಿತದ ಎಲ್ಲಾ ಸದಸ್ಯರನ್ನು ಹಾಜರಾಗುವಂತೆ ಕೋರಲಾಗಿದೆ.

ಸೂಚನೆ : ಎಲ್ಲಾ ಸದಸ್ಯರಿಗೆ ಮುದ್ದಾಂ ಮೂಲಕ ಎಜಿಎಂ ಪತ್ರವನ್ನು ಕಳುಹಿಸಲಾಗಿದೆ, ಯಾವುದೇ ಸದಸ್ಯರು ವೈಯಕ್ತಿಕವಾಗಿ ಪತ್ರವನ್ನು ಸ್ವೀಕರಿಸದಿದ್ದಲ್ಲಿ, ಇದನ್ನು ವೈಯಕ್ತಿಕ ಪತ್ರವೆಂದು ಪರಿಗಣಿಸಿ ಮತ್ತು ನಿಮ್ಮೆಲ್ಲರನ್ನೂ ಸಭೆಗೆ ವೈಯಕ್ತಿಕವಾಗಿ ಹಾಜರಾಗಲು ವಿನಂತಿಸುತ್ತೇವೆ.

ಆಡಳಿತ ಮಂಡಳ | ಸಹಿ/– ಶ್ರೇಷ್ಠ ಸೌಹಾರ್ದ ಸಹಕಾರಿ ಸಂಘ ನಿಯಮಿತಾ, ಬಳ್ಳಾರಿ


# ಕುರುಗೋಡು ಪುರಸಭೆಯಿಂದ ಸ್ವಚ್ಛತಾ ಜಾಗೃತಿ ಘನತ್ಯಾಜ್ಯ ವಿಲೇವಾರಿ ಘಟಕಕ್ಕೆ ಶಾಲಾ ಮಕ್ಕಳ ಅಧ್ಯಯನ ಭೇಟಿ

ಬಳ್ಳಾರಿ,ಸೆ.22- ಕುರುಗೋಡು ಪಟ್ಟಣದ ನೈರ್ಮಲ್ಯ ಕಾಪಾಡುವಲ್ಲಿ ಸಾರ್ವಜನಿಕರ ಸಹಭಾಗಿತ್ವದ ಜೊತೆಗೆ ವಿದ್ಯಾರ್ಥಿ ದೆಸೆಯಲ್ಲೇ ಪರಿಸರ ಪ್ರಜ್ಞೆ ಬೆಳೆಸುವುದು ಅತ್ಯಗತ್ಯ ಎಂದು ಕುರುಗೋಡು ಪುರಸಭೆಯ ಆರೋಗ್ಯ ನಿರೀಕ್ಷಕ ಆದಿಕೇಶವ ತಿಳಿಸಿದರು.

ಸ್ವಚ್ಛತಾ ಇ-ಸೇವಾ 2026-27 ಅಭಿಯಾನದ ಅಂಗವಾಗಿ ಪಟ್ಟಣದ ಘನ ತ್ಯಾಜ್ಯ ವಸ್ತು ವಿಲೇವಾರಿ ಘಟಕಕ್ಕೆ ಸೋಮವಾರ ಸ್ಥಳೀಯ ವಿದ್ಯಾ ಶಾಲೆಯ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಅಧ್ಯಯನ ಪ್ರವಾಸ ಮತ್ತು ಜಾಗೃತಿ ಕಾರ್ಯಕ್ರಮದ ಅಂಗವಾಗಿ ಭೇಟಿ ನೀಡಿದ್ದ ಸಂದರ್ಭದಲ್ಲಿ ಅವರು ಮಾತನಾಡಿದರು.

ತ್ಯಾಜ್ಯ ಮುಕ್ತ ಹಾಗೂ ಸುಂದರ ನಗರ ನಿರ್ಮಾಣಕ್ಕೆ ಪೂರಕವಾಗಿ 'ಸ್ವಚ್ಛತೆಯೇ ಸೇವೆ' ಎಂಬ ಧ್ಯೇಯವಾಕ್ಯದ ಮಹತ್ವವನ್ನು ಮಕ್ಕಳಿಗೆ ವಿವರಿಸಲಾಯಿತು. ಮನೆ ಮತ್ತು ಶಾಲಾ ಹಂತದಲ್ಲೇ ಕಸವನ್ನು ಹಸಿ ಕಸ ಹಾಗೂ ಒಣ ಕಸವಾಗಿ ವಿಂಗಡಿಸುವ ವಿಧಾನ, ಪ್ಲಾಸ್ಟಿಕ್ ಬಳಕೆಯ ದುಷ್ಪರಿಣಾಮಗಳು ಹಾಗೂ ವೈಜ್ಞಾನಿಕವಾಗಿ ತ್ಯಾಜ್ಯವನ್ನು ಹೇಗೆ ಸಂಸ್ಕರಿಸಿ ವಿಲೇವಾರಿ ಮಾಡಲಾಗುತ್ತದೆ ಎಂಬುದನ್ನು ಪುರಸಭೆ ಸಿಬ್ಬಂದಿ ಪ್ರಾತ್ಯಕ್ಷಿಕೆ ಮೂಲಕ ಮಕ್ಕಳಿಗೆ ಮನವರಿಕೆ ಮಾಡಿಕೊಟ್ಟರು.




ಕಾರ್ಯಕ್ರಮದಲ್ಲಿ ವಿದ್ಯಾ ಶಾಲೆಯ ಶಿಕ್ಷಕರಾದ ಪವನ್ ಮಾತನಾಡಿ, ಪಠ್ಯ ಪುಸ್ತಕದ ಜ್ಞಾನದ ಜೊತೆಗೆ ಇಂತಹ ಪ್ರಾಯೋಗಿಕ ಕಲಿಕಾ ಭೇಟಿಗಳು ಮಕ್ಕಳಲ್ಲಿ ನಾಗರಿಕ ಪ್ರಜ್ಞೆ ಹಾಗೂ ಪರಿಸರ ಕಾಳಜಿಯನ್ನು ಬೆಳೆಸಲು ಸಹಕಾರಿಯಾಗುತ್ತವೆ. ಪುರಸಭೆಯು ಈ ನಡೆ ಶ್ಲಾಘನೀಯ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪುರಸಭೆಯ ಆರೋಗ್ಯ ಶಾಖೆಯ ಸಿಬ್ಬಂದಿ, ಪುರಸಭೆಯ ನೌಕರರು, ಶಾಲೆಯ ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

# ಪೌರ ಕಾರ್ಮಿಕ ಹುದ್ದೆಗೆ ನೇರ ನೇಮಕಕ್ಕೆ ಆಗ್ರಹ

ಸಂಜೆವಾಣಿ ವಾರ್ತೆ

ಬಳ್ಳಾರಿ, ಸೆ.22: ಬಳ್ಳಾರಿ ಮಹಾನಗರ ಪಾಲಿಕೆಯಲ್ಲಿ ಕೆಲಸಮಾಡುತ್ತಿರುವ ಯು.ಜಿ.ಡಿ ಹೆಲ್ಪರ್ ಗಳನ್ನು ಹಾಗೂ ಲೋಡರ್ . ಕ್ಲೀನರ್.ಹೊರಗುತ್ತಿಗೆ ಹಾಗೂ ನೇರಪಾವತಿ ಅಡಿಯಲ್ಲಿ ಕೆಲಸ ನಿರ್ವಹಿಸಿ ಮೃತಪಟ್ಟಿರುವ ಕುಟುಂಬದ ಸದಸ್ಯರಿಗೆ ನಗರಾಭಿವೃದ್ಧಿ ಇಲಾಖೆ ಹಾಗೂ ಪೌರಾಡಳಿತ ನಿರ್ದೇಶನಾಲಯ ಆದೇಶದಂತೆ ನೇರ ಪಾವತಿ ಪೌರಕಾರ್ಮಿಕರ ಹುದ್ದೆಗಳಿಗೆ ನೇಮಕ ಮಾಡುವಂತೆ ಜಿಲ್ಲಾಧಿಕಾರಿಗಳಿಗೆ ಮನವಿ ಮುಖಾಂತರ ಒತ್ತಾಯ ಮಾಡಲಾಯಿತು ಈ ಸಂದರ್ಭದಲ್ಲಿ ಸಮಾನತೆ ಯೂನಿಯನ್ ಕರ್ನಾಟಕ ಸಂಚಾಲಕ ರಾಮಚಂದ್ರ.ಯುಜಿಡಿ ಹೆಲ್ಪರ್ ಗಳಾದ ಬಿ ವಿಜಯ್ ಕುಮಾರ್.ಬಿ ಗೂಡುದಯಾ ಇದ್ದರು



# ವಾಲ್ಮೀಕಿ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ: ಅಕ್ಟೋಬರ್ 17 ಕೊನೆಯ ದಿನ

ಸಂಜೆವಾಣಿ ವಾರ್ತೆ

ಬಳ್ಳಾರಿ,ಸೆ.22: ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮವು 2026-27ನೇ ಸಾಲಿನ ವಿವಿಧ ಕಲ್ಯಾಣ ಯೋಜನೆಗಳಡಿ ಪರಿಶಿಷ್ಟ ಪಂಗಡದ ಅರ್ಹ ಫಲಾನುಭವಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

ಅರ್ಹ ಅಭ್ಯರ್ಥಿಗಳು ಗ್ರಾಮ ಒನ್, ಕರ್ನಾಟಕ ಒನ್ ಅಥವಾ ಬೆಂಗಳೂರು ಒನ್ ಕೇಂದ್ರಗಳ ಮೂಲಕ ಸೇವಾಸಿಂಧು ಪೋರ್ಟಲ್‌ನಲ್ಲಿ (https://sevasindhuservices.karnataka.gov.in) ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

*ಯೋಜನೆಗಳ ವಿವರ:*

ಸ್ವಯಂ ಉದ್ಯೋಗ ನೇರ ಸಾಲ ಯೋಜನೆ:

ಕಿರು ಆರ್ಥಿಕ ಚಟುವಟಿಕೆಗಳನ್ನು ಕೈಗೊಳ್ಳಲು ಒಟ್ಟು ರೂ. 1 ಲಕ್ಷ ಘಟಕ ವೆಚ್ಚ ನಿಗದಿಪಡಿಸಲಾಗಿದ್ದು, ಇದರಲ್ಲಿ ರೂ. 50,000 ಸಹಾಯಧನ ಹಾಗೂ ರೂ. 50,000 ಸಾಲದ ಮೊತ್ತ ಒಳಗೊಂಡಿರುತ್ತದೆ.

ಉದ್ಯಮಶೀಲತಾ ಅಭಿವೃದ್ಧಿ ಯೋಜನೆ:

ಹೈನುಗಾರಿಕೆ: ಘಟಕ ವೆಚ್ಚದ ಶೇ. 70ರಷ್ಟು ಅಥವಾ ಗರಿಷ್ಠ ರೂ. 1.25 ಲಕ್ಷ ಸಹಾಯಧನ ಮತ್ತು ಉಳಿದ ಮೊತ್ತ ಬ್ಯಾಂಕ್ ಸಾಲ.

ವ್ಯಾಪಾರ ಮತ್ತು ಸಣ್ಣ ಉದ್ಯಮಗಳು: ಘಟಕ ವೆಚ್ಚದ ಶೇ. 70ರಷ್ಟು ಅಥವಾ ಗರಿಷ್ಠ ರೂ. 2 ಲಕ್ಷ ಸಹಾಯಧನ ಹಾಗೂ ಉಳಿದ ಮೊತ್ತ ಬ್ಯಾಂಕ್ ಸಾಲ.

ಸ್ವಾವಲಂಬಿ ಸಾರಥಿ (ಸರಕು ವಾಹನ/ಟ್ಯಾಕ್ಸಿ): ಘಟಕ ವೆಚ್ಚದ ಶೇ. 75ರಷ್ಟು ಅಥವಾ ಗರಿಷ್ಠ ರೂ. 4 ಲಕ್ಷ ಸಹಾಯಧನ ಹಾಗೂ ಉಳಿದ ಮೊತ್ತ ಬ್ಯಾಂಕ್ ಸಾಲ ಅಥವಾ ಫಲಾನುಭವಿಯ ವಂತಿಕೆ.

ಫಾಸ್ಟ್ ಫುಡ್ ಟ್ರಕ್/ಮೊಬೈಲ್ ಕಿಚನ್ ಕಿಯೋಸ್ಕ್: ಘಟಕ ವೆಚ್ಚದ ಶೇ. 75ರಷ್ಟು ಅಥವಾ ಗರಿಷ್ಠ ರೂ. 4 ಲಕ್ಷ ಸಹಾಯಧನ ಹಾಗೂ ಉಳಿದ ಮೊತ್ತ ಬ್ಯಾಂಕ್ ಸಾಲ ಅಥವಾ ಫಲಾನುಭವಿಯ ವಂತಿಕೆ.

ಮೈಕ್ರೋಕ್ರೆಡಿಟ್ (ಪ್ರೇರಣಾ) ಯೋಜನೆ:

ಮಹಿಳಾ ಸ್ವಸಹಾಯ ಸಂಘದ ಕನಿಷ್ಠ 10 ಸದಸ್ಯರಿಗೆ ಸ್ವಯಂ ಉದ್ಯೋಗಕ್ಕಾಗಿ ರೂ. 5 ಲಕ್ಷ ಘಟಕ ವೆಚ್ಚ ನೀಡಲಾಗುವುದು. ಇದರಲ್ಲಿ ರೂ. 2.50 ಲಕ್ಷ ಸಹಾಯಧನ ಮತ್ತು ರೂ. 2.50 ಲಕ್ಷ ನಿಗಮದಿಂದ ಸಾಲ ಸೌಲಭ್ಯ ದೊರೆಯಲಿದೆ.

ಗಂಗಾ ಕಲ್ಯಾಣ ಯೋಜನೆ:

1.50 ಎಕರೆಯಿಂದ 5 ಎಕರೆ ಒಣ/ಖುಷ್ಕಿ ಜಮೀನು ಹೊಂದಿರುವ ಸಣ್ಣ ಮತ್ತು ಅತಿ ಸಣ್ಣ ರೈತರ ಜಮೀನಿನಲ್ಲಿ ಕೊಳವೆಬಾವಿ ಕೊರೆದು, ಪಂಪ್‌ಸೆಟ್ ಅಳವಡಿಸಿ ವಿದ್ಯುದ್ದೀಕರಣದೊಂದಿಗೆ ನೀರಾವರಿ ಸೌಲಭ್ಯ ಕಲ್ಪಿಸಲಾಗುವುದು (ಘಟಕ ವೆಚ್ಚ ರೂ. 3.75 ಲಕ್ಷ, ಇದರಲ್ಲಿ ರೂ. 50,000 ಸಾಲ ಒಳಗೊಂಡಿರುತ್ತದೆ).

ಭೂ ಒಡೆತನ ಯೋಜನೆ:

ಭೂ ರಹಿತ ಮಹಿಳಾ ಕೃಷಿ ಕಾರ್ಮಿಕರಿಗೆ ಗರಿಷ್ಠ ರೂ. 20 ಲಕ್ಷ ಮಿತಿಯಲ್ಲಿ (ಶೇ. 50 ಸಹಾಯಧನ ಮತ್ತು ಶೇ. 50 ಸಾಲ) ಕೃಷಿ ಜಮೀನು ಖರೀದಿಸಿ ನೀಡಲಾಗುತ್ತದೆ.

ಅರ್ಜಿ ಸಲ್ಲಿಸಲು ಅಕ್ಟೋಬರ್ 17 ಕೊನೆಯ ದಿನವಾಗಿರುತ್ತದೆ.

2023-24, 2024-25 ಹಾಗೂ 2025-26ನೇ ಸಾಲಿನಲ್ಲಿ ಈಗಾಗಲೇ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿರುವವರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅಗತ್ಯವಿರುವುದಿಲ್ಲ.

ಹೆಚ್ಚಿನ ಮಾಹಿತಿಗೆ ಬಳ್ಳಾರಿಯ ಕಂಟೋನ್ಮೆಂಟ್‌ನ ನಂದಿ ಕಾಲೋನಿಯಲ್ಲಿರುವ ನಿಗಮದ ಕಚೇರಿಯನ್ನು ಅಥವಾ ದೂರವಾಣಿ ಸಂಖ್ಯೆ 08392-24451/52 ಮೂಲಕ ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮರಣ ಹೊಂದಿರುವ 15724 ಗೃಹ ಲಕ್ಷ್ಮಿ ಫಲಾನುಭವಿಗಳಿಗೆ ಯೋಜನೆ ರದ್ದು

(ಸಂಜೆವಾಣಿ ವಾರ್ತೆ)

ಮೈಸೂರು, ಸೆ.22: ಜಿಲ್ಲೆಯಲ್ಲಿ ಮರಣ ಹೊಂದಿರುವ 15,724 ಗೃಹ ಲಕ್ಷ್ಮಿ ಫಲಾನುಭವಿಗಳಿಗೆ ಯೋಜನೆ ರದ್ದುಪಡಿಸಿ, ಈಗಾಗಲೇ ಮರಣ ಹೊಂದಿ ಅವರ ಖಾತೆಗೆ ಜಮೆಯಾಗಿರುವ 79,86,760 ರೂ ಹಣವನ್ನು ಹಿಂಪಡೆದು ಸರ್ಕಾರಕ್ಕೆ ಜಮೆ ಮಾಡಲಾಗಿದೆ ಎಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಯ ಅಧ್ಯಕ್ಷ ಅರುಣ್ ಕುಮಾರ್ ಎಸ್ ಅವರು ತಿಳಿಸಿದರು.

ಅವರು ಇಂದು ಜಿಲ್ಲಾ ಪಂಚಾಯತ್ ಡಿ.ದೇವರಾಜ್ ಅರಸು ಸಭಾಂಗಣದಲ್ಲಿ ನಡೆದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮರಣ ಹೊಂದಿರುವ ಗೃಹ ಲಕ್ಷ್ಮಿ ಯೋಜನೆಯ ಫಲಾನುಭವಿಗಳ ಮರಣ ಹೊಂದಿದ ನಂತರ ಜಮೆಯಾಗಿರುವ ಉಳಿದ ಹಣವನ್ನು ಹಿಂಪಡೆಯಲು ಕ್ರಮವಹಿಸಿ ಎಂದರು

ಜಿಲ್ಲಾ ಗ್ಯಾರಂಟಿ ಸಮಿತಿ ಉಪಾಧ್ಯಕ್ಷ ಪ್ರೋ. ಶಿವಕುಮಾರ್ ಅವರು ಮಾತನಾಡಿ, ಮುಖ್ಯಮಂತ್ರಿಗಳು ಭೂ ಗ್ಯಾರಂಟಿ, ನೇಗಿಲ ಯೋಗಿ, ತೇಗದ ಸಿರಿ ಯೋಜನೆ ಸೇರಿದಂತೆ ವಿವಿಧ ಯೋಜನೆ ಜಾರಿಗೆ ತಂದಿದ್ದು, ಅಧಿಕಾರಿಗಳು ಪಂಚ ಗ್ಯಾರಂಟಿ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿರುವ ರೀತಿ ಸರ್ಕಾರ ಜಾರಿಗೆ ತರುವ ಎಲ್ಲಾ ಯೋಜನೆಯನ್ನು ಸಾರ್ವಜನಿಕರಿಗೆ ತಲುಪಿಸಲು ಶ್ರಮಿಸಬೇಕು ಎಂದರು.

ಜಿಲ್ಲಾ ಮುಖ್ಯ ಯೋಜನಾಧಿಕಾರಿ ಸವಿತಾ ಅವರು ಮಾತನಾಡಿ, ಪಂಚ ಗ್ಯಾರಂಟಿ ಯೋಜನೆಗಳು ಹೆಚ್ಚು ಜನರಿಗೆ ತಲುಪಿಸಲು ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿರುವ ಇಲಾಖೆಗಳು ಫಲಾನುಭವಿಗಳ ಯಶೋಗಾಥೆಯನ್ನು ಗ್ಯಾರಂಟಿ ಯೋಜನೆಯ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರಿಗೆ ತಲುಪಿಸುವಂತೆ ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ನಾಗರಾಜು ಅವರು ಮಾತನಾಡಿ ಗೃಹ ಲಕ್ಷ್ಮಿ ಯೋಜನೆ ಮರುಪರಿಶೀಲನೆಗೆ 250 ಫಲಾನುಭವಿಗೆ ಒಬ್ಬರು ಗಣತಿದಾರರನ್ನು ನೇಮಕ ಮಾಡಲಾಗುವುದು. ಫಲಾನುವಿಗಳು ಇ.ಕೆ.ವೈ. ಸಿ ಮಾಡಿಸಿರಬೇಕು. ಬ್ಯಾಂಕ್ ಖಾತೆಯನ್ನು ಕರ್ನಾಟಕ ರಾಜ್ಯದಲ್ಲಿ ಹೊಂದಿರಬೇಕು ಸೇರಿದಂತೆ ಸರ್ಕಾರ ತಿಳಿಸಿರುವ ಇನ್ನಿತರೆ ಮಾಹಿತಿಯನ್ನು ಸಭೆಗೆ ನೀಡಿದರು.

ಸಭೆಯಲ್ಲಿ ಗ್ಯಾರಂಟಿ ಯೋಜನೆ ಸಮಿತಿ ಸದಸ್ಯ ಅಬ್ದುಲ್ ಖಾದರ್, ಚಲುವರಾಜು, ಚಾಮರಾಜು, ಲಲಿತಾ, ಉತ್ತನಳ್ಳಿ ಶಿವಣ್ಣ ಸೇರಿದಂತೆ ಇನ್ನಿತರೆ ಗಣ್ಯರು ಉಪಸ್ಥಿತರಿದ್ದರು.

# 24 ರಾಜ್ಯಗಳಲ್ಲಿ ಭಾರೀ ಮಳೆ ನಿರೀಕ್ಷೆ

ನವದೆಹಲಿ,ಸೆ.22-ದೇಶಾದ್ಯಂತ ದಕ್ಷಿಣ-ಪಶ್ಚಿಮ ಮುಂಗಾರು (ನೈಋತ್ಯ ಮಾನ್ಸೂನ್) ನಿರ್ಗಮನ ಪ್ರಕ್ರಿಯೆ ಆರಂಭವಾಗುವ ಬೆನ್ನಲ್ಲೇ ಹವಾಮಾನ ವೈಪರೀತ್ಯ ಉಂಟಾಗಿದ್ದು, ದೇಶದ ವಿವಿಧ ಭಾಗಗಳಲ್ಲಿ ಹವಾಮಾನ ವ್ಯವಸ್ಥೆಯು ದಿಢೀರ್ ಬದಲಾಗಿದೆ. ಮುಂಗಾರು ಮಾರುತಗಳು ನಿರ್ಗಮಿಸುವ ಮುನ್ನ ದೇಶದ ಸುಮಾರು 24 ರಾಜ್ಯಗಳಲ್ಲಿ ಮುಂದಿನ ಕೆಲವು ದಿನಗಳ ಕಾಲ ಗುಡುಗು, ಮಿಂಚು ಹಾಗೂ ಬಲವಾದ ಗಾಳಿ ಸಹಿತ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.



ಹವಾಮಾನ ಇಲಾಖೆಯ ವರದಿಯ ಪ್ರಕಾರ, ಬಂಗಾಳ ಕೊಲ್ಲಿಯಲ್ಲಿ ಉಂಟಾಗಿರುವ ವಾಯುಭಾರ ಕುಸಿತ ಮತ್ತು ವಿವಿಧ ಪ್ರದೇಶಗಳಲ್ಲಿ ಸಕ್ರಿಯವಾಗಿರುವ ಸೈಕ್ಲೋನಿಕ್ ಸಕ್ರ್ಯುಲೇಶನ್ ಪರಿಣಾಮವಾಗಿ ಈ ಮಳೆ ವಾತಾವರಣ ನಿರ್ಮಾಣವಾಗಿದೆ. ಪಶ್ಚಿಮ ರಾಜಸ್ಥಾನದ ಕಡೆಯಿಂದ ಮುಂಗಾರು ವಾಪಸಾತಿ ಪ್ರಕ್ರಿಯೆ ಪ್ರಗತಿಯಲ್ಲಿದ್ದರೂ, ಪೂರ್ವ ಮತ್ತು ದಕ್ಷಿಣ ಭಾರತದ ಕರಾವಳಿ ಭಾಗಗಳಲ್ಲಿ ತೀವ್ರವಾದ ಮಳೆ ಪ್ರಭಾವ ಮುಂದುವರಿಯಲಿದೆ. ಕರಾವಳಿ ತೀರದ ಪ್ರದೇಶಗಳಲ್ಲಿ ಗಂಟೆಗೆ 40 ರಿಂದ 60 ಕಿಲೋಮೀಟರ್ ವೇಗದಲ್ಲಿ ಬಿರುಗಾಳಿ ಬೀಸುವ ಸಾಧ್ಯತೆಯಿದ್ದು, ಕಡಲ ತೀರದ ಜನರಿಗೆ ಹಾಗೂ ಮೀನುಗಾರರಿಗೆ ಜಾಗರೂಕರಾಗಿರಲು ಸೂಚಿಸಲಾಗಿದೆ.

ಉತ್ತರ ಪ್ರದೇಶ, ಬಿಹಾರ, ಜಾರ್ಖಂಡ್, ಒಡಿಶಾ, ಪಶ್ಚಿಮ ಬಂಗಾಳ, ಮಧ್ಯಪ್ರದೇಶ ಮತ್ತು ಛತ್ತೀಸ್‌ಗಢ ಸೇರಿದಂತೆ ಮಧ್ಯ ಹಾಗೂ ಪೂರ್ವ ಭಾರತದ ರಾಜ್ಯಗಳಲ್ಲಿ ವ್ಯಾಪಕ ಮಳೆಯಾಗುವ ಮುನ್ಸೂಚನೆ ಇದೆ. ಅಷ್ಟೇ ಅಲ್ಲದೆ, ಈಶಾನ್ಯ ರಾಜ್ಯಗಳಾದ ಅಸ್ಸಾಂ, ಮೇಘಾಲಯ, ಅರುಣಾಚಲ ಪ್ರದೇಶ, ನಾಗಾಲ್ಯಾಂಡ್, ಮಣಿಪುರ, ಮಿಜೋರಾಂ, ತ್ರಿಪುರಾ ಮತ್ತು ಸಿಕ್ಕಿಂಗಳಲ್ಲಿಯೂ ಭಾರೀ ಮಳೆಯಾಗುವ ಎಚ್ಚರಿಕೆ ನೀಡಲಾಗಿದೆ. ದಕ್ಷಿಣ ಭಾರತದ ಕರ್ನಾಟಕ, ಕೇರಳ, ತಮಿಳುನಾಡು, ಆಂಧ್ರಪ್ರದೇಶ, ತೆಲಂಗಾಣ, ಹಾಗೆಯೇ ಗುಜರಾತ್, ಮಹಾರಾಷ್ಟ್ರ ಮತ್ತು ಗೋವಾ ರಾಜ್ಯಗಳ ಹಲವು ಜಿಲ್ಲೆಗಳಲ್ಲಿ ಗುಡುಗು ಸಹಿತ ಸಾಧಾರಣದಿಂದ ಭಾರೀ ಮಳೆಯಾಗುವ ನಿರೀಕ್ಷೆಯಿದೆ.

ಹಿಮಾಚಲ ಪ್ರದೇಶ, ಉತ್ತರಾಖಂಡ ಹಾಗೂ ಜಮ್ಮು-ಕಾಶ್ಮೀರ ಮುಂತಾದ ಗುಡ್ಡಗಾಡು ಪ್ರದೇಶಗಳಲ್ಲಿಯೂ ಪಾಶ್ಚಾತ್ಯ ದಿಕ್ಚ್ಯುತಿ ಸಕ್ರಿಯವಾಗಿರುವುದರಿಂದ ಮಳೆಯ ಜೊತೆಗೆ ತಾಪಮಾನ ಕುಸಿಯುವ ಸಾಧ್ಯತೆಯಿದೆ. ದೆಹಲಿ-ಎನ್‌ಸಿಆರ್ ವ್ಯಾಪ್ತಿಯಲ್ಲಿ ಆಕಾಶವು ಭಾಗಶಃ ಮೋಡದಿಂದ ಕೂಡಿದ್ದು, ಕೆಲವು ಪ್ರದೇಶಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗಬಹುದು ಎಂದು ಅಂದಾಜಿಸಲಾಗಿದೆ. ಮುಂಗಾರು ಅವಧಿಯ ಕೊನೆಯಲ್ಲಿ ಎದುರಾಗಿರುವ ಈ ದಿಢೀರ್ ಮಳೆಯಿಂದಾಗಿ ತಗ್ಗು ಪ್ರದೇಶಗಳಲ್ಲಿ ನೀರು ನಿಲ್ಲುವ ಅಪಾಯವಿದ್ದು, ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಇಲಾಖೆ ಸಲಹೆ ನೀಡಿದೆ.

# ಯಶಸ್ವಿನಿ ಕಾರ್ಡ್ ಹೆಸರಿನಲ್ಲಿ ಹಣ ವಸೂಲಿ ನಕಲಿ ಕಾರ್ಡ್ ವಿತರಣೆ: ಗ್ರಾಮಸ್ಥರ ಆಕ್ರೋಶ

ಕೊಪ್ಪಳ.ಸೆ.22- ಜಿಲ್ಲೆಯ ಯಲಬುರ್ಗಾ ತಾಲೂಕಿನ ಹಿರೇಮ್ಯಾಗೇರಿ ಗ್ರಾಮದಲ್ಲಿ ಯಶಸ್ವಿನಿ ಕಾರ್ಡ್ ಮಾಡಿ ಕೊಡುವುದಾಗಿ ಹೇಳಿಕೊಂಡು ಜನರಿಂದ ಹಣ ಪಡೆದು ನಕಲಿ ಕಾರ್ಡ್‌ಗಳನ್ನು ವಿತರಿಸಲಾಗಿದೆ ಎಂಬ ಆರೋಪ ಕೇಳಿಬಂದಿದ್ದು, ಗ್ರಾಮದಲ್ಲಿ ಭಾರಿ ಆಕ್ರೋಶ ವ್ಯಕ್ತವಾಗಿದೆ.

ಹುಬ್ಬಳ್ಳಿಯ ಯಶಸ್ವಿನಿ ನಗರ ಮತ್ತು ಗ್ರಾಮೀಣ ಅಭಿವೃದ್ಧಿ ಸೇವಾ ಸಂಸ್ಥೆಯವರು ಎಂದು ಹೇಳಿಕೊಂಡು ಬಂದ ತಂಡವೊಂದು ಗ್ರಾಮಸ್ಥರಿಗೆ ಯಶಸ್ವಿನಿ ಕಾರ್ಡ್ ಮಾಡಿಕೊಡುವುದಾಗಿ ನಂಬಿಸಿ, ಪ್ರತಿ ಕಾರ್ಡ್‌ಗೆ 300ರಂತೆ ಹಣ ಪಡೆದುಕೊಂಡಿದೆ.ಸುಮಾರು 1,500ಕ್ಕೂ ಹೆಚ್ಚು ಕಾರ್ಡ್‌ಗಳನ್ನು ಮಾಡಿಕೊಡಲಾಗಿದೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ಆಧಾರ್, ಪಡಿತರ ಚೀಟಿ ಪಡೆದು ಮಾಹಿತಿ ಸಂಗ್ರಹ :

ಸುಮಾರು ಒಂದು ವಾರದ ಹಿಂದೆ ಸಂಸ್ಥೆಯ ಸಿಬ್ಬಂದಿ ಎಂದು ಹೇಳಿಕೊಂಡ ತಂಡವೊಂದು ಹಿರೇಮ್ಯಾಗೇರಿ ಗ್ರಾಮಕ್ಕೆ ಆಗಮಿಸಿ, ಗ್ರಾಮಸ್ಥರಿಂದ ಆಧಾರ್ ಕಾರ್ಡ್, ಪಡಿತರ ಚೀಟಿ ಹಾಗೂ ಪಾಸ್‌ಪೋರ್ಟ್ ಅಳತೆಯ ಫೋಟೋಗಳನ್ನು ಪಡೆದುಕೊಂಡಿತ್ತು. ಬಳಿಕ ಯಶಸ್ವಿನಿ ಯೋಜನೆಯಡಿ ಕಾರ್ಡ್ ಮಾಡಿಕೊಡಲಾಗುವುದು ಎಂದು ತಿಳಿಸಿ, ಹಣವನ್ನು ಸಂಗ್ರಹಿಸಿಕೊಂಡು ಹೋಗಿದ್ದರು ಎಂದು ಸ್ಥಳೀಯರು ತಿಳಿಸಿದ್ದಾರೆ.

ಸುಮಾರು ಎಂಟು ಜನರ ತಂಡ ಗ್ರಾಮಕ್ಕೆ ಆಗಮಿಸಿ, ಕಾರ್ಡ್‌ಗಳಿಗೆ ಸಂಬಂಧಿಸಿದಂತೆ ಹಣ ಸಂಗ್ರಹಿಸುತ್ತಿದ್ದಾಗ ಗ್ರಾಮಸ್ಥರಿಗೆ ಅನುಮಾನ ಮೂಡಿದೆ. ಈ ವೇಳೆ ಕೆಲವರು ಕಾರ್ಡ್‌ಗಳನ್ನು ಪರಿಶೀಲಿಸಿದಾಗ ವಿಷಯ ಬೆಳಕಿಗೆ ಬಂದಿದೆ.

ಆಸ್ಪತ್ರೆಗಳಿಗೆ ಕರೆ ಮಾಡಿದಾಗ ಅಸಲಿ ವಿಚಾರ ಬಯಲು :

ಕಾರ್ಡ್ ಪಡೆದ ಕೆಲ ಗ್ರಾಮಸ್ಥರು ಹುಬ್ಬಳ್ಳಿ, ಬೆಂಗಳೂರು ಸೇರಿದಂತೆ ವಿವಿಧ ನಗರಗಳ ಆಸ್ಪತ್ರೆಗಳಿಗೆ ದೂರವಾಣಿ ಮೂಲಕ ಸಂಪರ್ಕಿಸಿ, ಈ ಕಾರ್ಡ್ ತೋರಿಸಿದರೆ ಚಿಕಿತ್ಸೆ ಪಡೆಯಬಹುದೇ ಎಂದು ವಿಚಾರಿಸಿದ್ದಾರೆ. ಆದರೆ, ಆಸ್ಪತ್ರೆಯ ಸಿಬ್ಬಂದಿ ಇಂತಹ ಯಾವುದೇ ಕಾರ್ಡ್‌ನಿಂದ ತಮ್ಮ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಲು ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ.

ಇದರಿಂದ ಆಕ್ರೋಶಗೊಂಡ ಗ್ರಾಮಸ್ಥರು, ತಮಗೆ ಮೋಸ ಮಾಡಲಾಗಿದೆ ಎಂದು ಆರೋಪಿಸಿ ಸಂಸ್ಥೆಯ ಸಿಬ್ಬಂದಿಯನ್ನು ಪ್ರಶ್ನಿಸಿದ್ದಾರೆ. ಪರಿಸ್ಥಿತಿ ಉದ್ವಿಗ್ನವಾಗುತ್ತಿದ್ದಂತೆ ಸಿಬ್ಬಂದಿಯನ್ನು ಗ್ರಾಮ ಪಂಚಾಯಿತಿ ಕಚೇರಿ ಆವರಣದಲ್ಲಿ ಕೂಡಿ ಹಾಕಿ, ತಮ್ಮ ಹಣವನ್ನು ವಾಪಸ್ ನೀಡಬೇಕು ಹಾಗೂ ನಕಲಿ ಕಾರ್ಡ್ ನೀಡಿದವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಗ್ರಾಪಂ ಕಚೇರಿಗೆ ನೂರಾರು ಜನರ ಮುತ್ತಿಗೆ :

ಘಟನೆ ತಿಳಿಯುತ್ತಿದ್ದಂತೆ ಗ್ರಾಮದ ಸ್ಥಳೀಯ ಯುವಕರು, ಮಹಿಳೆಯರು ಸೇರಿದಂತೆ ನೂರಾರು ಗ್ರಾಮಸ್ಥರು ಗ್ರಾಮ ಪಂಚಾಯಿತಿ ಕಚೇರಿಗೆ ತೆರಳಿ ಮುತ್ತಿಗೆ ಹಾಕಿದರು. ಯಶಸ್ವಿನಿ ಕಾರ್ಡ್ ಹೆಸರಿನಲ್ಲಿ ಹಣ ಸಂಗ್ರಹಿಸಲು ಅವಕಾಶ ನೀಡಿದವರು ಯಾರು ? ಸಂಸ್ಥೆಗೆ ಗ್ರಾಮದಲ್ಲಿ ಚಟುವಟಿಕೆ ನಡೆಸಲು ಅನುಮತಿ ನೀಡಲಾಗಿತ್ತೇ ಗ್ರಾಮಸ್ಥರ ಆಧಾರ್, ಪಡಿತರ ಚೀಟಿ ಹಾಗೂ ಫೋಟೋಗಳನ್ನು ಏಕೆ ಸಂಗ್ರಹಿಸಲಾಗಿದೆ ? ಎಂಬ ಪ್ರಶ್ನೆಗಳನ್ನು ಪಂಚಾಯಿತಿ ಅಧಿಕಾರಿಗಳ ಮುಂದಿಟ್ಟರು.

ತಮ್ಮ ದಾಖಲೆಗಳನ್ನು ಪಡೆದುಕೊಂಡಿರುವ ಹಿನ್ನೆಲೆಯಲ್ಲಿ ಅವುಗಳ ದುರುಪಯೋಗವಾಗದಂತೆ ಕ್ರಮ ಕೈಗೊಳ್ಳಬೇಕು. ಹಣ ಪಡೆದುಕೊಂಡಿರುವವರ ವಿರುದ್ಧ ಕಾನೂನು ಕ್ರಮ ಕೈಗೊಂಡು, ಗ್ರಾಮಸ್ಥರಿಂದ ಸಂಗ್ರಹಿಸಿದ ಹಣವನ್ನು ಮರಳಿ ಕೊಡಿಸಬೇಕು ಎಂದು ಒತ್ತಾಯಿಸಿದರು.

ಈ ಹಿಂದೆ ಗ್ರಾಪಂನಿಂದ ಜಾಗೃತಿ :

ಯಶಸ್ವಿನಿ ಕಾರ್ಡ್ ಸೇರಿದಂತೆ ವಿವಿಧ ಯೋಜನೆಗಳ ಹೆಸರಿನಲ್ಲಿ ಅನಧಿಕೃತವಾಗಿ ಹಣ ವಸೂಲಿ ಮಾಡುವವರ ಬಗ್ಗೆ ಗ್ರಾಮ ಪಂಚಾಯಿತಿ ವತಿಯಿಂದ ಈ ಹಿಂದೆ ವಾಹನದ ಮೂಲಕ ಗ್ರಾಮದಲ್ಲಿ ಜಾಗೃತಿ ಮೂಡಿಸಲಾಗಿತ್ತು ಎಂದು ಸ್ಥಳೀಯರು ಹೇಳಿದ್ದಾರೆ.

ಆದರೆ,ಇದೀಗ ಘಟನೆ ನಡೆದ ಬಳಿಕ ಗ್ರಾಮ ಪಂಚಾಯಿತಿ ಅಧಿಕಾರಿಗಳು ನಮಗೆ ಯಾವುದೇ ಮಾಹಿತಿ ಇಲ್ಲ ಎಂದು ಹೇಳುತ್ತಿರುವುದು ಸರಿಯಲ್ಲ. ಗ್ರಾಮದಲ್ಲಿ ಇಂತಹ ಚಟುವಟಿಕೆ ನಡೆಯುತ್ತಿರುವುದು ಪಂಚಾಯಿತಿಯ ಗಮನಕ್ಕೆ ಬಂದಿರಲಿಲ್ಲವೇ ? ಎಂದು ಸ್ಥಳೀಯರು ಪ್ರಶ್ನಿಸಿದ್ದಾರೆ.

ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಯಾವುದೇ ಸಂಸ್ಥೆ ಜನರಿಂದ ದಾಖಲೆಗಳನ್ನು ಪಡೆದು ಹಣ ಸಂಗ್ರಹಿಸುವ ಸಂದರ್ಭದಲ್ಲಿ ಅದರ ಸತ್ಯಾಸತ್ಯತೆ ಪರಿಶೀಲಿಸಬೇಕು. ಜನರ ದಾಖಲೆಗಳ ಸುರಕ್ಷತೆ ಹಾಗೂ ಹಣದ ವಿಚಾರದಲ್ಲಿ ಪಂಚಾಯಿತಿ ಅಧಿಕಾರಿಗಳು ಜವಾಬ್ದಾರಿ ವಹಿಸಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದರು.

ಸ್ಥಳಕ್ಕೆ ಪಿಎಸ್‌ಐ ಭೇಟಿ :

ಗ್ರಾಮದಲ್ಲಿ ಜನರು ಆಕ್ರೋಶ ವ್ಯಕ್ತಪಡಿಸುತ್ತಿರುವ ಮಾಹಿತಿ ತಿಳಿದು ಹಿರೇಮ್ಯಾಗೇರಿ ಗ್ರಾಮ ಪಂಚಾಯಿತಿ ಕಚೇರಿಗೆ ಪಿಎಸ್‌ಐ ವಿಜಯಪ್ರತಾಪ ಭೇಟಿ ನೀಡಿ ಪರಿಸ್ಥಿತಿ ಪರಿಶೀಲಿಸಿದರು. ಗ್ರಾಮಸ್ಥರ ಅಹವಾಲು ಆಲಿಸಿ, ಘಟನೆಯ ಕುರಿತು ಮಾಹಿತಿ ಪಡೆದುಕೊಂಡರು.

ಆಕ್ರೋಶಗೊಂಡಿದ್ದ ಜನರನ್ನು ಸಮಾಧಾನಪಡಿಸಿದ ಅವರು, ಘಟನೆಗೆ ಸಂಬಂಧಿಸಿದ ದಾಖಲೆಗಳು, ಹಣ ವಸೂಲಿ ಮಾಡಿರುವ ವಿವರ ಹಾಗೂ ಕಾರ್ಡ್‌ಗಳ ಕುರಿತು ಮಾಹಿತಿ ಸಂಗ್ರಹಿಸಿ, ಕಾನೂನುಬದ್ಧವಾಗಿ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

ಯಾವುದೇ ಸಂಸ್ಥೆಯವರು ಸರ್ಕಾರದ ಯೋಜನೆ ಅಥವಾ ಆರೋಗ್ಯ ಯೋಜನೆಯ ಹೆಸರಿನಲ್ಲಿ ಸಾರ್ವಜನಿಕರಿಂದ ಹಣ ಪಡೆದುಕೊಳ್ಳುವ ಮುನ್ನ ಅದರ ಅಧಿಕೃತತೆ ಪರಿಶೀಲಿಸುವಂತೆ ಪೊಲೀಸರು ಹಾಗೂ ಅಧಿಕಾರಿಗಳು ಗ್ರಾಮಸ್ಥರಿಗೆ ಸೂಚಿಸಿದರು.

ಪಂಚಾಯಿತಿಯಿಂದ ದೂರು -ಪಿಡಿಒ :

ನಮ್ಮ ಗಮನಕ್ಕೆ ಈ ಸಂಸ್ಥೆಯ ಚಟುವಟಿಕೆಗಳು ಬಂದಿರಲಿಲ್ಲ. ಯಾವುದೇ ಸಂಸ್ಥೆಗೆ ಗ್ರಾಮ ಪಂಚಾಯಿತಿಯಿಂದ ಪರವಾನಗಿ ನೀಡಿಲ್ಲ. ನಮ್ಮ ಸಿಬ್ಬಂದಿಯನ್ನು ವಿಚಾರಿಸಿದಾಗ, ಗ್ರಾಮ ಪಂಚಾಯಿತಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು ಹೇಳಿದ್ದಾರೆ ಎಂದು ಸಂಸ್ಥೆಯವರು ತಿಳಿಸಿರುವುದಾಗಿ ಹೇಳುತ್ತಿದ್ದಾರೆ. ಈ ಕುರಿತು ಪರಿಶೀಲಿಸಿ, ಗ್ರಾಮ ಪಂಚಾಯಿತಿ ವತಿಯಿಂದ ಪೊಲೀಸ್ ಠಾಣೆಗೆ ದೂರು ನೀಡಲಾಗುವುದು ಎಂದು ಹಿರೇಮ್ಯಾಗೇರಿ ಗ್ರಾಮ ಪಂಚಾಯಿತಿ ಪಿಡಿಒ ಮಂಗಳೇಶ ನಾಯಕ ತಿಳಿಸಿದ್ದಾರೆ.

ಘಟನೆಯ ಕುರಿತು ಸಮಗ್ರ ತನಿಖೆ ನಡೆಸಿ, ಸಾರ್ವಜನಿಕರಿಂದ ಸಂಗ್ರಹಿಸಿರುವ ಹಣ ಹಾಗೂ ದಾಖಲೆಗಳ ಬಗ್ಗೆ ಸ್ಪಷ್ಟ ಮಾಹಿತಿ ನೀಡಬೇಕು. ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ (ನಿ.), ಬೈಲೂರು
ಕುರುಗೋಡು ತಾಲೂಕು, ಬಳ್ಳಾರಿ ಜಿಲ್ಲೆ. Reg No.DRY/S/5162-76-77 Dt. 9-9-76
ಆರ್ಥಿಕ ನೆರವು: ಭಾರತೀಯ ಸ್ಟೇಟ್ ಬ್ಯಾಂಕ್ (ಕೃಷಿ ವಾಣಿಜ್ಯ ಶಾಖೆ) ಬಳ್ಳಾರಿ.
50ನೇ ವರ್ಷದ ಹುಟ್ಟುಹಬ್ಬದ ಸಂಭ್ರಮದಲ್ಲಿ ನಮ್ಮ ಸಂಘ 1976 - 2026
2025-2026 ನೇ ಸಾಲಿನ
ವಾರ್ಷಿಕ ಮಹಾಜನ ಸಭೆಯ ಆಹ್ವಾನ ಪತ್ರಿಕೆ
ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ., ಬೈಲೂರು. ಕುರುಗೋಡು ತಾಲ್ಲೂಕು ಇದರ 2025-26ನೇ ಸಾಲಿನ ಸಂಘದ ವಾರ್ಷಿಕ ಮಹಾಜನ ಸಭೆಯನ್ನು ದಿನಾಂಕ: 24-09-2026 ರಂದು ಗುರುವಾರ ಬೆಳಿಗ್ಗೆ 11.00 ಗಂಟೆಗೆ ಶ್ರೀ ಶರಣ ಮಲ್ಲಪ್ಪ ತಾತನವರ ಆವರಣದಲ್ಲಿರುವ ನೂತನ ಕಛೇರಿಯ ಆವರಣದಲ್ಲಿ ಸಂಘದ ಅಧ್ಯಕ್ಷರಾದ ಶ್ರೀಹೆಚ್.ಅಂಜಿನಪ್ಪ ಇವರ ಅಧ್ಯಕ್ಷತೆಯಲ್ಲಿ ಜರುಗಿಸಲು ಗೊತ್ತುಪಡಿಸಲಾಗಿದೆ. ಪ್ರಯುಕ್ತ ಸರ್ವ ಸದಸ್ಯರು ಸಭೆಗೆ ಹಾಜರಾಗಬೇಕಾಗಿ ವಿನಂತಿಸಲಾಗಿದೆ.
ಆಡಳಿತ ಸಮಿತಿಯ ಪರವಾಗಿ
ಶ್ರೀ ಹೆಚ್.ಅಂಜಿನಪ್ಪ, ಅಧ್ಯಕ್ಷರು
ಶ್ರೀ ಹೊ.ತಿಪ್ಪಯ್ಯ, ಉಪಾಧ್ಯಕ್ಷರು
ಶ್ರೀ ಮದ್ದೇಶರಾವ್, ಮುಖ್ಯ ಕಾರ್ಯನಿರ್ವಾಹಕರು
ವಿ.ಸೂ: ಸಭೆಯ ಆಹ್ವಾನ ಪತ್ರಿಕೆ ತಲುಪದೇ ಇರುವ ಸದಸ್ಯರು ಇದನ್ನೇ ಆಹ್ವಾನ ಪತ್ರಿಕೆ ಎಂದು ತಿಳಿದು ಸಭೆಗೆ ಆಗಮಿಸತಕ್ಕದ್ದು.

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ (ನಿ.), ಕಲ್ಲುಕಂಭ
ಕುರುಗೋಡು ತಾಲೂಕು, ಬಳ್ಳಾರಿ ಜಿಲ್ಲೆ. Reg No.DRY/S-5159-76-77 Dt. 9-9-76
ಆರ್ಥಿಕ ನೆರವು: ಭಾರತೀಯ ಸ್ಟೇಟ್ ಬ್ಯಾಂಕ್ (ಕೃಷಿ ವಾಣಿಜ್ಯ ಶಾಖೆ) ಬಳ್ಳಾರಿ.
2025-2026 ನೇ ಸಾಲಿನ
ವಾರ್ಷಿಕ ಮಹಾಜನ ಸಭೆಯ ಆಹ್ವಾನ ಪತ್ರಿಕೆ
ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ., ಕಲ್ಲುಕಂಭ. ಕುರುಗೋಡು ತಾಲ್ಲೂಕು ಇದರ 2025-26ನೇ ಸಾಲಿನ ಸಂಘದ ವಾರ್ಷಿಕ ಮಹಾಜನ ಸಭೆಯನ್ನು ದಿನಾಂಕ: 23-9-2026 ರಂದು ಬುಧವಾರ ಬೆಳಿಗ್ಗೆ 10.30 ಗಂಟೆಗೆ ಸಂಘದ ಆವರಣದಲ್ಲಿ ಸಂಘದ ಅಧ್ಯಕ್ಷರಾದ ಶ್ರೀ ಮುಕ್ಕಡಯ್ಯನವರ ನಾಗಪ್ಪ ಇವರ ಅಧ್ಯಕ್ಷತೆಯಲ್ಲಿ ಜರುಗಿಸಲು ಗೊತ್ತುಪಡಿಸಲಾಗಿದೆ. ಪ್ರಯುಕ್ತ ಸರ್ವ ಸದಸ್ಯರು ಸಭೆಗೆ ಹಾಜರಾಗಬೇಕಾಗಿ ವಿನಂತಿಸಲಾಗಿದೆ.
ಆಡಳಿತ ಸಮಿತಿಯ ಪರವಾಗಿ
ಶ್ರೀ ಮುಕ್ಕಡಯ್ಯನವರ ನಾಗಪ್ಪ, ಅಧ್ಯಕ್ಷರು
ಶ್ರೀ ವಾಯುಪುತ್ರ ರೆಡ್ಡಿ, ಉಪಾಧ್ಯಕ್ಷರು
ಶ್ರೀ ವಗ್ಗರ, ಗಿರಿಮಲ್ಲಯ್ಯ, ಪ್ರಭಾರ ಮುಖ್ಯ ಕಾರ್ಯನಿರ್ವಾಹಕರು
ವಿ.ಸೂ: ಸಭೆಯ ಆಹ್ವಾನ ಪತ್ರಿಕೆ ತಲುಪದೇ ಇರುವ ಸದಸ್ಯರು ಇದನ್ನೇ ಆಹ್ವಾನ ಪತ್ರಿಕೆ ಎಂದು ತಿಳಿದು ಸಭೆಗೆ ಆಗಮಿಸತಕ್ಕದ್ದು.

# ಕರಾವಳಿ, ಒಳನಾಡಲ್ಲಿ ಮಳೆ ನಿರೀಕ್ಷೆ



ಬೆಂಗಳೂರು, ಸೆ.22-ರಾಜ್ಯದ ವಿವಿಧ ಭಾಗಗಳಲ್ಲಿ ಮುಂಗಾರು ಚುರುಕುಗೊಂಡಿದ್ದು, ಇಂದು (ಸೆಪ್ಟೆಂಬರ್ 22) ಕರಾವಳಿ, ಉತ್ತರ ಒಳನಾಡು ಹಾಗೂ ದಕ್ಷಿಣ ಒಳನಾಡಿನ ಬಹುತೇಕ ಜಿಲ್ಲೆಗಳಲ್ಲಿ ಗುಡುಗು, ಮಿಂಚು ಮತ್ತು ಬಿರುಗಾಳಿ ಸಹಿತ ಭಾರಿ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆಯ ಬೆಂಗಳೂರು ಕೇಂದ್ರ ಮುನ್ಸೂಚನೆ ನೀಡಿದೆ.

ಮಳೆಯ ಸಮಯದಲ್ಲಿ ಗಂಟೆಗೆ 30 ರಿಂದ 40 ಕಿ.ಮೀ ವೇಗದಲ್ಲಿ ಬಿರುಗಾಳಿ ಬೀಸುವ ಸಾಧ್ಯತೆಯಿದ್ದು, ಮುನ್ನೆಚ್ಚರಿಕೆಯಾಗಿ ದಕ್ಷಿಣ ಕನ್ನಡ ಜಿಲ್ಲೆಗೆ 'ಯೆಲ್ಲೋ ಅಲರ್ಟ್' ಘೋಷಿಸಲಾಗಿದೆ. ಇಲ್ಲಿನ ಒಂದೆರಡು ಕಡೆಗಳಲ್ಲಿ ಬಿರುಗಾಳಿ ಸಹಿತ ಭಾರಿ ಮಳೆಯಾಗಲಿದೆ. ಇನ್ನು ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳ ಬಹುತೇಕ ಭಾಗಗಳಲ್ಲಿ ಹಗುರದಿಂದ ಸಾಧಾರಣ ಪ್ರಮಾಣದ ಮಳೆಯಾಗುವ ಸಾಧ್ಯತೆಯಿದೆ.

ಉತ್ತರ ಒಳನಾಡಿನ ಬಾಗಲಕೋಟೆ, ಗದಗ, ಕೊಪ್ಪಳ ಮತ್ತು ರಾಯಚೂರು ಜಿಲ್ಲೆಗಳಲ್ಲಿಯೂ ಬಿರುಗಾಳಿ ಸಹಿತ ಭಾರಿ ಮಳೆಯಾಗುವ ನಿರೀಕ್ಷೆಯಿದೆ. ಇದರೊಂದಿಗೆ ಬೆಳಗಾವಿ, ಬೀದರ್, ಧಾರವಾಡ, ಹಾವೇರಿ, ಕಲಬುರಗಿ, ವಿಜಯಪುರ ಮತ್ತು ಯಾದಗಿರಿ ಜಿಲ್ಲೆಗಳ ಹಲವು ಪ್ರದೇಶಗಳಲ್ಲಿ ಸಾಧಾರಣ ಮಳೆಯಾಗಲಿದೆ.ದಕ್ಷಿಣ ಒಳನಾಡಿನ ಜಿಲ್ಲೆಗಳಾದ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ಕೋಲಾರ, ಮಂಡ್ಯ, ಮೈಸೂರು, ರಾಮನಗರ ಹಾಗೂ ತುಮಕೂರು ಜಿಲ್ಲೆಗಳ ಒಂದೆರಡು ಕಡೆಗಳಲ್ಲಿ ಗುಡುಗು ಸಹಿತ ಭಾರಿ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

# ಸ್ಪರ್ಧಾತ್ಮಕ ಪರೀಕ್ಷೆ ಸಿದ್ಧತೆಗೆ ತಂತ್ರಜ್ಞಾನ ಪೂರಕ: ಪ್ರೊ.ಕೆರಮೇಶ್



ಬಳ್ಳಾರಿ,22- ಇಂದಿನ ದಿನಮಾನಗಳಲ್ಲಿ ಯಾವುದೇ ಮಾದರಿಯ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ತಂತ್ರಜ್ಞಾನದ ಸಮರ್ಪಕ ಬಳಕೆ ಸೂಕ್ತ ಎಂದು ಕೊಪ್ಪಳ ವಿಶ್ವವಿದ್ಯಾಲಯದ ಪರೀಕ್ಷಾಂಗ ಕುಲಸಚಿವ ಪ್ರೊ.ಕೆ ರಮೇಶ್ ಅವರು ಹೇಳಿದರು.

ಸೋಮವಾರ, ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ.ಬಿ.ಆರ್ ಅಂಬೇಡ್ಕರ್ ಸಭಾಭವನದಲ್ಲಿ ಅರ್ಥಶಾಸ್ತ್ರ ವಿಭಾಗ ಹಾಗೂ ವಿವಿಯ ಆಂತರಿಕ ಗುಣಮಟ್ಟ ಕೋಶದ ಸಹಭಾಗಿತ್ವದಲ್ಲಿ ಆರಂಭವಾಗಿರುವ ಎರಡು ದಿನಗಳ ಕೆ-ಸೆಟ್ ಪರೀಕ್ಷಾ ತರಬೇತಿ ಶಿಬಿರದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

ತಂತ್ರಜ್ಞಾನವು ಎಲ್ಲ ಕ್ಷೇತ್ರದಲ್ಲಿ ಮನೆ ಮಾಡಿದೆ. ಆಧುನಿಕ ವಿದ್ಯಮಾನಗಳಿಗೆ ತಕ್ಕಂತೆ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಕಾಲಕ್ರಮೇಣ ಆಧುನೀಕರಣಗೊಂಡು ನವಜ್ಞಾನಗಳನ್ನು, ಕೌಶಲ್ಯಗಳನ್ನು ಕಲಿಯಬೇಕು. ವಿಶ್ವದಲ್ಲಿ ನಡೆಯುವ ಹೊಸ ಆವಿಷ್ಕಾರಗಳು, ಸಂಶೋಧನಾ ಕ್ರಮಗಳನ್ನು ಅವಲೋಕಿಸುವ ಕಲೆ ಎಲ್ಲರೂ ಕಲಿಯಬೇಕು. ಮಷಿನ್ ಲರ್ನಿಂಗ್, ಎಐ ಮಾದರಿಯ ತಂತ್ರಜ್ಞಾನಗಳ ಮೂಲಕ ಸಾಂಪ್ರದಾಯಿಕ ಅಧ್ಯಯನ ಪದ್ಧತಿಯೊಂದಿಗೆ ನವ ಮಾದರಿಯ ಕಲಿಕೆಗಳನ್ನು ಅಳವಡಿಸಿಕೊಳ್ಳುವುದರಿಂದ ಯಾವುದೇ ರೀತಿಯ ಪರೀಕ್ಷೆಗಳನ್ನು ಸರಾಗವಾಗಿ ಎದುರಿಸಬಹುದು ಎಂದರು.

ವಿದ್ಯಾರ್ಥಿಗಳು ಅಂತರ್‌ಶಿಸ್ತೀಯ ಅಧ್ಯಯನಗಳ ಮೂಲಕ ಎಲ್ಲ ಕ್ಷೇತ್ರಗಳಲ್ಲಿನ ನೇರ ಮತ್ತು ಪರೋಕ್ಷ ವಿಷಯಗಳನ್ನು ಒಗ್ಗೂಡಿಸಿಕೊಂಡು ಪರೀಕ್ಷೆಗಳನ್ನು ಎದುರಿಸಲು ಸಿದ್ಧತೆ ಮಾಡಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಮುಖ್ಯ ಭಾಷಣಕಾರರಾಗಿ ವೇದಿಕೆಯಲ್ಲಿದ್ದ ದಾವಣಗೆರೆ ವಿಶ್ವವಿದ್ಯಾಲಯದ ಅರ್ಥಶಾಸ್ತ್ರ ಪ್ರಾಧ್ಯಾಪಕ ಪ್ರೊ.ರಂಗಪ್ಪ ಅವರು ಮಾತನಾಡಿ, ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಕೇವಲ ಓದುವ ಹವ್ಯಾಸದಿಂದ ಪಾಸಾಗಲು ಸಾಧ್ಯವಿಲ್ಲ. ಬದಲಾಗಿ ನಿರ್ದಿಷ್ಟ ಕ್ರಮಾಂಕದ ಓದುವ ಪರಿಕ್ರಮಗಳನ್ನು ಪಟ್ಟಿ ಮಾಡಿಕೊಂಡು ಆ ಪ್ರಕಾರ ಯೋಜನೆ ರೂಪಿಸಿ ಅಧ್ಯಯನ ಮಾಡಬೇಕು ಎಂದರು.

ಕೆ-ಸೆಟ್ ಪರೀಕ್ಷೆಗಳಲ್ಲಿ ಬೋಧನೆ, ಸಂಶೋಧನೆ, ಸಂವಹನ, ಗಣಿತ, ತಂತ್ರಜ್ಞಾನ, ಪರಿಸರ ಹಾಗೂ ಉನ್ನತ ಶಿಕ್ಷಣಕ್ಕೆ ಪೂರಕವಾಗಿರುವ ಪಠ್ಯಗಳನ್ನು ಸಂಯೋಜಿಸಿ ಪ್ರಶ್ನೆಪತ್ರಿಕೆ ಸಿದ್ಧಪಡಿಸುತ್ತಾರೆ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಜ್ಞಾನಾರ್ಜನೆ, ಅರ್ಥೈಸಿಕೊಳ್ಳುವಿಕೆ ಹಾಗೂ ಅಳವಡಿಸಿಕೊಳ್ಳುವಿಕೆ ಎಂಬ ಮೂರು ತತ್ವಗಳ ಆಧಾರದ ಮೇಲೆ ತಮ್ಮನ್ನು ಪರೀಕ್ಷೆಗಳಿಗೆ ಸನ್ನದ್ಧರನ್ನಾಗಿಸಿಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿವಿಯ ಕುಲಪತಿ ಪ್ರೊ.ಎಂ ಮುನಿರಾಜು ಅವರು ಮಾತನಾಡಿ, ಕೇವಲ ಒಂದು ಅಥವಾ ಎರಡು ದಿನಗಳ ತರಬೇತಿಯಿಂದ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಲು ಸಾಧ್ಯವಿಲ್ಲ. ಹೀಗಾಗಿ ವಿಶ್ವವಿದ್ಯಾಲಯದಲ್ಲಿ ಕೆಎಎಸ್-ಐಎಎಸ್ ಪರೀಕ್ಷಾ ತರಬೇತಿಯನ್ನು ದಿನವೂ ನೀಡಲು ವಿಶ್ವವಿದ್ಯಾಲಯವು ಯೋಜನೆ ರೂಪಿಸಿದ್ದು, ಶೀಘ್ರವೇ ಕಾರ್ಯರೂಪಕ್ಕೆ ಬರಲಿದೆ ಎಂದು ಘೋಷಿಸಿದರು.

ಇದೇ ಸಂದರ್ಭದಲ್ಲಿ ಸ್ನಾತಕೋತ್ತರ ಪದವಿ ಹಂತದಲ್ಲಿ ಕೆ-ಸೆಟ್ ಪರೀಕ್ಷೆ ಉತ್ತೀರ್ಣವಾಗಿರುವ ವಿವಿಯ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು.

ಐಕ್ಯೂಎಸಿ ನಿರ್ದೇಶಕ ಪ್ರೊ.ತಿಪ್ಪೇರುದ್ರಪ್ಪ ಜೆ., ಸಮಾಜ ವಿಜ್ಞಾನ ನಿಕಾಯದ ಡೀನ್ ಪ್ರೊ.ಓ ಮಾರಣ್ಣ, ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಶಶಿಧರ್, ಪ್ರಾಧ್ಯಾಪಕರು ಮತ್ತು ಕಾರ್ಯಕ್ರಮದ ಸಂಚಾಲಕ ಪ್ರೊ.ಮೇಧಾವಿನಿ ಕಟ್ಟಿ, ಸಂಪನ್ಮೂಲ ವ್ಯಕ್ತಿಗಳಾದ ಆಂಧ್ರಪ್ರದೇಶದ ನೆಲ್ಲೂರಿನ ಎನ್‌ಸಿಇಆರ್‌ಟಿಯ ಸಹ ಪ್ರಾಧ್ಯಾಪಕ ಡಾ.ಪ್ರಕಾಶ್ ಬಡಿಗೇರ್ ವೇದಿಕೆಯಲ್ಲಿದ್ದರು.

ಡಾ.ಪಾಂಡುರಂಗ ಆರ್ ನಿರೂಪಿಸಿದರು. ಡಾ.ನಿರಂಜನ್ ಆರ್ ವಂದಿಸಿದರು. ಕೆ-ಸೆಟ್ ಪರೀಕ್ಷೆ ತರಬೇತಿ ಶಿಬಿರದಲ್ಲಿ 200ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪಾಲ್ಗೊಂಡಿದ್ದಾರೆ.

ವಿವಿಯ ವಿವಿಧ ನಿಕಾಯಗಳ ಡೀನರು, ವಿಭಾಗಗಳ ಮುಖ್ಯಸ್ಥರು, ಸಂಯೋಜಕರುಗಳು, ಬೋಧಕ-ಬೋಧಕೇತರ ಸಿಬ್ಬಂದಿ, ಸಂಶೋಧನಾ ವಿದ್ಯಾರ್ಥಿಗಳು, ವಿಭಾಗದ ವಿದ್ಯಾರ್ಥಿಗಳು ಇದ್ದರು.

# ನಿರಂತರ ವಿದ್ಯುತ್ ಪೂರೈಕೆಗಾಗಿ ಒತ್ತಾಯಿಸಿ ರೈತರ ಧರಣಿ

ಸಂಜೆವಾಣಿ ವಾರ್ತೆ

ಸಿರುಗುಪ್ಪ, ಸೆ.22: ತಾಲೂಕಿನ ಸಿರಿಗೇರಿ ಕ್ರಾಸ್‌ನಲ್ಲಿ ರೈತರ ಪಂಪ್ ಸೆಟ್ ಗಳಿಗೆ ನಿರಂತರ ವಿದ್ಯುತ್ ಪೂರೈಕೆಗಾಗಿ ಒತ್ತಾಯಿಸಿ ರೈತರು ಧರಣೆ ನಡೆಸಿದ ಘಟನೆ ನಡೆಯಿತು.

ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆಯ ಅಧ್ಯಕ್ಷ ಆರ್ ಮಾಧವರೆಡ್ಡಿ ಕರೂರು ಮಾತನಾಡಿ, ತಾಲೂಕಿನಲ್ಲಿ ಒಂದೆಡೆ ಭೀಕರ ಬರಗಾಲ, ಮತ್ತೊಂದೆಡೆ ವೇದಾವತಿ ಹಾಗೂ ತುಂಗಭದ್ರ ನದಿ ಪಾತ್ರದಲ್ಲಿ ನೀರಿಲ್ಲದೆ ರೈತರು ಸಂಕಷ್ಟದಲ್ಲಿದ್ದಾರೆ. ಇಂತಹ ಸಮಯದಲ್ಲಿ ಜೆಸ್ಕಾಂ ಅಧಿಕಾರಿಗಳು ಆರು ತಾಸು ವಿದ್ಯುತ್ ನೀಡಿ ಅನ್ಯಾಯ ಮಾಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಹಗಲು ಹೊತ್ತಿನಲ್ಲಿ ಹಳ್ಳಿ ಹಳ್ಳಿಗಳಲ್ಲಿ ವಿದ್ಯುತ್ ದೀಪಗಳ ಉರಿಯುತ್ತಿವೆ. ಆದರೆ ಅದನ್ನೇ ರೈತರು ಕೇಳಿದರೆ ಲೋಡ್ ಸೆಡ್ಡಿಂಗ್ ಎಂದು ಹೇಳುತ್ತೀರಿ ನಾಚಿಕೆಯಾಗುವುದಿಲ್ಲವೆ ಎಂದು ಚಾಗನೂರು ಸಿರಿವಾರ ಹೋರಾಟ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ರೆಡ್ಡಿ ಕಿಡಿಕಾರಿದರು.

ಸುತ್ತಲಿನ ಗ್ರಾಮಗಳ ನೂರಾರು ರೈತರು ಎತ್ತಿನ ಬಂಡಿ ಹಾಗೂ ಟ್ರ್ಯಾಕ್ಟರ್ ಮೂಲಕ ಆಗಮಿಸಿದ್ದರು. ಈ ಸಂದರ್ಭದಲ್ಲಿ ಸಿರುಗುಪ್ಪ ಜೆಸ್ಕಾಂ ಉಪ ವಿಭಾಗದ ಎಇಇ ಗಾಯತ್ರಿದೇವಿ, ರೈತ ಮುಖಂಡರಾದ ಸದಾಶಿವಪ್ಪ, ಹಂಪನಗೌಡ, ಉಮೇಶ, ಕೋಸೆರಾವು, ಅಂಜಿನಪ್ಪ, ಓಂಕಾರಿ, ತಿಮ್ಮಾರೆಡ್ಡಿ, ಜನಾರ್ದನ ರೆಡ್ಡಿ, ಸೂರಿ ಬಾಬು ಅಲ್ಲದೆ ಸುತ್ತಲಿನ ಗ್ರಾಮಗಳ ನೂರಾರು ರೈತರು ಭಾಗವಹಿಸಿದ್ದರು.

ಯಾವುದೇ ಆದೇಶ ಇಲ್ಲದೆ 7 ತಾಸು ವಿದ್ಯುತ್ ಅನ್ನು 6 ಗಂಟೆಗೆ ಇಳಿಸಿದ್ದು ಯಾಕೆ ಎಂದು ತರಾಟೆಗೆ ತೆಗೆದುಕೊಂಡ ರೈತರು ಏಳು ತಾಸು ವಿದ್ಯುತ್ ಈ ತಕ್ಷಣವೇ ಸರಬರಾಜು ಮಾಡುವ ಕ್ರಮ ಕೈಗೊಳ್ಳದಿದ್ದರೆ ಜಾಗ ಬಿಟ್ಟು ಕದಲುವುದಿಲ್ಲ ಹಾಗೂ ನಿಮ್ಮನ್ನು ಸಹ ಬಿಡುವುದಿಲ್ಲ ಎಂದು ದಿಗ್ಬಂಧನ ಹಾಕಿ ಎಚ್ಚರಿಸಿದರು.





ವಿದ್ಯುತ್ ಉತ್ಪಾದನೆಯ ಅಭಾವದ ಹಿನ್ನೆಲೆಯಲ್ಲಿ ತಾತ್ಕಾಲಿಕವಾಗಿ 6 ಗಂಟೆ ವರೆಗೆ ವಿದ್ಯುತ್ ಪೂರೈಕೆ ಮಾಡುತ್ತಿದ್ದು, ಮುಂದಿನ ದಿನಗಳಲ್ಲಿ ಲಭ್ಯತೆಯ ಆಧಾರದ ಮೇಲೆ ಕ್ರಮ ಕೈಗೊಳ್ಳಲಾಗುವುದು ಎಂದು ಬಳ್ಳಾರಿ ಜಿಲ್ಲಾ ಕಾರ್ಯನಿರ್ವಾಹಕ ಅಭಿಯಂತರ ಗ್ರಾಮೀಣ ವಿಭಾಗ ಹುಸೇನ್ ಸಾಬ್ ಆಶ್ವಾಸನೆ ನೀಡಿದರು.

ಅಧಿಕಾರಿಯ ಉತ್ತರಕ್ಕೆ ತೃಪ್ತಿಗೊಳ್ಳದ ರೈತರು ಏಳು ತಾಸು ವಿದ್ಯುತ್ ನೀಡುವ ಬಗ್ಗೆ ಲಿಖಿತವಾಗಿ ನೀಡದ ಹೊರತು ನಿಮ್ಮನ್ನು ಬಿಡುವುದಿಲ್ಲ ಎಂದು ಅಧಿಕಾರಿಗಳಿಗೆ ದಿಗ್ಬಂಧನ ಹಾಕಿದರು.

# ಸಾಲದ ಕಿರುಕುಳ: ಕಾರ್ಯದರ್ಶಿ ಆತ್ಮಹತ್ಯೆ

ರಾಯಚೂರು,ಸೆ.22- ಮಸ್ಕಿಯ ಮೆದಿಕಿನಾಳ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಕಾರ್ಯದರ್ಶಿ ಆತ್ಮಹತ್ಯೆಗೆ ಶರಣಾಗಿದ್ದಾರೆ.

ಬಸವರಾಜ್ (40) ಆತ್ಮಹತ್ಯೆ ಮಾಡಿಕೊಂಡ ಕಾರ್ಯದರ್ಶಿಯಾಗಿದ್ದು,ಸಾಲದ ಹಣ ಹಾಗೂ ಬಡ್ಡಿ ಪಾವತಿಸುವಂತೆ ಕಿರುಕುಳ ನೀಡಲಾಗುತ್ತಿತ್ತು ಎಂಬ ಆರೋಪದ ಹಿನ್ನೆಲೆಯಲ್ಲಿ ಬಸವರಾಜ್ ಆತ್ಮಹತ್ಯೆಗೆ ಶರಣಾಗಿದ್ದಾರೆಂಬುದಾಗಿ ತಿಳಿದು ಬಂದಿದೆ.

ಬಸವರಾಜ್ ತಮ್ಮ ಜಮೀನಿನಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.ಆತ್ಮಹತ್ಯೆಗೂ ಮುನ್ನ ಅವರು ಡೆತ್‌ನೋಟ್ ಬರೆದಿಟ್ಟಿದ್ದು, ಅದರಲ್ಲಿ ಸಾಲದ ವ್ಯವಹಾರ ಹಾಗೂ ತಮಗೆ ನೀಡಲಾಗುತ್ತಿದ್ದ ಕಿರುಕುಳದ ಕುರಿತು ಉಲ್ಲೇಖಿಸಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

ಸುಮಾರು 70 ಲಕ್ಷದಷ್ಟು ಸಾಲವನ್ನು ಶೇ.6ರ ಬಡ್ಡಿಯೊಂದಿಗೆ ಮರುಪಾವತಿಸುವಂತೆ ಕೆಲವರು ನಿರಂತರವಾಗಿ ಒತ್ತಡ ಹೇರುತ್ತಿದ್ದರು ಎಂದು ಕುಟುಂಬದವರು ಆರೋಪಿಸಿದ್ದಾರೆ. ಸಾಲದ ಮೊತ್ತದ ಜತೆಗೆ ಬಡ್ಡಿ ಹಾಗೂ ಚಕ್ರಬಡ್ಡಿ ಪಾವತಿಸುವಂತೆ ಕಿರುಕುಳ ನೀಡಲಾಗುತ್ತಿತ್ತು ಎಂಬ ಆರೋಪವೂ ಕೇಳಿಬಂದಿದೆ.

ಪಿಎಸಿಎಸ್ ಬ್ಯಾಂಕ್ ಅಧ್ಯಕ್ಷ ಮಧು ಲಿಂಗರಾಜ ಧಣಿ, ಸದಸ್ಯರಾದ ಯಲ್ಲಪ್ಪ ಕೋಸಗಿ, ಮುದ್ದಿನಗೌಡ, ಚನಪ್ಪ ಪರಡ್ಡಿ, ರಾಜಣ್ಣ ಗಿಡ್ಡ ಸೇರಿದಂತೆ ಕೆಲವರಿಂದ ಸಾಲ ಪಡೆದಿದ್ದರು ಎನ್ನಲಾಗಿದೆ.ಮತ್ತೊಂದೆಡೆ,ಬಸವರಾಜ್ ಕೆಲವರಿಗೆ ನೀಡಿದ್ದ ಹಣವನ್ನು ವಾಪಸ್ ಕೇಳಿದಾಗ ಹಣ ನೀಡದೆ, ಹಣ ಕೊಟ್ಟಿರುವುದಕ್ಕೆ ಸಾಕ್ಷ್ಯವಿಲ್ಲ ಎಂದು ಹೇಳಿ ಕಿರುಕುಳ ನೀಡಲಾಗುತ್ತಿತ್ತು ಎಂಬ ಆರೋಪವೂ ಇದೆ.

ಇದಲ್ಲದೆ, ಪಿಎಸಿಎಸ್ ಬ್ಯಾಂಕ್‌ನ ಮಸ್ಕಿ ಘಟಕದ ಮ್ಯಾನೇಜರ್ ನಾಗರತ್ನ ಕೆಲಸ ಕೊಡಿಸುವುದಾಗಿ ಹಣ ಪಡೆದಿದ್ದರು. ಹಣ ವಾಪಸ್ ಕೇಳಿದ ಸಂದರ್ಭದಲ್ಲಿ ಕಿರುಕುಳ ನೀಡಿದ್ದರು ಎಂಬ ಆರೋಪವೂ ಕುಟುಂಬದವರಿಂದ ಕೇಳಿಬಂದಿದೆ.

ಘಟನೆ ಕುರಿತು ಮಾಹಿತಿ ತಿಳಿದ ಮಸ್ಕಿ ಠಾಣೆ ಪೊಲೀಸರು ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ ಎಂದು ತಿಳಿದುಬಂದಿದೆ.



ಬಳ್ಳಾರಿ: ಸೆ.22(ಸಂಜೆವಾಣಿ) ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ನಿನ್ನೆ ರಾತ್ರಿ ನಿರ್ದಿಗಂತ ತಂಡ 'ಪ್ರಾಜೆಕ್ಟ್ ಪಂಚತಂತ್ರ' ಎಂಬ ಪಂಚತಂತ್ರ ಕಥೆಗಳನ್ನು ಆಧರಿಸಿ ಇಂದಿನ ಕಾಲಮಾನಕ್ಕೆ ತಕ್ಕಂತೆ ಅರುಣ್ ಲಾಲ್ ನಿರ್ದೇಶನದಲ್ಲಿ ನಾಟಕ ಪ್ರದರ್ಶಿಸಲಾಯ್ತು.

# ರಾಜ್ಯ ಕರಾಟೆ ಶಿಕ್ಷಕರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ ಕಟ್ಟೇಸ್ವಾಮಿ ಆಯ್ಕೆ



ಸಂಜೆವಾಣಿ ವಾರ್ತೆ

ಬಳ್ಳಾರಿ:ಸೆ,22- ಕರ್ನಾಟಕ ರಾಜ್ಯ ಕರಾಟೆ ಶಿಕ್ಷಕರ ಸಂಘದ ನೂತನ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ ನಗರದ ಕರಾಟೆ ತರಬೇತುದಾರ ಕಟ್ಟೇಸ್ವಾಮಿ ಆಯ್ಕೆಯಾಗಿದ್ದಾರೆ.

ಉಡುಪಿಯಲ್ಲಿ ನಡೆದ ಕರ್ನಾಟಕ ರಾಜ್ಯ ಕರಾಟೆ ಶಿಕ್ಷಕರ ಸಂಘದ ನೂತನ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆಯಲ್ಲಿ ಈ ಆಯ್ಕೆ ಮಾಡಲಾಗಿದೆ. ನೂತನ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮವನ್ನು ವಿಜಯಪುರ ಜಿಲ್ಲೆಯ ಮುದ್ದೇಬಿಹಾಳದಲ್ಲಿ ಇತ್ತೀಚೆಗೆ ಆಯೋಜಿಸಲಾಗಿತ್ತು.

ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳು, ವಸತಿ ಶಿಕ್ಷಣ ಸಂಸ್ಥೆಗಳು ಸೇರಿದಂತೆ ವಿವಿಧ ಸರ್ಕಾರಿ ಮಟ್ಟದ ಶಿಕ್ಷಣ ಸಂಸ್ಥೆಗಳಲ್ಲಿ ಕರಾಟೆ ತರಬೇತಿಗೆ ಹೆಚ್ಚಿನ ಅವಕಾಶ ಕಲ್ಪಿಸುವುದು, ತರಬೇತುದಾರರಿಗೆ ಉತ್ತೇಜನ ನೀಡುವುದು ಹಾಗೂ ರಾಜ್ಯದಲ್ಲಿ ಕರಾಟೆ ಕ್ರೀಡೆಯನ್ನು ಮತ್ತಷ್ಟು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ. ರಾಜ್ಯದಲ್ಲಿ ಕರಾಟೆ ಕ್ರೀಡೆಯನ್ನು ಮತ್ತಷ್ಟು ಬಲಪಡಿಸುವುದು ಹಾಗೂ ಕರಾಟೆ ತರಬೇತುದಾರರು ಮತ್ತು ಕ್ರೀಡಾಪಟುಗಳಿಗೆ ಹೆಚ್ಚಿನ ಅವಕಾಶಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಸಂಘವು ಮುಂದಿನ ದಿನಗಳಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಿದೆಂದು ಅವರು ತಿಳಿಸಿದ್ದಾರೆ.

# ಎಂಎಸ್ಎಂಇ ಸಮಸ್ಯೆ:ಸಚಿವ ಕಾಶಪ್ಪರಿಗೆ ಕಾಸಿಯಾ ಮನವಿ ಸಲ್ಲಿಕೆ

ಬೆಂಗಳೂರು, ಸೆ.22- ರಾಜ್ಯಾದ್ಯಂತ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಎದುರಿಸುತ್ತಿರುವ ಪ್ರಮುಖ ಸಮಸ್ಯೆಗಳನ್ನು ಒಳಗೊಂಡ ಸಮಗ್ರ ಮನವಿ ಪತ್ರವನ್ನು ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘವು (ಕಾಸಿಯಾ), ಬೆಂಗಳೂರಿನ ವಿಕಾಸಸೌಧದಲ್ಲಿ ನಡೆದ ರಾಜ್ಯಮಟ್ಟದ ಸಮಾಲೋಚನಾ ಸಭೆಯಲ್ಲಿ ರಾಜ್ಯ ಸರ್ಕಾರಕ್ಕೆ ಸಲ್ಲಿಸಿತು.

ಸಭೆಯ ಅಧ್ಯಕ್ಷತೆಯನ್ನು ರಾಜ್ಯ ಸರ್ಕಾರದ ಸಣ್ಣ ಕೈಗಾರಿಕೆಗಳು ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರಾದ ವಿಜಯಾನಂದ ಕಾಶಪ್ಪನವರ್ ವಹಿಸಿದ್ದರು.

ಕೈಗಾರಿಕಾ ಘಟಕಗಳಿಗೆ ಮಂಜೂರಾಗಿರುವ ಬಂಡವಾಳ ಸಹಾಯಧನ ಮತ್ತು ಪ್ರೋತ್ಸಾಹಧನ ಬಿಡುಗಡೆ ಮಾಡುವಲ್ಲಿ ಉಂಟಾಗುತ್ತಿರುವ ದೀರ್ಘ ವಿಳಂಬದ ಬಗ್ಗೆ ಕಾಸಿಯಾ ತೀವ್ರ ಕಳವಳ ವ್ಯಕ್ತಪಡಿಸಿದೆ.

ಕೆಲವು ಪ್ರಕರಣಗಳಲ್ಲಿ ಸಹಾಯಧನ ಬಿಡುಗಡೆಯು ನಾಲ್ಕರಿಂದ ಐದು ವರ್ಷಗಳವರೆಗೆ ವಿಳಂಬವಾಗುತ್ತಿದೆ. ಇದರಿಂದ ಎಂಎಸ್‌ಎಂಇಗಳು ತೀವ್ರ ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದು, ಉತ್ಪಾದನೆ, ಉದ್ಯೋಗ ಸೃಷ್ಟಿ, ಹೂಡಿಕೆ ಮತ್ತು ಕಾರ್ಯನಿರತ ಬಂಡವಾಳದ ಮೇಲೆ ಪ್ರತಿಕೂಲ ಪರಿಣಾಮ ಉಂಟಾಗುತ್ತಿದೆ ಎಂದು ಕಾಸಿಯಾ ಉಲ್ಲೇಖಿಸಿದೆ.



ಬಳ್ಳಾರಿ: ಸೆ.22(ಸಂಜೆವಾಣಿ) ನಗರದ ಎಎಸ್ ಎಂ ಕಾಲೇಜಿನ ಸ್ವರ್ಣ ಮಹೋತ್ಸವದ ಅಂಗವಾಗಿ ನಿನ್ನೆ ಸಂಜೆ ನಡೆದ ಸಾಂಸ್ಕೃತಿಕ ಕಾರ್ಯಕ್ರಮಗಳ ಪ್ರದರ್ಶನದಲ್ಲಿ ಪಾಲ್ಗೊಂಡಿದ್ದ ಮಕ್ಕಳು

# ಅಕ್ರಮವಾಗಿ ಸಾಗಿಸುತಿದ್ದ 42,500ರೂ. ಮೌಲ್ಯದ ಪಡಿತರ ಅಕ್ಕಿ ವಶ



ಸಂಜೆವಾಣಿ ವಾರ್ತೆ

ಸಿರುಗುಪ್ಪ, ಸೆ.22: ನಗರದ ಅಭಯಾಂಜನೇಯ ಸ್ವಾಮಿ ದೇವಸ್ಥಾನದ ಪಕ್ಕದ ಕಾಲೋನಿ ರಸ್ತೆಯ ಮೂಲಕ ಸಿಂಧನೂರು ಕಡೆಗೆ ಅಕ್ರಮವಾಗಿ ಟಾಟಾ ಕಂಪನಿಯ ಗೂಡ್ಸ್ ವಾಹನದಲ್ಲಿ ಸಾಗಿಸಲಾಗುತ್ತಿದ್ದ ಪಡಿತರ ಅಕ್ಕಿಯನ್ನು ಅಧಿಕಾರಿಗಳು ದಾಳಿ ನಡೆಸಿ ವಶಪಡಿಸಿಕೊಂಡಿದ್ದಾರೆ.

ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿದ ಆಹಾರ ಇಲಾಖೆ ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳು ವಾಹನ ಸಹಿತ ಅಕ್ಕಿಯನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಈ ಬಗ್ಗೆ ಸಿರುಗುಪ್ಪ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಟಾಟಾ ಕಂಪನಿಯ ಗೂಡ್ಸ್ ವಾಹನದಲ್ಲಿ ಸುಮಾರು 1,850 ಕೆಜಿ (18.50 ಕ್ವಿಂಟಲ್) ಪಡಿತರ ಅಕ್ಕಿ ಸಾಗಿಸುತ್ತಿರುವ ಬಗ್ಗೆ ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿ 42,500 ರೂ. ಮೌಲ್ಯದ ಪಡಿತರ ಅಕ್ಕಿಯನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪಡಿತರ ಇಲಾಖೆಯ ಅಧಿಕಾರಿ ವಿಜಯಕುಮಾರ್ ತಿಳಿಸಿದ್ದಾರೆ.

ಸಂಜೆವಾಣಿ
ಸಂಜೆವಾಣಿ ಪತ್ರಿಕೆಯಿಂದ ಪ್ರಕಟವಾಗುವ
ದೀಪಾವಳಿ ವಿಶೇಷ ಸಂಚಿಕೆ 2026
ವಿಶೇಷ ಸಂಚಿಕೆಗೆ ಕತೆ, ಕವಿತೆ, ಲೇಖನಗಳನ್ನು ಆಹ್ವಾನಿಸಲಾಗಿದೆ. ಆಯ್ದ ಕತೆ, ಕವಿತೆ, ಲೇಖನಗಳನ್ನು ಸಂಜೆವಾಣಿ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಲಾಗುವುದು. ಲೇಖಕರು ತಮ್ಮ ಕತೆ-ಕವಿತೆ-ಲೇಖನಗಳನ್ನು bellary@sanjevani.com ಗೆ ಮೇಲ್ ಮಾಡಿ, ಅಥವಾ ಈ ವಾಟ್ಸಾಪ್ ನಂಬರ್‌ಗೆ 9845139131 Or 9241000283 ಕಳುಹಿಸಿ. ಕತೆ, ಕವಿತೆ, ಲೇಖನಗಳ ಕೊನೆಯಲ್ಲಿ ನಿಮ್ಮ ಹೆಸರು, ವಿಳಾಸ, ಸಂಪರ್ಕಿಸಬೇಕಾದ ನಂಬರ್ ಹಾಕಿ, ತಮ್ಮ ಬರಹಗಳನ್ನು ನಮಗೆ ಕಳಿಸಲು
ಕೊನೆಯ ದಿನಾಂಕ : 05.10.2026
ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ :
9449871908




# ಜ್ವಾಲಾಮುಖಿಯ ರುದ್ರನರ್ತನ...

## ಆಗಸದೆತ್ತರಕ್ಕೆ ಚಿಮ್ಮಿದ ಲಾವಾ, ಜನರ ಪರದಾಟ...





### ♦ ಹಲವು ಜ್ವಾಲಾಮುಖಿ ಸಕ್ರಿಯ

ಜಾವಾ ದ್ವೀಪದ ಅತ್ಯಂತ ಎತ್ತರದ ಪರ್ವತವಾದ ಸೆಮೆರು 3,600 ಮೀ ಎತ್ತರವಿದ್ದು, 40,000 ಅಡಿ ಎತ್ತರದಲ್ಲಿ ಶನಿವಾರದಿಂದಲೇ ದಟ್ಟ ಹೊಗೆ, ದೂಳನ್ನು ಹೊರಸೂಸುತ್ತಿತ್ತು. ಸುಮೇರು ಇಂಡೋನೇಷ್ಯಾದ 130 ಸಕ್ರಿಯ ಜ್ವಾಲಾಮುಖಿಗಳಲ್ಲಿ ಒಂದು ಎಂದು ಗುರುತಿಸಿಕೊಂಡಿದೆ. ಕಳೆದ ಜನವರಿಯಲ್ಲಿ ಸೆಮೆರು ಪರ್ವತ ಸ್ಫೋಟಗೊಂಡಿತ್ತು. ಅದಕ್ಕೂ ಮುನ್ನ 2017 ಮತ್ತು 2019ರಲ್ಲಿ ಸ್ಫೋಟಗಳು ಸಂಭವಿಸಿದ್ದವು. ವರ್ಷಕ್ಕೆ ಎರಡು ಬಾರಿ ಸಿಡಿಯುವ ಈ ಪರ್ವತದಲ್ಲಿ ಇತ್ತೀಚೆಗೆ ವರ್ಷದಲ್ಲಿ ಹಲವು ಬಾರಿ ಜ್ವಾಲಾಮುಖಿ ಸ್ಫೋಟಗೊಳ್ಳುತ್ತಿದೆ. ಕನಿಷ್ಠವೆಂದರೂ ಎರಡು ಬಾರಿ ಅನಿಲ ಹಾಗೂ ಲಾವಾರಸ 800 ಮೀಟರ್‌ಗಳಷ್ಟು ದೂರ ಸಾಗಿ



ಸಮೀಪದ ನದಿ ನೀರಿಗೆ ಸೇರಿಕೊಂಡಿದೆ. ಈ ಅಗ್ನಿಪರ್ವತದಿಂದ ಐದು ಕಿಮೀ ದೂರ ಅಂತರ ಕಾಪಾಡಿಕೊಳ್ಳುವಂತೆ ಸಮೀಪದ ನಿವಾಸಿಗಳಿಗೆ ಸೂಚನೆ ನೀಡಲಾಗಿದೆ. ಜ್ವಾಲಾಮುಖಿ ಸ್ಫೋಟಗೊಂಡ ಬಳಿಕ ಭಾನುವಾರ ಇಂಡೋನೇಷ್ಯಾದ ಉತ್ತರ ಸುಲವೆಸಿ ಭಾಗದಲ್ಲಿ ಭೂಕಂಪ ಸಂಭವಿಸಿದೆ. ರಿಕ್ಟರ್ ಪಾಮಕದಲ್ಲಿ 6.2ರಷ್ಟು ತೀವ್ರತೆ ದಾಖಲಾಗಿದೆ.

ಇಂಡೋನೇಷ್ಯಾದ ಬೃಹತ್ ಸಜೀವ ಜ್ವಾಲಾಮುಖಿಗಳಲ್ಲಿ ಆಗರವನ್ನೇ ಹೊಂದಿದೆ. ನೂರಾರು ಸಜೀವ ಜ್ವಾಲಾಮುಖಿಗಳು ಆಗಾಗ ಸ್ಫೋಟಿಸುತ್ತಿದ್ದು ಈ ಭಾಗದಲ್ಲಿ ಬದುಕುವ ಮಂದಿ ಯಾವ ಕ್ಷಣದಲ್ಲಿ ಏನು ಎನ್ನುವ ಆತಂಕದಲ್ಲಿ ಹಿಡಿಜೀವ ಕೈಯಲ್ಲಿಡಿದು ಬದುಕುವ ಸ್ಥಿತಿ ನಿರ್ಮಾಣವಾಗಿದೆ. ಹೀಗಿದ್ದರೂ ಜನರು ಅದರ ಬಗ್ಗೆ ತಲೆ ಕೆಡಸಿಕೊಳ್ಳದೆ ನಿತ್ಯದ ಕಾಯಕದಲ್ಲಿ ನಿರತರಾಗಿದ್ದಾರೆ.

ಇಂಡೋನೇಷ್ಯಾ ಸುಮಾತ್ರದಲ್ಲಿ 121 ಸಕ್ರಿಯ ಜ್ವಾಲಾಮುಖಿಗಳನ್ನು ಹೊಂದಿದೆ. ಸೆಮೆರು ಪರ್ವತದಲ್ಲಿ ಆಗಾಗ ಸ್ಫೋಟ ಸಂಭವಿಸುತ್ತಿದೆ. ಜ್ವಾಲಾಮುಖಿಯ ಲಾವಾ, ಬಿಸಿ ಅನಿಲ ಮತ್ತು ಬೂದಿಯಿಂದಾಗಿ ಪ್ರತಿಭಾರೊಯೂ ಹತ್ತಾರು ಜನರು ಸಾವನ್ನಪ್ಪುತ್ತಿದ್ದಾರೆ.

ಮೌಂಟ್ ಸೆಮೆರು ರಾಜಧಾನಿ ಜಕಾರ್ತಾದಿಂದ ಆಗ್ನೆಯಕ್ಕೆ 800 ಕಿಮೀ ದೂರದಲ್ಲಿದೆ. ಜಾವಾದಲ್ಲಿ ಅನೇಕ ಜ್ವಾಲಾಮುಖಿಗಳಿವೆ, ಅವು ಸಕ್ರಿಯವಾಗಿವೆ. ಆದರೆ ಮೌಂಟ್ ಸೆಮೆರು ಅತ್ಯಂತ ಅಪಾಯಕಾರಿ ಮತ್ತು ಅತಿ ಎತ್ತರದ ಜ್ವಾಲಾಮುಖಿಯಾಗಿದೆ. ಇಲ್ಲಿ ಬದುಕುವ ಮಂದಿಯ ಪಾಡು ಹೇಳತೀರದಾಗಿದೆ.

ಇಂಡೋನೇಷ್ಯಾದ ಸೆಮೆರು ಜ್ವಾಲಾಮುಖಿಯು ಅತ್ಯಂತ ಬಿಸಿ ಅನಿಲವನ್ನು ಮತ್ತು ಭಾರಿ ಪ್ರಮಾಣದ ಲಾವಾರಸ ಏಕಾಏಕಿ ಸ್ಫೋಟಿಸಿದೆ. ಇದರಿಂದ ಈ ಭಾಗದ ಜನರು ಸಮಸ್ಯೆಗೆ ಸಿಲಿಕಿದ್ದಾರೆ.ಹೀಗಿದ್ದರೂ ಅದನ್ನು ಲೆಕ್ಕಿಸದೆ ಮುನ್ನೆಚ್ಚರಿಕೆಯೊಂದಿಗೆ ನಿತ್ಯದ ಕೆಲಸದಲ್ಲಿ ತೊಡಗಿ-ಕೊಂಡಿದ್ದಾರೆ.

ಇಂಡೋನೇಷ್ಯಾದಲ್ಲಿ ನಡೆದ ಜ್ವಾಲಾಮುಖಿ ಸ್ಫೋಟದಲ್ಲಿ ನೂರಾರು ಬಲಿಯಾಗಿದ್ದಾರೆ-ಎಂದು ತಿಳಿದುಬಂದಿದೆ. ಜಾವಾ ದ್ವೀಪದ ಅತ್ಯಂತ ಎತ್ತರದ ಪರ್ವತವಾದ ಸೆಮೆರುನಲ್ಲಿ ಜ್ವಾಲಾಮುಖಿ ಸ್ಫೋಟಿಸಿದೆ. ಇದು ಇತ್ತೀಚಿನ ದಿನಗಳಲ್ಲಿ ನಡೆದ ಅತಿ ದೊಡ್ಡ ಸ್ಫೋಟ ಎಂದು ಪರಿಗಣಿಸಲಾಗಿದ್ದು, ಜ್ವಾಲಾಮುಖಿಯಿಂದಾಗಿ ಆಗಸದೆತ್ತರ ದಟ್ಟ ಹೊಗೆ ಆವರಿಸಿದೆ.

ಜ್ವಾಲಾಮುಖಿ ಸ್ಫೋಟಗೊಳ್ಳುತ್ತಿದ್ದಂತೆ ಸ್ಥಳಕ್ಕೆ ಆಗಮಿಸಿದ ವಿಪತ್ತು ನಿರ್ವಹಣಾ ತಂಡ ನೂರಾರು ಮಂದಿಯನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರ ಮಾಡಿ ರಕ್ಷಣೆ ಮಾಡಿದ್ದಾರೆ. ಘಟನೆಯಲ್ಲಿ ಹಲವರು ಕಣ್ಮರೆಯಾಗಿದ್ದು, ಹುಡುಕಾಟ ನಡೆ-ಯುತ್ತಿದೆ ಎಂದು ವರದಿ ತಿಳಿಸಿದೆ. ಗಂಭೀರವಾಗಿ ಗಾಯಗೊಂಡಿರುವವರನ್ನು ಆಸ್ಪತ್ರೆಗೆ ದಾಖಲಿಸಿ, ಚಿಕಿತ್ಸೆ ನೀಡಲಾಗುತ್ತಿದೆ.

ಸೆಮೇರು ಪರ್ವತದಲ್ಲಿ ಜ್ವಾಲಾಮುಖಿ ಸ್ಫೋಟಗೊಂಡ ಬಳಿಕ ಲಾವಾ ರಸವು ಹತ್ತಿರದಲ್ಲಿದ್ದ ಪೂರ್ವ ಜಾವಾ ಪ್ರಾಂತ್ಯದ ಹಳ್ಳಿಗಳನ್ನು ಆವರಿಸಿದ್ದು ಜನರು ಭಯಭೀತರಾಗಿ ಓಡಿ ಹೋಗಿದ್ದಾರೆ. ಜನರು ಪ್ರಾಣಾಪಾಯದಿಂದ ಪಾರಾಗುತ್ತಿರುವ ದೃಶ್ಯಗಳು ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿವೆ.

ಜ್ವಾಲಾಮುಖಿ ಸ್ಫೋಟದಿಂದಾಗಿ ಜಾವಾ ಪ್ರಾಂತ್ಯದ ಹತ್ತಿರದ ನಗರಗಳಾದ ಲಮಾಂಗ್ ಮತ್ತು ಮಲಂಗ್ ನಡುವಿನ ಸೇತುವೆ ಕುಸಿತಗೊಂಡಿದೆ. ಸೇತುವೆ ಕುಸಿದಿದ್ದರಿಂದ ರಕ್ಷಣಾ ಕಾರ್ಯಾಚರಣೆಗೆ ಅಡ್ಡಿಯಾಗಿದೆ. ಎಂದು ತಿಳಿದುಬಂದಿದೆ.

ಇತ್ತೀಚೆಗೆ ಸಂಭವಿಸಿದ ದುರಂತದಲ್ಲಿ ಸಾವನ್ನಪ್ಪಿದ್ದ 13 ಮಂದಿಯಲ್ಲಿ ಇಬ್ಬರನ್ನು ಮಾತ್ರ ಈವರೆಗೆ ಗುರುತಿಸಲಾಗಿದೆ.

, ಇಬ್ಬರು ಗರ್ಭಿಣಿಯರು ಸೇರಿದಂತೆ ತೊಂಬತ್ತೆಂಟು ಜನರು ಗಾಯಗೊಂಡಿದ್ದು, 50ಕ್ಕೂ ಹೆಚ್ಚು ಮಂದಿಗೆ ಗಂಭೀರ ಸುಟ್ಟ ಗಾಯಗಳಾಗಿವೆ ಮತ್ತು 902 ಜನರನ್ನು ಸ್ಥಳಾಂತರಿಸಲಾಗಿದೆ ಎಂದು ವಿಪತ್ತು ನಿರ್ವಹಣಾ ತಂಡದ ಅಧಿಕಾರಿ ಅಬ್ದುಲ್ ಮುಹಾರಿ ತಿಳಿಸಿದ್ದಾರೆ

### ♦ ಆಗಸದೆತ್ತರಕ್ಕೆ ಚಿಮ್ಮಿದ ಲಾವಾ

ಜ್ವಾಲಾಮುಖಿ ಭೂಮಿಯ ಮೇಲ್ಮೈ ಅಥವಾ ಚಿಪ್ಪಿನಲ್ಲಿರುವ ಒಂದು ಬಿರುಕು. ಇಂತಹ ಬಿರುಕಿನ ಮೂಲಕ ಭೂಗರ್ಭದಿಂದ ಕುದಿಯುವ ದ್ರವರೂಪದಲ್ಲಿನ ಕಲ್ಲುಗಳು, ಬೂದಿ ಮತ್ತು ಇತರ ಅನಿಲಗಳು ಹೊರಗೆ ಚಿಮ್ಮುತ್ತವೆ. ಸಾಮಾನ್ಯವಾಗಿ ಘನರೂಪದಲ್ಲಿ ಅಥವಾ ದ್ರವರೂಪದಲ್ಲಿರುವ ಕಲ್ಲುಗಳನ್ನು ಹೊರ ಉಗುಳುವ ಇಂತಹ ಜ್ವಾಲಾಮುಖಿಗಳು ಪರ್ವತದ ಶಿಖರಭಾಗದಲ್ಲಿರುತ್ತವೆ. ಈ ಜ್ವಾಲಾಮುಖಿಗಳ ರೂಪುಗೊಳ್ಳುವಿಕೆ ಬಲು ದೀರ್ಘ ಕಾಲದ ಪ್ರಕ್ರಿಯೆ. ಜ್ವಾಲಾಮುಖಿಯನ್ನು ವಲ್ಕೆನೋಗಳೆಂದೂ ಕರೆಯುತ್ತಾರೆ. ಭೂಮಿಯ ತಳಭಾಗದಿಂದ ದೊಡ್ಡ ಬಿರುಕುಗಳ ಮೂಲಕ, ಕಾದು ಕರಗಿರುವ ಪದಾರ್ಥಗಳನ್ನು ಉಗುಳುವ ಪರ್ವತಗಳೇ ಅಗ್ನಿಪರ್ವತಗಳು ಸ್ಫೋಟಗೊಂಡು ಲಾವಾರಸ ಆಗಸದೆತ್ತರಕ್ಕೆ ಚುಮ್ಮುತ್ತವೆ.ಇದರಿಂದ ಈ ಭಾಗದ ಜನರು ಕಷ್ಟ ಪಡಪಾಟಲು ಹೇಳತೀರದಾಗಿದೆ.

### ♦ ಪ್ರತಿಬಾರಿಯೂ ಅನೇಕರು ಕಣ್ಮರೆ

ಇಂಡೋನೇಷ್ಯಾದ ಅತಿ ಎತ್ತರದ ಜ್ವಾಲಾಮುಖಿ ಮೌಂಟ್ ಸೆಮೆರು ಇದ್ದಕ್ಕಿದ್ದಂತೆ ಸ್ಫೋಟಿಸುತ್ತದೆ. ಈ ವೇಳೆ ಸುಮಾರು 12 ಸಾವಿರ ಅಡಿ ಎತ್ತರದ ಪರ್ವತದ ತುದಿಯಿಂದ ಲಾವಾ, ಬಿಸಿ ಬೂದಿ ಮತ್ತು ಅನಿಲ ಹೊರಬರಲಾರಂಭಿಸಿತು. ಇದರಿಂದ ಸುತ್ತಮುತ್ತಲ ಕೆಲ ಹಳ್ಳಿ ಕಣ್ಮರೆಯಾಗಿದ್ದು, ಅನೇಕರು ಸಾವನ್ನಪ್ಪಿದ್ದಾರೆ. ಮಾಹಿತಿಯ ಪ್ರಕಾರ, ಈ ಜ್ವಾಲಾಮುಖಿಯ ಸ್ಫೋಟದಿಂದ ಹೊರಬಂದ ಬೂದಿ, ಬಿಸಿ ಅನಿಲ ಮತ್ತು ಲಾವಾ ನದಿಗಳು ಪರ್ವತದ ಕೆಳಗೆ 8 ಕಿಲೋಮೀಟರ್‌ವರೆಗೂ ವ್ಯಾಪಿಸಿತ್ತು. ಸದ್ಯ ಸಮೀಪದಲ್ಲಿ ವಾಸಿ
ಸುವ ಜನರನ್ನು 20 ಕಿಲೋಮೀಟರ್ ದೂರದಲ್ಲಿರುವ ಶಾಲೆಯಲ್ಲಿ ಇರಿಸ ಲಾಗಿದೆ. ಹೊಗೆ ಮತ್ತು ಬೂದಿಯಿಂದ ಆಕಾಶವು ಕಪ್ಪು ಬಣ್ಣಕ್ಕೆ ತಿರುಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಜನರು ಹಗಲು ಹೊತ್ತಿನಲ್ಲಿಯೂ ಲೈಟ್‌ಗಳನ್ನು ಹಾಕಬೇಕಾದ ಪರಿಸ್ಥಿತಿ ಇದೆ.



### ♦ 74 ಸಾವಿರ ವರ್ಷಗಳ ಇತಿಹಾಸ



ಜ್ವಾಲಾಮುಖಿಗೆ ಸುಮಾರು 74,000 ವರ್ಷಗಳ ಇತಿಹಾಸವಿದೆ. ಇಂಡೋನೇಷ್ಯಾದ ಸುಮಾತ್ರಾ ದ್ವೀಪದಲ್ಲಿ ನಡೆದ ಜ್ವಾಲಾಮುಖಿ ಸ್ಫೋಟವನ್ನು 'ಟೋಬಾ ಜ್ವಾಲಾಮುಖಿ ಸ್ಫೋಟ' ಎಂದು ಕರೆಯಲಾಗುತ್ತದೆ. ಇದು ಭೂಮಿಯ ಇತಿಹಾಸದಲ್ಲೇ ಅತ್ಯಂತ ಭೀಕರ ಹಾಗೂ ವಿನಾಶಕಾರಿ ಜ್ವಾಲಾಮುಖಿ ಸ್ಫೋಟಗಳಲ್ಲಿ ಒಂದಾಗಿದೆ. ಇಂಡೋನೇಷ್ಯಾದ ಸುಮಾತ್ರಾ ದ್ವೀಪದಲ್ಲಿದ್ದ ಮೌಂಟ್ ಟೋಬಾ ಆ ಜಾಗದಲ್ಲಿ ಒಂದು ದೊಡ್ಡ ಸರೋವರವಿದೆ, ಅದನ್ನೇ ಈಗ ಟೋಬಾ ಸರೋವರ ಎಂದು ಕರೆಯಲಾಗುತ್ತದೆ. ಈ ಸೂಪರ್-ಜ್ವಾಲಾಮುಖಿ ಸ್ಫೋಟ ಸಾಮಾನ್ಯ ಜ್ವಾಲಾಮುಖಿಗಳಿಗಿಂತ ಸಾವಿರಾರು ಪಟ್ಟು ದೊಡ್ಡದಾಗಿತ್ತು. ಈ ಸುಮಾರು 2,800 ಘನ ಕಿಲೋಮೀಟರ್‌ನಷ್ಟು ಬೂದಿ ಮತ್ತು ಲಾವಾರಸವನ್ನು ವಾತಾವರಣಕ್ಕೆ ಚಿಮ್ಮಿಸಿತ್ತು. ಇದು ಇಂದಿಗೂ ಮುಂದುವರಿದಿದೆ. ಜ್ವಾಲಾಮುಖಿ ಸ್ಫೋಟದಿಂದ ಹೊರಬಂದ ದಟ್ಟವಾದ ಬೂದಿ ಮತ್ತು ಅನಿಲಗಳು ಆಕಾಶವನ್ನು ಆವರಿಸಿದ್ದರಿಂದ ಸೂರ್ಯನ ಕಿರಣಗಳು ಭೂಮಿಗೆ ತಲುಪದಂತಾಯಿತು. ಇದರಿಂದಾಗಿ ಭೂಮಿಯ ಮೇಲೆ ಸುಮಾರು 6 ರಿಂದ 10 ವರ್ಷಗಳ ಕಾಲ ತೀವ್ರವಾದ ಚಳಿಗಾಲ ಉಂಟಾಯಿತು ಮತ್ತು ಮುಂದಿನ ಒಂದು ಸಾವಿರ ವರ್ಷಗಳವರೆಗೆ ಜಾಗತಿಕ ತಾಪಮಾನವು ತೀವ್ರವಾಗಿ ಕುಸಿಯಿತು.







### ♦ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರ

ಜ್ವಾಲಾಮುಖಿ ಸ್ಫೋಟದ ಘಟನೆಯ ನಂತರ, ಇಂಡೋನೇಷ್ಯಾದ ರಾಷ್ಟ್ರೀಯ ವಿಪತ್ತು ನಿರ್ವಹಣಾ ಏಜೆನ್ಸಿಯ ವಕ್ತಾರ ಅಬ್ದುಲ್ ಮುಹಾರಿ, ಜ್ವಾಲಾಮುಖಿಯ ಸುತ್ತಲಿನ ಅನೇಕ ಹಳ್ಳಿಗಳನ್ನು ಬೂದಿಯ ರಾಶಿಯಲ್ಲಿ ಮರೆಮಾಡಿದೆ. ಈ ಹಿನ್ನೆಲೆಯಲ್ಲಿ ಹಲವು ಮಂದಿಯನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರ ಮಾಡಲಾಗಿದೆ ಎಂದು ಹೇಳಿದ್ದಾರೆ. ಮಳೆ ಬಂದ ಕಾರಣ ಜ್ವಾಲಾಮುಖಿಯ ಚಟುವಟಿಕೆ ತಗ್ಗಿತು. ಹಲವಾರು ಗ್ರಾಮಗಳು ಬೂದಿಯಿಂದ ಮುಚ್ಚಿ ಹೋಗಿದ್ದವು. ಹೊಗೆಯ ಕಾರಣ ಸೂರ್ಯ ಕಿರಣಗಳು ಭೂಮಿಗೆ ಬೀಳಲಿಲ್ಲ. ಹಲವು ಗ್ರಾಮಸ್ಥರು ಸುರಕ್ಷಿತ ಸ್ಥಳಗಳಲ್ಲಿ ಆಶ್ರಯ ಪಡೆದರು. ಯಾವುದೇ ಪ್ರಾಣಹಾನಿ ವರದಿಯಾಗಿಲ್ಲ ಎಂದು ಸ್ಥಳೀಯ ಅಧಿಕಾರಿಗಳು ತಿಳಿಸಿದ್ದಾರೆ

### ♦ ಮನುಷ್ಯರ ಮೇಲೆ ಪರಿಣಾಮ

ಭೀಕರ ನೈಸರ್ಗಿಕ ವಿಕೋಪದಿಂದಾಗಿ ಜಗತ್ತಿನಾದ್ಯಂತ ಇದ್ದ ಬಹುತೇಕ ಆದಿ ಮಾನವರು ಮತ್ತು ಪ್ರಾಣಿ ಸಂಕುಲ ನಾಶವಾಯಿತು. ಮಾನವನ ಜನಸಂಖ್ಯೆಯು ತೀವ್ರವಾಗಿ ಕುಸಿದು, ನಮ್ಮ ಪೂರ್ವಜರು ಅಳಿವಿನ ಅಂಚಿಗೆ ತಲುಪಿದ್ದರು ಎಂದು ವಿಜ್ಞಾನಿಗಳು ನಂಬುತ್ತಾರೆ. ಈ ಸ್ಫೋಟದ ಬೂದಿಯು ಸಾವಿರಾರು ಮೈಲಿ ದೂರದ ಭಾರತದ ಉಪಖಂಡದ ಮೇಲೆಯೂ ಸುಮಾರು 5 ಸೆಂಟಿಮೀಟರ್‌ನಷ್ಟು ದಪ್ಪಗೆ ಆವರಿಸಿತ್ತು. ಭಾರತದಲ್ಲೂ ಇದು ಭಾರಿ ಹವಾಮಾನ ವೈಪರೀತ್ಯ ಹಾಗೂ ಕಾಡುಗಳ ನಾಶಕ್ಕೆ ಕಾರಣವಾಗಿತ್ತು ಎಂದು ಹೇಳಲಾಗಿದೆ. ಜ್ವಾಲಾಮುಖಿಯ ರುದ್ರ ನರ್ತನ ಮತ್ತು ಅದರಿಂದಾಗುವ ಪರಿಣಮಗಳಿಗೆ ಸುಮಾತ್ರ ಸೇರಿದಂತೆ ಸುತ್ತ ಮುತ್ತಲ ಭಾಗದ ಜನರು ತೀವ್ರ ಸಂಕಷ್ಟ ಎದುರಿಸುವ ಸ್ಥಿತಿ ನಿರ್ಮಾಣವಾಗಿದೆ.

# ತಂದೆ ಕೊಟ್ಟ ಭೂಮಿಯನ್ನು ಸಸ್ಯಶಾಸ್ತ್ರೀಯ ಉದ್ಯಾನವನಕ್ಕೆ ಭೂದಾನ ಮಾಡಿದ ಕೂಡ್ಲಿಗಿ ಶಾಸಕ.





ಬಿ. ನಾಗರಾಜ ಕೂಡ್ಲಿಗಿ.

ಕೂಡ್ಲಿಗಿ. ಸೆ. 22 :- ಮಗನ ಭವಿಷ್ಯಕ್ಕಾಗಿ ತಂದೆ ಭೂದಾನ ಮಾಡಿ ಕೊಟ್ಟರೆ ಅದರಲ್ಲಿ 2 ಎಕರೆ ಭೂಮಿಯನ್ನು ಪರಿಸರದ ದೃಷ್ಟಿ ಇಟ್ಟುಕೊಂಡ ಮಗ ಸಸ್ಯಶಾಸ್ತ್ರೀಯ ಉದ್ಯಾನವನ ನಿರ್ಮಾಣಕ್ಕೆ ಭೂದಾನ ಮಾಡಿ ಕೊಟ್ಟ ಅಪರೂಪದ ಪ್ರಸಂಗ ಕೂಡ್ಲಿಗಿಯಲ್ಲಿ ಕಂಡು ಬಂದಿದೆ.

ಹೌದು, ಈ ರೀತಿಯ ಅಪರೂಪದ ಸನ್ನಿವೇಶಕ್ಕೆ ಸಾಕ್ಷಿಯಾದವರು ಬೇರಾರು ಅಲ್ಲ ಕೂಡ್ಲಿಗಿ ಕ್ಷೇತ್ರದ ಹಾಲಿ ಶಾಸಕ ಡಾ ಶ್ರೀನಿವಾಸ ಎನ್ ಟಿ ಯಾಗಿದ್ದಾರೆ. ಇವರ ತಂದೆ ಮಾಜಿ ಶಾಸಕ ಎನ್ ಟಿ ಬೊಮ್ಮಣ್ಣ ಮೂಲೆ ಕಟ್ಟಿನ ಗ್ರಾಮಗಳಲ್ಲಿ ಪ್ರೌಢಶಾಲೆಗಳನ್ನು ತೆರೆದು ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ಕಾಳಜಿವಹಿಸಿದ್ದ ಶಿಕ್ಷಣ ಪ್ರೇಮಿ ಅವರು ಈ ಹಿಂದೆ ತನ್ನ ಕೊನೆ ಮಗನಿಗೆ ಭವಿಷ್ಯದ ದೃಷ್ಟಿಯಲ್ಲಿ ಇರಲಿ ಎಂದು ಕೂಡ್ಲಿಗಿ ತಾಲೂಕಿನ ಗುಡೇಕೋಟೆ ಹೋಬಳಿಯ ಬೆಳ್ಳಗಟ್ಟ ಕಂದಾಯ ಗ್ರಾಮದ ಸರ್ವೇ ನಂಬರ್ 266/2 ರ 9 ಎಕರೆ ಭೂಮಿಯನ್ನು ದಾನವಾಗಿ ಮಾಡಿಕೊಟ್ಟಿದ್ದರು ತಂದೆ ಶಿಕ್ಷಣ ಪ್ರೇಮಿಯಾದರೆ ಮಗ ಹಾಲಿ ಕೂಡ್ಲಿಗಿ ಶಾಸಕ ಗುಣಸಾಗರದಲ್ಲಿ ಸರ್ಕಾರಿ ಶಾಲೆಗೆ ಸ್ವಂತ ಖರ್ಚಿನಲ್ಲಿ ಖರೀದಿಸಿದ ಭೂಮಿ ದಾನ ಮಾಡಿ ಶಿಕ್ಷಣ ಪ್ರೇಮಿಯಾಗುವ ಜೊತೆಗೆ ತಂದೆ ಕೊಟ್ಟ ಭೂಮಿಯಲ್ಲಿನ ಎರಡು ಎಕರೆ ಭೂಮಿಯನ್ನು ಸಸ್ಯಶಾಸ್ತ್ರೀಯ ಉದ್ಯಾನವನ ನಿರ್ಮಾಣಕ್ಕೆ ರಾಜ್ಯದ ರಾಜ್ಯಪಾಲರ ಪರವಾಗಿ ತೋಟಗಾರಿಕೆ ಇಲಾಖೆಗೆ ಯಾವುದೇ ಫಲಾಪೇಕ್ಷೆ ಬಯಸದೆ ಉಚಿತವಾಗಿ ದಾನ ಮಾಡಿ 2026 ಸೆಪ್ಟೆಂಬರ್ 18ರಂದು ಕೂಡ್ಲಿಗಿ ಉಪನೋಂದಣಿ ಕಚೇರಿಯಲ್ಲಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಜಿ ಪಂ ಇವರಿಗೆ ದಾನ ಮಾಡಿ ಪರಿಸರ ಪ್ರೇಮಿ ಶಾಸಕರಾಗುವ ಜೊತೆಗೆ ಈ ರೀತಿಯ ಸಾಮಾಜಿಕ ಕಳಕಳಿ ಇಟ್ಟುಕೊಂಡ ಇತಿಹಾಸದ ಮೊದಲ ಶಾಸಕರೆಂದರೆ ತಪ್ಪಾಗದು.


ಶಾಸಕ ಡಾ ಶ್ರೀನಿವಾಸ ಭೂದಾನ ಮಾಡಿದ ಎರಡು ಎಕರೆ ಭೂಮಿ ಬರೀ ಭೂಮಿಯಲ್ಲ ಭವಿಷ್ಯದ ಉಸಿರಿಗೆ ನೀಡಿದ ಜಾಗ,ಮನುಷ್ಯನಿಗೆ ಉಸಿರು ಎಷ್ಟು ಮುಖ್ಯವೋ, ಭೂಮಿಗೆ ಹಸಿರು ಅಷ್ಟೇ ಮುಖ್ಯ. ಹಸಿರು ಉಳಿದರೆ ಮಾತ್ರ ಮನುಕುಲ ಉಳಿಯುತ್ತದೆ ಎಂಬ ಸತ್ಯವನ್ನು ಅರಿತು, ಪರಿಸರ ಸಂರಕ್ಷಣೆಯ ಬಗ್ಗೆ ಕೇವಲ ಮಾತಿನಲ್ಲಿ ಹೇಳದೆ ತಮ್ಮ ಕಾರ್ಯದ ಮೂಲಕ ಕೂಡ್ಲಿಗಿ ಕ್ಷೇತ್ರದ ಶಾಸಕ ಡಾ. ಶ್ರೀನಿವಾಸ ಎನ್ ಟಿ ಮಾದರಿಯಾಗಿದ್ದಾರೆ.ರಕ್ತದಾನ ಒಂದು ಜೀವ ಉಳಿಸುತ್ತದೆ,ಅನ್ನದಾನ ಒಂದು ಹಸಿವು ನೀಗಿಸುತ್ತದೆ

ಆದರೆ ಹಸಿರಿನ ದಾನ ಅಸಂಖ್ಯಾತ ಜೀವಿಗಳಿಗೆ ಉಸಿರು ನೀಡುತ್ತದೆ.ಈ ಎರಡು ಎಕರೆ ಭೂಮಿಯಲ್ಲಿ ಬೆಳೆಯುವ ಪ್ರತಿಯೊಂದು ಸಸಿಗಳು ಮುಂದಿನ ದಿನಗಳಲ್ಲಿ ಹೆಮ್ಮರವಾಗಿ ಬೆಳೆಯಲಿವೆ . ಆ ಮರಗಳು ಪಕ್ಷಿ ಸಂಕುಲಗಳಿಗೆ ಆಶ್ರಯ, ಜೀವ ವೈವಿಧ್ಯತೆಗೆ ನೆಲೆ, ಶುದ್ಧ ಆಮ್ಲಜನಕಕ್ಕೆ ಆಧಾರವಾಗಲಿವೆ. ಹಸಿರು ಪ್ರದೇಶ ವಿಸ್ತಾರಗೊಳ್ಳುವುದರಿಂದ ಮಳೆನೀರು ಭೂಮಿಗೆ ಇಂಗಿ ಅಂತರ್ಜಲ ಸಂರಕ್ಷಣೆಗೆ ಸಹಕಾರಿಯಾಗಲಿದೆ. ಪರಿಸರ ಮಾಲಿನ್ಯ ಕಡಿಮೆಯಾಗಲು, ಸ್ಥಳೀಯ ವಾತಾವರಣದ ಸಮತೋಲನ ಕಾಪಾಡಲು ಹಾಗೂ ಆರೋಗ್ಯಕರ ಹಸಿರು ಪರಿಸರ ನಿರ್ಮಾಣಕ್ಕೂ ಪೂರಕವಾಗಲಿದೆ.

ನಾಳೆ ಈ ಜಾಗ ಮಕ್ಕಳಿಗೆ ಪ್ರಕೃತಿಯ ಪಾಠಶಾಲೆಯಾಗಬಹುದು; ಪಕ್ಷಿಗಳಿಗೆ ಆಶ್ರಯವಾಗಬಹುದು; ಸಸ್ಯಗಳಿಗೆ ನೆಲೆಯಾಗಬಹುದು; ಜನರಿಗೆ ನೆಮ್ಮದಿಯ ಹಸಿರು ತಾಣವಾಗಬಹುದು.

ತಂದೆ ಭವಿಷ್ಯಕ್ಕಾಗಿ ನೀಡಿದ ಭೂಮಿಯನ್ನು ಮಗ ಮೋಜು ಮಸ್ತಿಗೆ ಹಾಳುಮಾಡದೇ ಸಮಾಜದ ಒಳತಿಗೆ ಬಳಕೆಯಾಗಲಿ ಎಂದು ಅರಿತು ಭೂ ದಾನ ಮಾಡುವ ಮೂಲಕ ತಂದೆಗೆ ತಕ್ಕ ಮಗನಾಗಿ ಅಪ್ಪ ಶಿಕ್ಷಣ ಪ್ರೇಮಿಯಾದರೆ ಮಗ ತನೊಬ್ಬ ವೈದ್ಯನಾಗಿ ಪರಿಸರ ಕಾಪಾಡುವ ಹಸಿರು ವನ ನಿರ್ಮಾಣ ಮಾಡಲು ಆರೋಗ್ಯಕರ ಸಮಾಜ ನಿರ್ಮಾಣದ ಪರಿಸರ ಪ್ರೇಮಿಯಾಗುವ ಭವಿಷ್ಯವಾಣಿಗೆ ಕೂಡ್ಲಿಗಿ ಶಾಸಕ ಡಾ ಶ್ರೀನಿವಾಸ ರಾಜ್ಯದಲ್ಲಿಯೇ ಮಾದರಿ ಶಾಸಕರೆಂದು ಹೇಳಬಹುದು.

# ಕೂಡ್ಲಿಗಿಯಲ್ಲಿ ಮಳೆ ಅಬ್ಬರ, ಹಳ್ಳದಂತೆ ನೀರು ಹರಿದ ಹೈವೇ ರಸ್ತೆ,ಸಂಚಾರ ಅಸ್ತವ್ಯಸ್ತ.




ಸಂಜೆವಾಣಿ ವಾರ್ತೆ

ಕೂಡ್ಲಿಗಿ. ಸೆ. 22 :- ಮಳೆಗಾಲದಲ್ಲಿ ನೆತ್ತಿಯ ಮೇಲೆ ಸುಡುಬಿಸಿಲು, ಸಕಾಲಕ್ಕೆ ಮಳೆಬಾರದೆ ಒಣಗಿದ ಬೆಳೆಗಳು ಕಂಗಲಾದ ರೈತನ ಕಣ್ಣೀರಿನ ನಡುವೆ ಕಳೆದ ರಾತ್ರಿ ಅಬ್ಬರಿಸಿದ ವರುಣನ ಆರ್ಭಟಕ್ಕೆಕೂಡ್ಲಿಗಿ ಹೊರವಲಯದ ರಾಷ್ಟ್ರೀಯ ಹೆದ್ದಾರಿ 50ರ ರಸ್ತೆ ಮಿನಿ ಹಳ್ಳದಂತೆ ರಸ್ತೆಯ ಮೇಲೆ ನೀರು ಹರಿದಿದ್ದು ವಾಹನ ಸಂಚಾರವು ಅಸ್ತವ್ಯಸ್ತಗೊಂಡಿತ್ತು.

ಹೌದು ಕಳೆದ ರಾತ್ರಿ ಆಕಸ್ಮಿಕ ಮಳೆಗಾಳಿ ರಾತ್ರಿ 8 ಗಂಟೆಗೆ ಶುರುವಾಗಿದ್ದು ನಿರಂತರ 1ತಾಸಿಗೂ ಹೆಚ್ಚು ಮಳೆ ಸುರಿದ ಪರಿಣಾಮ ಕೂಡ್ಲಿಗಿ ಹೊರವಲಯದ ರಾಷ್ಟ್ರೀಯ ಹೆದ್ದಾರಿ ರಸ್ತೆಯಲ್ಲಿ ಮೊಳಕಾಲಿನವರೆಗೆ ನೀರು ಹರಿದು ವಾಹನ ಸಂಚಾರಕ್ಕೆ ತೊಂದರೆಯಾಗಿತ್ತು ಅಬ್ಬರಿಸಿದ ಮಳೆರಾಯನ ಆರ್ಭಟಕ್ಕೆ ವಾಹನ ಸವಾರರು ದಿಕ್ಕು ಕಾಣದೆ ವಾಹನಗಳನ್ನು ರಸ್ತೆ ಪಕ್ಕದಲ್ಲಿ ನಿಲ್ಲಿಸಿ ಮಳೆ ನೀರು ಕಡಿಮೆಯಾದ ಮೇಲೆ ಮುಂದೆ ಸಾಗಿದ್ದಾರೆ

ಕೂಡ್ಲಿಗಿ ತಾಲೂಕಿನಲ್ಲಿ ಕಳೆದ ರಾತ್ರಿ ಮಳೆ ಬಿದ್ದ ಪ್ರಮಾಣ ಇಂತಿದೆ. ಕೂಡ್ಲಿಗಿ - 34.6ಮಿ ಮೀ, ಗುಡೇಕೋಟೆ -5.1,ಹೊಸಹಳ್ಳಿ - 23.8,ಸಿಜೆ ಹಳ್ಳಿ -1.4 ಹಾಗೂ ಬಣವಿಕಲ್ಲು -4.4 ಮಿ ಮೀ ಮಳೆ ಸುರಿದಿದೆ ಎಂದು ಕಂದಾಯ ಇಲಾಖೆ ಮಳೆ ಬಿದ್ದ ಪ್ರಮಾಣದ ವಿವರ ನೀಡಿದೆ.

# ಕಳಪೆ ಕುಂಬಳ ಬೀಜ ರೈತರಿಗೆ ಲಕ್ಷಾಂತರ ರೂಪಾಯಿ ನಷ್ಟ: ಸ್ಪಂದಿಸದ ವ್ಯಾಪಾರಿ ವಿರುದ್ಧ ರೈತರ ಆಕ್ರೋಶ



ಸಂಜೆವಾಣಿ ವಾರ್ತೆ:

ಕೊಟ್ಟೂರು: ಸೆಪ್ಟೆಂಬರ್22: ಕೊಟ್ಟೂರು ತಾಲೂಕಿನ ಹ್ಯಾಳ್ಯಾ ಗ್ರಾಮದ ರೈತರಾದ ಹಾಲೇಶ ಮತ್ತು ಕೊಟ್ರೇಶ ಎಫ್ 1 ರಾವ್ ಕುಂಬಳ ಬೀಜ ಬಿತ್ತಿ ಫಲ ಕೊಡದೆ ತೀವ್ರ ನಷ್ಟಕ್ಕೆ ಒಳಗಾಗಿದ್ದಾರೆ ಒಂದೆಡೆ ಮಳೆ ಬಾರದೆ ಕಂಗಾಲಾಗಿದ್ದು ಮತ್ತೊಂದಡೆ ಕಳಪೆ ಬೀಜದಿಂದ ಸಂಕಷ್ಟಕ್ಕೆ ಗುರಿಯಾಗಿದ್ದಾರೆ ಅಧಿಕ ಇಳುವರಿ ಹೆಚ್ಚು ಲಾಭದ ನಿರೀಕ್ಷೆಯಿಂದ ದಾವಣಗೆರೆಯ ಬ್ರಹ್ಮಲಿಂಗೇಶ್ವರ ಆಗ್ರೋ ಫರ್ಟಿಲೈಜರ್ಸನಲ್ಲಿ ಹ್ಯಾಳ್ಯಾದ ರೈತರಾದ ಹಾಲೇಶ ಮತ್ತು ಕೊಟ್ರೇಶ 18600 ರೂ. ಕೊಟ್ಟು ಎಫ್ 1 ರಾವ್ ಕುಂಬಳ ಬೀಜವನ್ನು ತಂದು ನೀರಾವರಿಗೆ ಬಿತ್ತನೆ ಮಾಡಿದ್ದಾರೆ.ಈ ಎಫ್1 ರಾವ್ ಕುಂಬಳ ಬೀಜವನ್ನು ಹಾಲೇಶ ಮೂರು ಎಕರೆಗೆ ಬಿತ್ತನೆ ಮಾಡಿದ್ದು ಕೊಟ್ರೇಶ್ ಒಂದು ಎಕರೆಯಲ್ಲಿ ಬಿತ್ತನೆ ಮಾಡಿದ್ದಾರೆ

ನೀರಾವರಿ ಫಲವತ್ತಾದ ಭೂಮಿ ಉತ್ತಮ ಇಳುವರಿಯ ನಿರೀಕ್ಷೆ ಮಾಡಿಕೊಂಡಿದ್ದ ಈ ಇಬ್ಬರು ರೈತರು ಆಘಾತಕ್ಕೆ ಒಳಗಾಗಿದ್ದಾರೆ

ಆರಂಭದಲ್ಲಿ ಕುಂಬಳ ಬೆಳೆ ಚನ್ನಾಗಿ ಬೆಳೆಯಿತು ಇನ್ನೇನು ಕಾಯಿ ಕಟ್ಟುತ್ತದೆ ಎಂದು ಆಸೆಯಿಂದ ಕಾದಿದ್ದ ರೈತರಿಗೆ ಮೂರು ತಿಂಗಳಾದರೂ ಒಂದೇ ಒಂದು ಕಾಯಿ ಕಟ್ಟದಿದ್ದರಿಂದ ದೊಡ್ಡ ನಿರಾಶೆ ಉಂಟಾಗಿದೆ

ಈ ರೈತರು ಹೊಲಕ್ಕೆ ಬಂದು ಕಾಯಿ ಬಿಡದ ಕುಂಬಳ ನೋಡಿ ತಲೆ ಮೇಲೆ ಕೈಹೊತ್ತುಕೊಂಡು ಕುಳಿತರು ಕುಂಬಳ ಬೀಜ ಕಳಪೆ ಎಂಬುದರಲ್ಲಿ ಎರಡು ಮಾತಿರಲಿಲ್ಲ ಇತರೆ ರೈತರು ಇದನ್ನೇ ಹೇಳಿದರು ಎಕರೆಗೆ 30000 ರೂಗಳಂತೆ ಮೂರು ಎಕರೆಗೆ 1 ಲಕ್ಷ ರೂ ಖರ್ಚಾಗಿದೆ ಕುಂಬಳ ಬೆಳೆಗೆ ಪಂಪ್ ಸೆಟ್ ನಿಂದ ಸರಿಯಾಗಿ ನೀರು ಹಾಯಿಸಲಾಗಿದೆ ಮೂರು ತಿಂಗಳಾದರೂ ಕಾಯಿ ಬಿಟ್ಟಿಲ್ಲ ಹಾಕಿದ ಬಂಡವಾಳವೂ ಇಲ್ಲ ಬೆಳೆಯು ಇಲ್ಲದೆ ರೈತರಿಗೆ ಚಿಂತೆ ಆವರಿಸಿದೆ ಅನಿವಾರ್ಯವಾಗಿ ಮೂರು ತಿಂಗಳಾದರೂ ಕಾಯಿ ಬಿಡದ ಕುಂಬಳ ಬೆಳೆಯನ್ನು ರೂಟರ್ ಹೊಡೆಸಲಾಗಿದೆ ಕಳಪೆ ಕುಂಬಳ ಬೀಜ ಖರೀದಿಸಿದ ಅಂಗಡಿಯವರಿಗೆ ಫೋನ್ ಮಾಡಿದರೆ ಸರಿಯಾಗಿ ಸ್ಪಂದಿಸುತ್ತಿಲ್ಲ ರೈತರು ಅನುಭವಿಸಿದ ನಷ್ಟವನ್ನು ಯಾರು ಕೊಡುತ್ತಾರೆ

ಕಳಪೆ ಬೀಜ ಮಾರಾಟ ಮಾಡುವ ಅಂಗಡಿ ಮತ್ತು ಕಂಪನಿ ವಿರುದ್ಧ ಕೃಷಿ ಅಧಿಕಾರಿಗಳು ಸ್ಥಳಕ್ಕೆ ಭೇಟಿ ಸೂಕ್ತ ಕ್ರಮ ಕೈಗೊಳ್ಳಬೇಕಿದೆ ಎಂದು ಹಾಲೇಶ ಮತ್ತು ಕೊಟ್ರೇಶ ಆಗ್ರಹಿಸಿದ್ದಾರೆ.

ಕುಂಬಳ ಬಳ್ಳಿ ಬೆಳವಣಿಗೆ ಚೆನ್ನಾಗಿತ್ತು ಆದರೆ ಕಳಪೆ ಬೀಜದ ಪರಿಣಾಮ ಕಾಯಿ ಒಂದು ಸಹ ಕಾಯಿ ಬಿಡಲಿಲ್ಲ ಕಳಪೆ ಬೀಜದ ಕಂಪನಿ ವಿರುದ್ಧ ಕಾನೂನು ಕ್ರಮ ತೆಗೆದುಕೊಂಡು ನಮಗಾದ ನಷ್ಟ ಬೀಜದ ಕಂಪನಿ ನೀಡಬೇಕು.

ಹಾಲೇಶ ರೈತ ಹ್ಯಾಳ್ಯಾ..

ಕಳಪೆ ಕುಂಬಳಕಾಯಿ ಬೀಜದಿಂದ ನಷ್ಟಕ್ಕೊಳಗಾದ ರೈತರು ತೋಟಗಾರಿಕೆ ಇಲಾಖೆಗೆ ದೂರವಾಣಿ ಮೂಲಕ ದೂರು ನೀಡಿದರೂ ಅಧಿಕಾರಿಗಳು ಉಡಾಫೆಯ ಉತ್ತರ ನೀಡಿ ನುಣುಚಿಕೊಳ್ಳುತ್ತಿರುವುದು ಖಂಡನೀಯ ರೈತರ ನಷ್ಟಕ್ಕೆ ನ್ಯಾಯ ಒದಗಿಸಿ ಕಳಪೆ ಬೀಜ ಕಂಪನಿ ಹಾಗೂ ನಿರ್ಲಕ್ಷ್ಯ ತೋರಿದ ಅಧಿಕಾರಿಗಳ ವಿರುದ್ಧ ತಕ್ಷಣ ಕಾನೂನು ಕ್ರಮ ಕೈಗೊಳ್ಳಬೇಕು ಇಲ್ಲವಾದರೆ ರೈತರೊಂದಿಗೆ ಸೇರಿ ತೋಟಗಾರಿಕೆ ಸಹಾಯಕ ನಿರ್ದೇಶಕರ ಅಮಾನತಿಗೆ ಆಗ್ರಹಿಸಿ ಉಗ್ರ ಹೋರಾಟ ನಡೆಸುವುದು ಅನಿವಾರ್ಯವಾಗಲಿದೆ.

ಮಲ್ಲಿಕಾರ್ಜುನ ಗುಡಿಯಾರ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ, ಕರ್ನಾಟಕ ರಾಜ್ಯ ರೈತ ಸಂಘ)

# ಕೂಲಿ ಹಣ ವಿಳಂಬ: ಕಾರ್ಮಿಕರ ಆಕ್ರೋಶ




ಸಂಜೆವಾಣಿ ವಾರ್ತೆ:

ಕೊಟ್ಟೂರು: ಸೆಪ್ಟೆಂಬರ್,22: ಉಜ್ಜಿನಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿ.ಬಿ.ಜಿ. ರಾಮ್ ಜಿ ಯೋಜನೆಯಡಿ ವಿವಿಧ ಅಭಿವೃದ್ಧಿ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸಿದ ಕೂಲಿ ಕಾರ್ಮಿಕರಿಗೆ ಕಳೆದ ಎರಡೂ ತಿಂಗಳುಗಳಿಂದ ಕೂಲಿ ಹಣ ಪಾವತಿಯಾಗದೆ ವಿಳಂಬವಾಗಿದ್ದು, ಕಾರ್ಮಿಕರು ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ.

ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಿವಿಧ ಗ್ರಾಮಗಳಲ್ಲಿ ಯೋಜನೆಯಡಿ ಕೈಗೊಂಡ ಕಾಮಗಾರಿಗಳಲ್ಲಿ ಸ್ಥಳೀಯ ಕಾರ್ಮಿಕರು ಕೆಲಸ ನಿರ್ವಹಿಸಿದ್ದಾರೆ. ಆದರೆ ಕೆಲಸ ಪೂರ್ಣಗೊಳಿಸಿ ಹಲವು ದಿನಗಳು ಕಳೆದರೂ ಕೂಲಿ ಹಣ ಖಾತೆಗೆ ಜಮೆಯಾಗಿಲ್ಲ ಎಂದು ಕಾರ್ಮಿಕರು ಅಸಮಾಧಾನ ವ್ಯಕ್ತಪಡಿಸಿದರು

ದಿನಗೂಲಿ ಕೆಲಸವನ್ನೇ ಅವಲಂಬಿಸಿರುವ ಕುಟುಂಬಗಳಿಗೆ ಕೂಲಿ ಹಣ ವಿಳಂಬವಾಗಿರುವುದು ತೀವ್ರ ತೊಂದರೆ ಉಂಟುಮಾಡಿದೆ. ದಿನ ನಿತ್ಯದ ಜೀವನ ನಿರ್ವಹಣೆ, ಮಕ್ಕಳ ಶಿಕ್ಷಣ, ಮನೆ ಖರ್ಚು ಹಾಗೂ ಅಗತ್ಯ ವಸ್ತುಗಳ ಖರೀದಿಗೆ ಹಣದ ಕೊರತೆ ಎದುರಾಗಿದೆ ಎಂದು ಕಾರ್ಮಿಕರು ತಿಳಿಸಿದರು.

ಯೋಜನೆಯಡಿ ಕೆಲಸ ಮಾಡಿದ ನಂತರ ನಿಗದಿತ ಅವಧಿಯಲ್ಲಿ ಕೂಲಿ ಹಣ ಪಾವತಿಯಾಗಬೇಕು. ಆದರೆ ಹಣ ಪಾವತಿಗೆ ಸಂಬಂಧಿಸಿದಂತೆ ತಾಂತ್ರಿಕ ಹಾಗೂ ಆಡಳಿತಾತ್ಮಕ ಕಾರಣಗಳಿಂದ ವಿಳಂಬವಾಗುತ್ತಿದೆ ಆದ್ದರಿಂದ ಸಂಬಂಧಿಸಿದ ಅಧಿಕಾರಿಗಳು ಸಮಸ್ಯೆಯನ್ನು ಶೀಘ್ರವಾಗಿ ಪರಿಹರಿಸಬೇಕೆಂದು ಕಾರ್ಮಿಕರು ಒತ್ತಾಯಿಸಿದ್ದಾರೆ.

ನಾವು ಕೂಲಿ ಕೆಲಸ ಮಾಡಿ ಕುಟುಂಬ ನಿರ್ವಹಣೆ ಮಾಡುತ್ತಿದ್ದೇವೆ. ಕೆಲಸ ಮಾಡಿದ ಹಣ ಸಮಯಕ್ಕೆ ಸರಿಯಾಗಿ ದೊರೆಯದಿದ್ದರೆ ಜೀವನ ನಡೆಸುವುದು ಕಷ್ಟವಾಗುತ್ತದೆ. ಅಧಿಕಾರಿಗಳು ಕೂಡಲೇ ಕ್ರಮ ಕೈಗೊಂಡು ಬಾಕಿ ಇರುವ ಕೂಲಿ ಹಣವನ್ನು ಪಾವತಿಸಬೇಕು ಎಂದು ಕಾರ್ಮಿಕರು ಆಗ್ರಹಿಸಿದರು

ಗ್ರಾಮ ಪಂಚಾಯಿತಿ ಅಧಿಕಾರಿಗಳು ಹಾಗೂ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಈ ಕುರಿತು ಪರಿಶೀಲನೆ ನಡೆಸಿ, ಬಾಕಿ ಇರುವ ಕೂಲಿ ಹಣದ ವಿವರ ಪಡೆದು ಅರ್ಹ ಕಾರ್ಮಿಕರ ಖಾತೆಗಳಿಗೆ ಶೀಘ್ರ ಹಣ ಜಮೆಯಾಗುವಂತೆ ಕ್ರಮ ಕೈಗೊಳ್ಳಬೇಕು. ಜೊತೆಗೆ ಮುಂದೆ ಇಂತಹ ವಿಳಂಬ ಮರುಕಳಿಸದಂತೆ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರು ಒತ್ತಾಯಿಸಿದರು. ಈ ಸಂಧರ್ಭದಲ್ಲಿ ತಾಲೂಕು ಸಂಚಾಲಕಿ ಶಿಲ್ಪ ಉಜ್ಜಿನಿ, ವಸಂತ್ ಕುಮಾರ್, ಶ್ರೀಕಾಂತ್, ಏಕಾಂತಪ್ಪ, ಸಿದ್ದೇಶ್, ಚೌಡಪ್ಪ, ಉಚ್ಚಂಗೆಮ್ಮ ಪುಷ್ಪ, ಸಲ್ಮಾ ಜುಬೇದ್, ಚಂದ್ರಮ್ಮ ಸೇರಿದಂತೆ ಗ್ರಾಮೀಣ ಕೂಲಿ ಕಾರ್ಮಿಕರ ಸಂಘಟನೆ ಗ್ರಾಕೂಸ್ ಪದಾಧಿಕಾರಿಗಳು ಹಾಗೂ ಸದಸ್ಯರು ಹಾಜರಿದ್ದರು.

# ವಿವಿಧ ಬೇಡಿಕೆಗಳಿಗೆ ಒತ್ತಾಯಿಸಿ ಸಿಪಿಐ(ಎಂ) ಕಾರ್ಯಕರ್ತರ ಪ್ರತಿಭಟನೆ




ಸಂಜೆವಾಣಿ ವಾರ್ತೆ

ಹೊಸಪೇಟೆ.ಸೆ.22 ವಿವಿಧ ಬೇಡಿಕೆಗಳಿಗೆ ಒತ್ತಾಯಿಸಿ ಭಾರತ ಕಮ್ಯೂನಿಷ್ಟ ಪಕ್ಷ ಮಾರ್ಕ್ಸ್ ವಾದಿ ತಾಲೂಕು ಸಮಿತಿ ನೇತೃತ್ವದಲ್ಲಿ ಕಾರ್ಯಕರ್ತರು ಸೋಮವಾರ ಸ್ಥಳೀಯ ತಹಶೀಲ್ದಾರರ ಕಛೇರಿ ಎದುರು ಪ್ರತಿಭಟನೆ ನಡೆಸಿದರು.

ಅಕ್ರಮವಾಗಿ ಟೋಲ್ ಸಂಗ್ರಹ ಮಾಡುತ್ತಿರುವುದನ್ನು ವಿರೋಧಿಸಿ, ಪ್ರತಿಭಟನೆ ನಡೆಸುತ್ತಿದ್ದ ಸಿಪಿಐ(ಎಂ) ಮುಖಂಡರನ್ನು ಬಂಧಿಸಿರುವ ಕ್ರಮವನ್ನು ಖಂಡಿಸಿ, ಹಾಗೂ ರಾಯಚೂರಿನಲ್ಲಿ ಜರುಗಿದ ದಲಿತ ಮಹಿಳೆಯ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ಆರೋಪಿಗಳಿಗೆ ತಕ್ಕ ಶಿಕ್ಷೆ ನೀಡಬೇಕು ಸೇರಿದಂತೆ ವಿವಿಧ ಬೇಡಿಕೆಗಳಿಗೆ ಒತ್ತಾಯಿಸಿ ಪ್ರತಿಭಟನೆ ನಡೆಸಿದ ಸಿಪಿಐ(ಎಂ) ಕಾರ್ಯಕರ್ತರು ನಂತರ ತಹಶೀಲ್ದಾರರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಿಪಿಐ(ಎಂ) ಜಿಲ್ಲಾ ಕಾರ್ಯದರ್ಶಿ ಆರ್.ಭಾಸ್ಕರ್ ರೆಡ್ಡಿ, ರಾಜ್ಯ ಹೈಕೋರ್ಟ್ ಆದೇಶದಂತೆ ನೈಸ್ ಕಂಪನಿ ವಶಪಡಿಸಿಕೊಂಡಿರುವ ಭೂಮಿ ರೈತರಿಗೆ ವಾಪಸ್ ನೀಡಬೇಕು ಹಾಗೂ ಅಕ್ರಮ ಟೋಲ್ ವಸೂಲಿ ಸಂಗ್ರಹ ನಿಲ್ಲಿಸಬೇಕೆಂದು ಆಗ್ರಹಿಸಿ ಸಿಪಿಐ(ಎಂ)ರಾಜ್ಯ ಕಾರ್ಯದರ್ಶಿ ಕೆ.ಪ್ರಕಾಶ್ ರವರು ಸೇರಿದಂತೆ ಇತರೆ ರಾಜ್ಯ ಕಾರ್ಯದರ್ಶಿ ಮಂಡಳಿ ಸದಸ್ಯರನ್ನೊಳಗೊಂಡ ಮುಖಂಡರು ಹಾಗೂ ಕರ್ನಾಟಕ ಪ್ರಾಂತ ರೈತ ಸಂಘದ ರಾಜ್ಯ ಮುಖಂಡರು, ಇತರರು ನೈಸ್ ಟೋಲ್ ಗೇಟ್ ಬಳಿ ಶಾಂತಿಯುತವಾಗಿ ಪ್ರತಿಭಟನೆ ನಡೆಸುತ್ತಿದ್ದವರನ್ನು ಏಕಾಏಕಿ ಪೊಲೀಸರು ಬಂಧಿಸಿರುವುದು ತೀವ್ರವಾಗಿ ಖಂಡಿಸಿದರು.

ಅಲ್ಲದೆ ಪ್ರಜಾಪ್ರಭುತ್ವದ ಸೋಗಿನಲ್ಲಿ ಆಡಳಿತ ನಡೆಸುತ್ತಿರುವ ರಾಜ್ಯ ಕಾಂಗ್ರೆಸ್ ಸರ್ಕಾರ ಮತ್ತು ಕೇಂದ್ರ ಬಿಜೆಪಿ ಸರ್ಕಾರ ಕಾರ್ಪೋರೇಟ್ ನೀತಿಗಳನ್ನೇ ಅನುಸರಿಸುತ್ತಿದೆ ಎಂಬುದು ಹೋರಾಟಗಾರರ ಬಂಧನ ಮಾಡಿಸುವ ಮೂಲಕ ತನ್ನ ಅಂತರ್ಗತದ ಮುಖವಾಡವನ್ನು ಸಾಬೀತಾಗಿಸಿದೆ. ಸಿಪಿಐ(ಎಂ) ಪಕ್ಷದ ಮುಖಮಡರ ಬಂಧನದಿಂದ ಹೋರಾಟಕ್ಕೆ ಇನ್ನಷ್ಟು ಬಲ ಬಂದಿದೆ. ಎಂದ ಅವರು ಈ ಕೂಡಲೇ ಸರ್ಕಾರ ಹೋರಾಟಗಾರರನ್ನು ಬಂಧನದಿಂದ ಬಿಡುಗಡೆಗೊಳಿಸಬೇಕು ಹಾಗೂ ವಶಪಡಿಸಿಕೊಂಡಿರುವ ಭೂಮಿಯನ್ನು ರೈತರಿಗೆ ವಾಪಸ್ ಕೊಡಿಸಬೇಕು ಮತ್ತು ರೈತರ ಭೂಮಿಯ ಹಕ್ಕಗಳಿಗಾಗಿ ಧ್ವನಿ ಎತ್ತಿದವರಿಗೆ ಉತ್ತರ ನೀಡಬೇಕು ಇಲ್ಲವಾದಲ್ಲಿ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ನಡೆಸಲಾಗುವುದು ಎಂದು ಎಚ್ಚರಿಸಿದರು.

ಸಿಪಿಐ(ಎಂ) ತಾಲೂಕು ಕಾರ್ಯದರ್ಶಿ ಎನ್.ಯಲ್ಲಾಲಿಂಗ ಮಾತನಾಡಿ, ರಾಯಚೂರು ಜಿಲ್ಲೆಯಲ್ಲಿ ದಲಿತ ಶೋಷಿತ ಮಹಿಳೆಯ ಮೇಲೆ ಅತ್ಯಾಚಾರ ನಡೆಸಿ ಕೊಲೆ ನಡೆಸಲಾಗಿದೆ. ಇಂತಹ ಪ್ರಕರಣಗಳು ರಾಜ್ಯದಲ್ಲಿ ನಡೆಯುತ್ತಲೇ ಇದ್ದರೂ ರಾಜ್ಯ ಸರ್ಕಾರ ಮತ್ತು ವಿರೋಧ ಪಕ್ಷಗಳು ದಲಿತ ಪರವಾದ ಗಟ್ಟಿ ನಿಲುವನ್ನು ತೆಗೆದುಕೊಳ್ಳದೇ ಅನಗತ್ಯ ವಿಷಯಗಳನ್ನು ಸದನಗಳಲ್ಲಿ ಎತ್ತುತ್ತಿವೆ. ಇದರಿಂದ ಕೊಲೆ ಪ್ರಕರಣಗಳ ಜೊತೆಗೆ ಜಾತಿ ದೌರ್ಜನ್ಯಗಳು ಸಹ ದಿನದಿಂದ ದಿನಕ್ಕೆ ಹೆಚ್ಚಾಗಿವೆ.

ಇದರಿಂದ ದಲಿತರು ಗೌರವಯುತವಾಗಿ ಜೀವನ ನಡೆಸದೇ ಇರುವ ಪರಿಸ್ಥಿತಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕಾರಣವಾಗಿವೆ. ಈ ಹಿನ್ನಲೆಯಲ್ಲಿ ಮುಖ್ಯಮಂತ್ರಿಗಳು ನೈಸ್ ಹೋರಾಟಗಾರರ ಬೇಡಿಕೆಗಳನ್ನು ಈಡೇರಿಸಬೇಕು ಹಾಗೂ ರಾಯಚೂರಿನಲ್ಲಿ ದಲಿತ ಮಹಿಳೆಯನ್ನು ಕೊಲೆ ಮಾಡಿದವರಿಗೆ ತಕ್ಕ ಶಿಕ್ಷೆಯನ್ನು ನೀಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ಹೈಕೋರ್ಟ್ ಆದೇಶದಂತೆ ನೈಸ್ ಕಂಪನಿ ವಶಪಡಿಸಿಕೊಂಡಿರುವ ರೈತರ ಜಮೀನುಗಳನ್ನು ವಾಪಸ್ ನೀಡಬೇಕು. ಅಕ್ರಮ ಟೋಲ್ ವಸೂಲಿ ಸಂಗ್ರಹ ನಿಲ್ಲಿಸಬೇಕು. ಭೂಮಿ ಕಳೆದುಕೊಂಡ ರೈತರಿಗೆ ಪುನರ್ವಸತಿಯ ನಿವೇಶನ ಮನೆ ಕಲ್ಪಿಸಬೇಕು. ರಾಯಚೂರಿನಲ್ಲಿ ದಲಿತ ಮಹಿಳೆಯನ್ನು ಅತ್ಯಾಚಾರ ನಡೆಸಿ ಕೊಲೆ ಮಾಡಿದ ಆರೋಪಿಗಳನ್ನು ಬಂಧಿಸಿ ತಕ್ಕ ಶಿಕ್ಷೆಗೆ ಗುರಿ ಪಡಿಸಬೇಕು. ದಲಿತರಿಗೆ ನಿವೇಶನ ಮನೆ ವಸತಿ ಭೂಮಿ ಹಂಚಿಕೆ ಮಾಡಬೇಕು ಎಂದು ಮುಖ್ಯಮಂತ್ರಿಗಳಿಗೆ ಸಲ್ಲಿಸಲಾದ ಮನವಿಪತ್ರದಲ್ಲಿ ಒತ್ತಾಯಿಸಲಾಗಿದೆ.

ಪ್ರತಿಭಟನೆಯಲ್ಲಿ ಮುಖಂಡರಾದ ಕೆ.ನಾಗರತ್ನಮ್ಮ, ಎಂ. ಗೋಪಾಲ, ಎ.ಕರುಣಾನಿಧಿ, ಬಿ.ರಮೇಶ್ ಕುಮಾರ್, ಹೇಮಂತ್ ನಾಯ್ಕ್, ಈ.ಮಂಜುನಾಥ, ವಿ.ಸ್ವಾಮಿ, ಕೆ.ಎಂ.ಸ್ವಪ್ನ, ಎಸ್ ಯಲ್ಲಮ್ಮ, ಶಕುಂತಲಾ, ಎಂ. ಜಂಬಯ್ಯನಾಯಕ, ಬಿ.ತಾಯಪ್ಪ ನಾಯಕ ಸೇರಿದಂತೆ ಕಾರ್ಯಕರ್ತರು ಭಾಗವಹಿಸಿದ್ದರು.

# ಬಾಕಿ ವೇತನ ಪಾವತಿಗೆ ಆಗ್ರಹಿಸಿ ಹಂಪಿ ಕವಿವಿ ಅತಿಥಿ ಉಪನ್ಯಾಸಕರು ಹಾಗೂ ಸಿಬ್ಬಂದಿ ಮುಷ್ಕರ



ಸಂಜೆವಾಣಿ ವಾರ್ತೆ

ಹೊಸಪೇಟೆ.ಸೆ.22 ಬಾಕಿ ವೇತನ ಪಾವತಿಗೆ ಒತ್ತಾಯಿಸಿ ಹಂಪಿ ಕನ್ನಡ ವಿಶ್ವವಿದ್ಯಾಲಯದ ಅತಿಥಿ ಉಪನ್ಯಾಸಕರು ಹಾಗೂ ತಾತ್ಕಾಲಿಕ ಆಡಳಿತ ಸಿಬ್ಬಂದಿ ಕನ್ನಡ ವಿಶ್ವವಿದ್ಯಾಲಯದ ಆಡಳಿತ ಕಛೇರಿ ಕ್ರಿಯಾಶಕ್ತಿ ಎದುರು ಸೋಮವಾರ ಒಂದು ದಿನದ ಸಾಂಕೇತಿಕ ಮುಷ್ಕರ ನಡೆಸಿದರು.

ಹಂಪಿ ಕನ್ನಡ ವಿಶ್ವವಿದ್ಯಾಲಯದಲ್ಲಿ ಲ ಕಳೆದ 10ರಿಂದ 20ವರ್ಷಗಳಿಂದ ಅತ್ಯಂತ ನಿಷ್ಠೆ ಮತ್ತು ಪ್ರಾಮಾಣಿಕವಾಗಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರು ಹಾಗೂ ತಾತ್ಕಾಲಿಕ ಆಡಳಿತ ಸಿಬ್ಬಂದಿಗಳು ವೇತನವಿಲ್ಲದೆ ತೀವ್ರ ಆರ್ಥಿಕ ಸಂಕಷ್ಟವನ್ನು ಎದುರಿಸುತ್ತಿದ್ದು, ಈ ಹಿನ್ನಲೆಯಲ್ಲಿ ಶೀಘ್ರವೇ ವೇತನ ಬಿಡುಗಡೆ ಮಾಡುವಂತೆ ಒತ್ತಾಯಿಸಿ ಕನ್ನಡ ವಿಶ್ವವಿದ್ಯಾಲಯದ ಆವರಣದಲ್ಲಿ ಸಾಂಕೇತಿಕ ಮುಷ್ಕರವನ್ನು ನಡೆಸಿದರು.

ವಿಶ್ವವಿದ್ಯಾಲಯದ ಶೈಕ್ಷಣಿಕ ಮತ್ತು ಆಡಳಿತಾತ್ಮಕ ಚಟುವಟಿಕೆಗಳು ಸುಸೂತ್ರವಾಗಿ ನಡೆಯಲು ಹಗಲಿರುಳು ಶ್ರಮಿಸುತ್ತಿರುವ ಸಿಬ್ಬಂದಿಗಳಿಗೆ ಹಲವು ತಿಂಗಳಿಂದ ವೇತನ ದೊರೆತಿಲ್ಲ. ಅತಿಥಿ ಉಪನ್ಯಾಸಕರಿಗೆ ಹಿಂದಿನ 11 ತಿಂಗಳ ಬಾಕಿ ಹಾಗೂ ಪ್ರಸ್ತುತ ಸಾಲಿನ 5 ತಿಂಗಳು ಸೇರಿ ಒಟ್ಟು 16 ತಿಂಗಳ ವೇತನ ಬಾಕಿ ಉಳಿದಿದೆ. ಹಾಗೆಯೇ, ತಾತ್ಕಾಲಿಕ ಆಡಳಿತ ಸಿಬ್ಬಂದಿಗೆ ಹಿಂದಿನ 7 ತಿಂಗಳ ಬಾಕಿ ಹಾಗೂ ಪ್ರಸ್ತುತ ಸಾಲಿನ 5 ತಿಂಗಳು ಸೇರಿ ಒಟ್ಟು 12 ತಿಂಗಳ ವೇತನ ಪಾವತಿಯಾಗದೆ ಬಾಕಿ ಉಳಿದಿದೆ.

ದೀರ್ಘಕಾಲದಿಂದ ವೇತನವಿಲ್ಲದೆ ದಿನ ನಿತ್ಯದ ಜೀವನ ನಿರ್ವಹಣೆ, ಮನೆಯ ಬಾಡಿಗೆ, ವೈದ್ಯಕೀಯ ವೆಚ್ಚ ಹಾಗೂ ಮಕ್ಕಳ ಶಿಕ್ಷಣವನ್ನು ಭರಿಸಲಾಗದೆ ಸಿಬ್ಬಂದಿಗಳು ತೀವ್ರ ಮಾನಸಿಕ ಮತ್ತು ಆರ್ಥಿಕ ಒತ್ತಡಕ್ಕೆ ಸಿಲುಕಿದ್ದಾರೆ. ಈ ಕುರಿತು ಕುಲಪತಿಗಳು, ಕುಲಸಚಿವರು ಹಾಗೂ ಉನ್ನತ ಶಿಕ್ಷಣ ಸಚಿವರಿಗೆ ಹಲವು ಬಾರಿ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಪ್ರತಿಭಟನಾಕಾರರು ತಮ್ಮ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಅನಿವಾರ್ಯವಾಗಿ ಸಾಂಕೇತಿಕ ಮುಷ್ಕರವನ್ನು ಹಮ್ಮಿಕೊಳ್ಳಲಾಗಿದ್ದು, ಮುಂಬರುವ ಎರಡು ವಾರದೊಳಗೆ ನಮ್ಮ ಸಮಗ್ರ ಬಾಕಿ ವೇತನವನ್ನು ಬಿಡುಗಡೆ ಮಾಡದಿದ್ದಲ್ಲಿ, ಮುಂದಿನ ಹಂತದಲ್ಲಿ ಅನಿರ್ದಿಷ್ಟಾವಧಿ ಮುಷ್ಕರವನ್ನು ಹಮ್ಮಿಕೊಳ್ಳಲಾಗುವುದು. ಇದಕ್ಕೆ ವಿಶ್ವವಿದ್ಯಾಲಯದ ಆಡಳಿತ ಮಂಡಳಿಯೇ ನೇರ ಹೊಣೆಯಾಗಿರುತ್ತದೆ ಎಂದು ಪ್ರತಿಭಟನಾಕಾರರು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಕವಿವಿ ಕುಲಪತಿ ಡಾ.ಡಿ.ವಿ.ಪರಮಶಿವಮೂರ್ತಿ ಮತ್ತು ಕುಲಸಚಿವ ಡಾ. ವಿರೂಪಾಕ್ಷಿ ಪೂಜಾರಹಳ್ಳಿ ಮನವಿಪತ್ರ ಸ್ವೀಕರಿಸಿ ಮಾತನಾಡಿದ ಕುಲಪತಿ ಡಾ,ಡಿ,ವಿ,ಪರಮಶಿವಮೂರ್ತಿ ಅವರು ಇದೇ ಅ.5 ರಂದು ಕಲಬುರಗಿಯಲ್ಲಿ ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ಅವರು, ವಿಶ್ವವಿದ್ಯಾಲಯಗಳ ಕುಂದುಕೊರತೆಗಳ ಸಭೆ ಕರೆದಿದ್ದು. ಆ ಸಭೆಯಲ್ಲಿ ಅತಿಥಿ ಉಪನ್ಯಾಸಕರು ಹಾಗೂ ತಾತ್ಕಾಲಿಕ ಆಡಳಿತ ಸಿಬ್ಬಂದಿಗಳ ಬಾಕಿ ವೇತನ ಕುರಿತು ಸಚಿವರ ಗಮನಕ್ಕೆ ತಂದು ವೇತನ ಪಾವತಿಗೆ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಪ್ರತಿಭಟನೆಯಲ್ಲಿ ಅತಿಥಿ ಉಪನ್ಯಾಸಕರಾದ ಡಾ.ತಿಮ್ಮಣ್ಣ ಭೀಮರಾಯ, ಡಾ. ಕೃಷ್ಣೆಗೌಡ, ಕ್ರಿಷ್ಣ ನಾಯಕ್, ವಿರೂಪಾಕ್ಷಪ್ಪ ಇಟಗಿ, ತಾತ್ಕಾಲಿಕ ಆಡಳಿತ ಸಿಬ್ಬಂದಿಗಳಾದ ಡಾ. ಎ. ನಾಗವೇಣಿ, ಶ್ರೀನಿವಾಸ ಕೆ. ಕಲಾಲ್, ಜೆ. ಬಸವರಾಜ, ಜೆ. ಶಿವಕುಮಾರ, ಬಿ. ಗಂಗಾಧರ, ಮಹ್ಮದ್ರಫಿ, ಮಲ್ಲಿಕಾರ್ಜುನ್ ಮಹಾಮುನಿ, ಸುನಿಲ, ಭೀಮಣ್ಣ, ಗುಂಡಪ್ಪ, ಅಶ್ವಿನಿ, ಸುಮಾ, ನಂದಿನಿ, ಕೆ. ಪಂಪಾಪತಿ, ಕೆ. ವೀರೇಶ, ಸಂತೋಷ, ರವಿಕುಮಾರ, ಕೆ ಗಿರಿರಾಜ್, ಶ್ರೀಕಾಂತ ಚೌಟಿಗಿ, ಡಾ. ರೇವಣ್ಣಸಿದ್ಧಪ್ಪ, ದೊಡ್ಡ ಬಸಪ್ಪ, ಹನುಮಂತಪ್ಪ, ರಾಮಮೂರ್ತಿ ಸೇರಿದಂತೆ ಇತರರು ಭಾಗವಹಿಸಿದ್ದರು.

# ನಗರದಲ್ಲಿ ನಾಳೆ 11ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ

ಸಂಜೆವಾಣಿ ವಾರ್ತೆ

ಹೊಸಪೇಟೆ.ಸೆ.22 ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ ವತಿಯಿಂದ ಇದೇ ಸೆಪ್ಟೆಂಬರ್ 23 ರಂದು ಬೆಳಗ್ಗೆ 9.30ಕ್ಕೆ ನಗರದ ಬಸವಣ್ಣ ಕಾಲುವೆ ಹತ್ತಿರವಿರುವ ಬ್ರಹ್ಮಕುಮಾರಿಸ್ ಸಭಾಂಗಣದಲ್ಲಿ 11ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿದೆ.

ಮುಜರಾಯಿ, ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಸ್.ಬಸವಂತಪ್ಪ ಉದ್ಘಾಟಿಸುವರು.

ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ಯು.ಟಿ ಖಾದರ್ ಘನ ಉಪಸ್ಥಿತಿ ವಹಿಸುವರು. ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ರಾಜ್ಯ ಉಪಾಧ್ಯಕ್ಷ ಪಿ.ಟಿ.ಪರಮೇಶ್ವರ ನಾಯ್ಕ ಉಪಸ್ಥಿತರಿರಲಿದ್ದು, ಶಾಸಕ ಹೆಚ್.ಆರ್.ಗವಿಯಪ್ಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಬಳ್ಳಾರಿ ಸಂಸದ ಈ.ತುಕಾರಾಂ, ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ, ಹಗರಿಬೊಮ್ಮನಹಳ್ಳಿ ಶಾಸಕ ಕೆ.ನೇಮಿರಾಜ ನಾಯ್ಕ, ಕೂಡ್ಲಿಗಿ ಶಾಸಕ ಡಾ.ಎನ್.ಟಿ.ಶ್ರೀನಿವಾಸ್, ಹಡಗಲಿ ಶಾಸಕ ಎಲ್.ಕೃಷ್ಣ ನಾಯಕ, ಹರಪನಹಳ್ಳಿ ಶಾಸಕಿ ಎಂ.ಪಿ.ಲತಾ ಮಲ್ಲಿಕಾರ್ಜುನ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ಶಶೀಲ್ ಜಿ.ನಮೋಶಿ, ವೈ.ಎಂ.ಸತೀಶ್, ನಗರಸಭೆ ಅಧ್ಯಕ್ಷ ಎನ್.ರೂಪೇಶ್ಕುಮಾರ್, ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಹೆಚ್.ಎನ್.ಎಫ್.ಇಮಾಮ್ ನಿಯಾಜಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಕೆ.ಶಿವಮೂರ್ತಿ, ಬೆಂಗಳೂರು ಆಯುಷ್ ಇಲಾಖೆ ಆಯುಕ್ತರು ಡಾ. ಸುನಿಲ್ ಪನ್ವಾರ್, ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ, ಜಿಲ್ಲಾ ಪಂಚಾಯತ್ ಸಿಇಒ ಗರಿಮಾ ಪನ್ವರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜಾಹ್ನವಿ, ಜಿಲ್ಲಾ ಆಯುಷ್ ಅಧಿಕಾರಿ ಡಾ. ಟಿ. ಫಣಿಂಧರ ಭಾಗವಹಿಸಲಿದ್ದಾರೆ.

# ಮತದಾನ ದಿನಾಚರಣೆ ಅಂಗವಾಗಿ ಭಿತ್ತಿಚಿತ್ರ ರಚನೆ ಸ್ಪರ್ಧೆ



ಸಂಜೆವಾಣಿ ವಾರ್ತೆ

ಹೊಸಪೇಟೆ.ಸೆ.22 ಮತದಾನ ದಿನಾಚರಣೆ ಅಂಗವಾಗಿ ಚುನಾವಣಾ ಆಯೋಗದ ನಿರ್ದೇಶನದಂತೆ ಜಿಲ್ಲಾಡಳಿತ ಕೈಗೊಂಡಿರುವ ಮತದಾರರ ಜಾಗೃತಿ ಅಭಿಯಾನದ ಭಾಗವಾಗಿ ಸ್ಥಳೀಯ ಎಸ್.ಯು.ಬಿ.ಎನ್. ಥಿಯೋಸಾಫಿಕಲ್ ಮಹಿಳಾ ಕಾಲೇಜಿನಲ್ಲಿ ಸೋಮವಾರ ಕಾಲೇಜು ವಿದ್ಯಾರ್ಥಿಗಳಿಗಾಗಿ ಕಾಲೇಜು ಮಟ್ಟದ ಭಿತ್ತಿಚಿತ್ರ ರಚನೆ ಸ್ಪರ್ಧೆ ಆಯೋಜಿಸಲಾಗಿತ್ತು.

ಮತದಾನ ದಿನಾಚರಣೆ ಅಂಗವಾಗಿ ಯುವ ಮತದಾರರಲ್ಲಿ ಜಾಗೃತಿ ಮೂಡಿಸುವ ನಿಟ್ಟನಲ್ಲಿ ಥಿಯೋಸಾಫಿಕಲ್ ಮಹಿಳಾ ಕಾಲೇಜು ಹಾಗೂ ಮತದಾರರ ಸಾಕ್ಷರತಾ ಕ್ಲಬ್ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಕಾಲೇಜು ಮಟ್ಟದ ಭಿತ್ತಿಚಿತ್ರ ರಚನೆ ಸ್ಪರ್ಧೆಗೆ ಕಾಲೇಜಿನ ಪ್ರಾಂಶುಪಾಲರಾದ ಡಾ.ಅನಸೂಯ ಅಂಗಡಿ ಅವರು ಚಾಲನೆ ನೀಡಿದರು.

ಕಾರ್ಯಕ್ರಮದ ನೇತೃತ್ವ ವಹಿಸಿದ್ದ ಮತದಾರರ ಸಾಕ್ಷರತಾ ಕ್ಲಬ್ ಸಂಚಾಲಕರು ಹಾಗೂ ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಕಿಚಿಡಿ ಚನ್ನಪ್ಪ ಮಾತನಾಡಿ, ಈ ವರ್ಷ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಶೀಲನೆ ವಿಷಯದ ಮೇಲೆ ಕಾಲೇಜು ಮಟ್ಟದ ಭಿತ್ತಿಚಿತ್ರ ರಚನೆ ಸ್ಪರ್ಧೆಯನ್ನು ಏರ್ಪಡಿಸಲಾಗಿದ್ದು. ಯುವ ಮತದಾರರಲ್ಲಿ ಜಾಗೃತಿ ಮೂಡಿಸುವ ನಿಟ್ಟನಲ್ಲಿ ಚುನಾವಣಾ ಆಯೋಗ ಮತ್ತು ಜಿಲ್ಲಾಡಳಿತದ ಸೂಚನೆ ಮೇರೆಗೆ ಈ ಸ್ಪರ್ಧೆಯನ್ನು ಆಯೋಜಿಸಲಾಗಿದೆ. ಈ ಸ್ಪರ್ಧೆಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು ತಾಲೂಕು ಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.